ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ   Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ–13 | ISSUE - 126 ಸಂಚಿಕೆ– 126 | PAGE-8 ಪುಟ–8 | ಗುರುವಾರ 26.06.2025 | RS.2/- ಬೆಲೆ 2/–

# ಚುನಾವಣಾ ಆಯೋಗ ಕೇಂದ್ರ ಸರ್ಕಾರದ ಕೈಗೊಂಬೆ:ಖರ್ಗೆ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜೂ.25: ಚುನಾವಣಾ ಆಯೋಗವು ಕೇಂದ್ರ ಸರ್ಕಾರದ "ಕೈಗೊಂಬೆ"ಯಾಗಿಮಾರ್ಪಟ್ಟಿದೆಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಬುಧವಾರ ಆರೋಪಿಸಿದ್ದಾರೆ. ಅಲ್ಲದೆ ತಮ್ಮ ಪಕ್ಷವು ಚುನಾವಣೆಯಲ್ಲಿ ನಡೆಯುತ್ತಿರುವ "ಅಕ್ರಮಗಳ"ನ್ನು ಪ್ರಶ್ನಿಸುತ್ತಿದೆ. ಆದರೆ ಚುನಾವಣಾ ಆಯೋಗ ಅದನ್ನು ಕೇಳಲು ಸಿದ್ಧವಿಲ್ಲ ಎಂದು ಹೇಳಿದ್ದಾರೆ.2024ರ ಮಹಾರಾಷ್ಟ್ರ ಚುನಾವಣೆಯಲ್ಲಿನ "ಅಕ್ರಮಗಳನ್ನು"ಬಯಲು ಮಾಡಲು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅಂಕಿಅಂಶಗಳನ್ನು ಉಲ್ಲೇಖಿಸಿ ಸತ್ಯಗಳನ್ನು ಹೇಳಿದ್ದಾರೆ ಮತ್ತು ಇತರರು ಸಹ ಹಾಗೆ ಮಾಡಿದ್ದಾರೆ. ಆದರೆ ಚುನಾವಣಾ ಆಯೋಗ ಅದನ್ನು ಒಪ್ಪಿಕೊಳ್ಳಲು ಸಿದ್ಧವಿಲ್ಲ ಎಂದು ಖರ್ಗೆ ತಿಳಿಸಿದ್ದಾರೆ. ಇಂದು ಕಾಂಗ್ರೆಸ್ ಕೇಂದ್ರ ಕಚೇರಿ ಇಂದಿರಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಖರ್ಗೆ, "ಚುನಾವಣಾ ಆಯೋಗ ಸರ್ಕಾರದ ಕೈಗೊಂಬೆಯಾಗಿದೆ. ನಿಮ್ಮ ಬಳಿ ಒಂದು



ಕೈಗೊಂಬೆ(ಇಸಿ) ಇದೆ. ಹೀಗಾಗಿ ನೀವು(ಪ್ರಧಾನಿ ನರೇಂದ್ರಮೋದಿ) ಚುನಾವಣೆಗಳನ್ನು ಗೆಲ್ಲುತ್ತಿದ್ದೀರಿ ಎಂದು ಹೇಳಿಕೊಳ್ಳುತ್ತೀರಿ. ಆದರೆ ನೀವು ಚುನಾವಣೆ ಗೆಲ್ಲುತ್ತಿಲ್ಲ ನಿಮ್ಮ ಯಂತ್ರಗೆಲ್ಲುತ್ತಿದೆ" ಎಂದು ವಾಗ್ದಾಳಿ ನಡೆಸಿದರು."ನೀವು ಅದನ್ನು(ಇಸಿ) ನಿಮಗೆ ಬೇಕಾದಲ್ಲಿಗೆ ಹೋಗಲು ಬಿಡುತ್ತೀರಿ ಮತ್ತು ನೀವು ಬಯಸುವ ಸ್ಥಳದಲ್ಲಿ ಅದರ ಮೇಲೆ ಹಿಡಿತ ಸಾಧಿಸುತ್ತೀರಿ" ಎಂದು ಖರ್ಗೆ ವಿವಿಧ ರಾಜ್ಯಗಳಲ್ಲಿನ ಚುನಾವಣೆಗಳನ್ನು ಉಲ್ಲೇಖಿಸಿ ಹೇಳಿದರು."ನಾವು ಮಹಾರಾಷ್ಟ್ರದಲ್ಲಿ ಚುನಾವಣೆ ಗೆದ್ದಿದ್ದೇವೆ ಮತ್ತು ಐದು ತಿಂಗಳ ನಂತರ ಅದೇ ಸ್ಥಳದಲ್ಲಿ ಮತದಾರರ ಸಂಖ್ಯೆಯಲ್ಲಿ ಭಾರಿ ವ್ಯತ್ಯಾಸವಾಗಿದೆ. ಐದು ವರ್ಷಗಳಲ್ಲಿ, ಮತದಾರರ ಪಟ್ಟಿಯಲ್ಲಿ ಶೇಕಡಾ 2–3 ರಷ್ಟು ಹೆಚ್ಚಾಗುತ್ತದೆ. ಆದರೆ ಐದೇ ತಿಂಗಳಲ್ಲಿ ಶೇಕಡಾ 8 ರಷ್ಟು ಹೆಚ್ಚಳವಾಗಿದ್ದು ಹೇಗೆ?" ಎಂದು ಕಾಂಗ್ರೆಸ್ ಅಧ್ಯಕ್ಷರು ಪ್ರಶ್ನಿಸಿದರು."ನಾನು 13 ಚುನಾವಣೆಗಳಲ್ಲಿ ಸ್ಪರ್ಧಿಸಿದ್ದೇನೆ ಮತ್ತು ಅನೇಕ ಚುನಾವಣೆಗಳಲ್ಲಿ ಭಾಗವಹಿಸಿದ್ದೇನೆ. ಆದರೆ ಇಂತಹದ್ದನ್ನು ನಾನು ಯಾವತ್ತೂ

ನೋಡಿಲ್ಲ" ಎಂದು ಖರ್ಗೆ ಹೇಳಿದ್ದಾರೆ.ಕಾಂಗ್ರೆಸ್ ನಿರಂತರವಾಗಿ ಚುನಾವಣಾ ಅಕ್ರಮಗಳನ್ನು ಪ್ರಶ್ನಿಸುತ್ತಿದೆ. ಆದರೆ ಚುನಾವಣಾ ಆಯೋಗವು ಯಾವುದನ್ನೂ ಕೇಳಲು ಸಿದ್ಧವಿಲ್ಲ. ಏಕೆಂದರೆ ಸರ್ಕಾರ "ಎಲ್ಲೆಡೆ ನಿಯಂತ್ರಣ" ಹೊಂದಿದೆ ಎಂದು ಖರ್ಗೆ ಆರೋಪಿಸಿದರು."ಆರ್‌ಎಸ್‌ಎಸ್ ಜನರನ್ನು ಎಲ್ಲೆಡೆ ಇರಿಸಲಾಗಿದೆ ಮತ್ತು ಇತರರಿಗೆ ಅಲ್ಲಿ ಅವಕಾಶ ಇಲ್ಲ. ಚುನಾವಣಾ ಆಯೋಗವು ನಮ್ಮ ಮಾತನ್ನು ಕೇಳುತ್ತಿಲ್ಲ ಮತ್ತು ನಮಗೆ ಮತದಾರರ ಪಟ್ಟಿಯನ್ನು ನೀಡುತ್ತಿಲ್ಲ. ನೀವು ಅದನ್ನೂ ನಿಯಂತ್ರಿಸುತ್ತಿದ್ದೀರಿ" ಎಂದು ಹೇಳಿದರು.



ಹುಮನಾಬಾದ:ಜನಪ್ರಿಯ ನಾಯಕರು ,ಮಾಜಿ ಸಚಿವರಾದ ರಾಜಶೇಖರ್ ಬಿ ಪಾಟೀಲ್ ರವರು ಇಂದು ಬೆಂಗಳೂರಿನಲ್ಲಿ ಉಪಮುಖ್ಯಮಂತ್ರಿಗಳು ಹಾಗೂ ಕೆಪಿಸಿಸಿ ಅಧ್ಯಕ್ಷರಾದ ಡಿ ಕೆ ಶಿವಕುಮಾರ್ ರವರ ನಿವಾಸಕ್ಕೆ ತೆರಳಿ ಡಿ ಕೆ ಶಿವಕುಮಾರ್ ರವರಿಗೆ ಪುಷ್ಪಗುಚ್ಛ ನೀಡಿ ಶುಭ ಕೋರಿದರು. ನಂತರ ಬೀದರ ಜಿಲ್ಲೆಯ ಅಭಿವೃದ್ಧಿಯ ವಿಷಯದ ಜೊತೆಗೆ ಜಿಲ್ಲೆಯ ರಾಜಕೀಯ ಚಟುವಟಿಕೆಗಳ ಕುರಿತು ಚರ್ಚಿಸಿದರು.ಈ ಸಂದರ್ಭದಲ್ಲಿ ಮಾಜಿ ವಿಧಾನಪರಿಷತ್ ಸದಸ್ಯರಾದ ಅರವಿಂದ್ ಅರಳಿ , ಕರ್ನಾಟಕ ಪ್ರದೇಶ್ ಕಾಂಗ್ರೆಸ್ ಸಮಿತಿ ಸಹಕಾರ ಘಟಕದ ರಾಜ್ಯಾಧ್ಯಕ್ಷರಾದ ಧನರಾಜ್ ತಾಳಂಪಳ್ಳಿ, ಪ್ರಮುಖರಾದ ಪಂಡಿತ್ ಚಿದ್ರಿ, ಅಬ್ದುಲ್ ಮನ್ನಾನ್ ಶೇಟ್ ಸೇರಿದಂತೆ ಬೀದರ ಜಿಲ್ಲಾ ಕಾಂಗ್ರೆಸ್ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

# ಆಡಳಿತದಲ್ಲಿ ಕನ್ನಡವನ್ನು ಪೂರ್ಣ ಪ್ರಮಾಣದಲ್ಲಿ ಬಳಸುವಂತೆ ಸುತ್ತೋಲೆ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು : ಕನ್ನಡ ಕರ್ನಾಟಕ ರಾಜ್ಯದ ಆಡಳಿತ ಭಾಷೆಯಾಗಿ ಇರತಕ್ಕದ್ದೆಂದು ಕರ್ನಾಟಕ ರಾಜ್ಯ ಭಾಷಾ ಅಧಿನಿಯಮ 1963ರಲ್ಲಿ ತಿಳಿಸಲಾಗಿದೆ. ಕನ್ನಡದಲ್ಲಿ ಬರುವ ಅರ್ಜಿ ಮತ್ತು ಪತ್ರಗಳಿಗೆ ಕಡ್ಡಾಯವಾಗಿ ಕನ್ನಡದಲ್ಲಿಯೇ ಉತ್ತರಿಸಬೇಕು. ಸರ್ಕಾರಿ ಕಛೇರಿಗಳ ನಾಮಫಲಕಗಳನ್ನು ಕನ್ನಡದಲ್ಲಿಯೇ ಪ್ರದರ್ಶಿಸಬೇಕು.




ವಿಧಾನಮಂಡಲದ ಕಾರ್ಯಕಲಾಪಗಳು, ಪತ್ರವ್ಯವಹಾರ, ಗಮನಸೆಳೆಯುವ ಸೂಚನೆ ಇತ್ಯಾದಿಗಳು ಕಡ್ಡಾಯವಾಗಿ ಕನ್ನಡದಲ್ಲಿಯೇ ಸಲ್ಲಿಸಲು ತಿಳಿಸಲಾಗಿದೆ. ನೇಮಕಾತಿ, ವರ್ಗಾವಣೆ ಮತ್ತು ರಜೆ ಮಂಜೂರಾತಿ ಇತರೆ ಎಲ್ಲಾ ಸರ್ಕಾರದ ಆದೇಶಗಳನ್ನು ಕನ್ನಡದಲ್ಲಿ ಹೊರಡಿಸಲು ಸ್ಪಷ್ಟವಾಗಿ ಸೂಚನೆಗಳನ್ನು ನೀಡಲಾಗಿದೆ. ಕಛೇರಿಗಳಿಗೆ ಒದಗಿಸಿರುವ ಆಂಗ್ಲ

(2ನೇ ಪುಟ ನೋಡಿ)

# ಸಿಬಿಎಸ್‌ಸಿಯಲ್ಲಿ ಮಹತ್ವದ ಬದಲಾವಣೆ : ವರ್ಷಕ್ಕೆ 2 ಬಾರಿ 10ನೇ ತರಗತಿ ಪರೀಕ್ಷೆ ನಡೆಸಲು ನಿರ್ಧಾರ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜೂ.25: ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ 2026ರಿಂದ ವರ್ಷಕ್ಕೆ ಎರಡು ಬಾರಿ 10ನೇ ತರಗತಿ ಪರೀಕ್ಷೆಗಳನ್ನು ನಡೆಸಲು ನಿರ್ಧರಿಸಿದೆ.

ಮಾಹಿತಿಗಳ ಪ್ರಕಾರ, ಫೆಬ್ರವರಿಯಲ್ಲಿ ನಡೆಯಲಿರುವ ಮೊದಲ ಹಂತದ ಪರೀಕ್ಷೆಯು 10ನೇ ತರಗತಿ ವಿದ್ಯಾರ್ಥಿಗಳಿಗೆ ಕಡ್ಡಾಯವಾಗಿರುತ್ತದೆ. ಮೇ ತಿಂಗಳಲ್ಲಿ ನಿಗದಿಯಾಗಿರುವ ಎರಡನೇ ಹಂತದ ಪರೀಕ್ಷೆ ತಮ್ಮ ಕಾರ್ಯಕ್ಷಮತೆಯನ್ನು ಸುಧಾರಿಸಲು ಬಯಸುವ ವಿದ್ಯಾರ್ಥಿಗಳಿಗೆ ಐಚ್ಛಿಕವಾಗಿರುತ್ತದೆ. ಶೈಕ್ಷಣಿಕ ಅವಧಿಯಲ್ಲಿ ಆಂತರಿಕ ಮೌಲ್ಯಮಾಪನವನ್ನು ಒಮ್ಮೆ ಮಾತ್ರ ನಡೆಸಲಾಗುತ್ತದೆ ಎಂದು ಸಿಬಿಎಸ್‌ಇ ತಿಳಿಸಿದೆ.




ಈ ಕುರಿತು ಸಿಬಿಎಸ್‌ಇ ಪರೀಕ್ಷಾ ನಿಯಂತ್ರಕ ಸಂಯಮ್ ಭಾರದ್ವಾಜ್ ಮಾತನಾಡಿ, ಮೊದಲ ಹಂತ ಫೆಬ್ರವರಿಯಲ್ಲಿ ಮತ್ತು ಎರಡನೇ ಹಂತ ಮೇ ತಿಂಗಳಲ್ಲಿ ನಡೆಯಲಿದೆ. ಎರಡು ಹಂತಗಳ ಫಲಿತಾಂಶಗಳನ್ನು ಕ್ರಮವಾಗಿ ಏಪ್ರಿಲ್ ಮತ್ತು ಜೂನ್‌ನಲ್ಲಿ ಪ್ರಕಟಿಸಲಾಗುವುದು ಎಂದು ತಿಳಿಸಿದ್ದಾರೆ.ವಿದ್ಯಾರ್ಥಿಗಳಿಗೆ ಮೊದಲ ಹಂತಕ್ಕೆ ಹಾಜರಾಗುವುದು ಕಡ್ಡಾಯವಾಗಿರುತ್ತದೆ. ಆದರೆ ಎರಡನೇ ಹಂತವು ಐಚ್ಛಿಕವಾಗಿರುತ್ತದೆ. ವಿಜ್ಞಾನ, ಗಣಿತ, ಸಮಾಜ ವಿಜ್ಞಾನ ಮತ್ತು ಇನ್ನೂ ಭಾಷೆಗಳಲ್ಲಿ ಯಾವುದೇ ಮೂರು ವಿಷಯಗಳಲ್ಲಿ ವಿದ್ಯಾರ್ಥಿಗಳು ತಮ್ಮ ಕಾರ್ಯಕ್ಷಮತೆಯನ್ನು ಸುಧಾರಿಸಲು ಅವಕಾಶ ನೀಡಲಾಗುವುದು ಎಂದು ಹೇಳಿದರು. ಕಳೆದ ತಿಂಗಳು, ಈ ಕುರಿತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು, ಒತ್ತಡರಹಿತ ಕಲಿಕೆಯ ವಾತಾವರಣವನ್ನು ಸೃಷ್ಟಿಸಲು ಈ ನಿರ್ಧಾರವನ್ನು ಕೈಗೊಳ್ಳಲಾಗಿದೆ. ಈ ಮೂಲಕ ವಿದ್ಯಾರ್ಥಿಗಳು ಉತ್ತಮ ಅಂಕಗಳನ್ನು ಗಳಿಸಬಹುದಾಗಿದೆ. ಈ ನಿರ್ಧಾರ ರಾಷ್ಟ್ರೀಯ ಶಿಕ್ಷಣ ನೀತಿಯ ಪ್ರಮುಖ ಹೆಜ್ಜೆಯಾಗಿದೆ ಎಂದರು.

# ದೇಶದಲ್ಲಿಗ ಅಘೋಷಿತ ತುರ್ತು ಪರಿಸ್ಥಿತಿ : ಮಲ್ಲಿಕಾರ್ಜುನ ಖರ್ಗೆ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜೂ.25: ದೇಶದಲ್ಲಿ ಈಗ ಅಘೋಷಿತ ತುರ್ತು ಪರಿಸ್ಥಿತಿಯನ್ನು ಎದುರಿಸುತ್ತಿದ್ದೇವೆ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಬುಧವಾರ ಹೇಳಿದ್ದಾರೆ.

ಎಐಸಿಸಿ ಕೇಂದ್ರ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮ್ಮ 'ಸಂವಿಧಾನ ಬಚಾವೋ ಯಾತ್ರೆ'ಯಿಂದ ದಿಕ್ಕೆಟ್ಟಿದ್ದ ಬಿಜೆಪಿ 50 ವರ್ಷಗಳ ಹಿಂದಿನ ತುರ್ತು ಪರಿಸ್ಥಿತಿಯ ಬಗ್ಗೆ ಮಾತನಾಡತೊಡಗಿದ್ದಾರೆ.

ತಮ್ಮ ಅಧಿಕಾರಾವಧಿಯಲ್ಲಿ ಹೆಚ್ಚಿನದನ್ನು ಮಾಡಲು ಸಾಧ್ಯವಾಗದವರೂ



ನಿರುದ್ಯೋಗ, ಹಣದುಬ್ಬರ, ನೋಟು ಅಮಾನ್ಯೀಕರಣದಂತಹ ಸಮಸ್ಯೆಗಳ ಬಗ್ಗೆ ಉತ್ತರ ನೀಡಲಾಗದವರು ತಮ್ಮ ವೈಫಲ್ಯಗಳನ್ನು ಮುಚ್ಚಿಡಲು ಹಾಗೂ ಪದೇ ಪದೇ ಸುಳ್ಳುಗಳನ್ನು ಹೇಳಿ ಸಂವಿಧಾನ ಹತ್ಯೆ ದಿವಸ್ ಅಂತಾ ಆಚರಿಸುತ್ತಿದ್ದಾರೆ ಎಂದು ಟೀಕಾ ಪ್ರಹಾರ ನಡೆಸಿದರು.

ತುರ್ತು ಪರಿಸ್ಥಿತಿಯ 50ನೇ ವರ್ಷವನ್ನು ಸಂವಿಧಾನ್ ಹತ್ಯಾ ದಿವಸ್ ಎಂದು ಆಚರಿಸುವಂತೆ ಎಲ್ಲ ರಾಜ್ಯಗಳಿಗೂ ಪ್ರಧಾನಿ ಮೋದಿ ಸರ್ಕಾರದ ಪರವಾಗಿ ಸುತ್ತೋಲೆ ಹೊರಡಿಸಿದ್ದಾರೆ. ಈಗ ಸಂವಿಧಾನ ಉಳಿಸುವ ಬಗ್ಗೆ ಮಾತನಾಡುತ್ತಿರುವವರು ಮುಗಿದು ಹೋಗಿರುವ ವಿಚಾರವನ್ನು ಪ್ರಸ್ತಾಪಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಕಿಡಿಕಾರಿದರು. ಭಾರತದ ಸ್ವಾತಂತ್ರ್ಯ ಚಳವಳಿಯಲ್ಲಿ ಯಾವುದೇ ಕೊಡುಗೆ ನೀಡದವರು ಈಗ ಸಂವಿಧಾನ ರಚನೆಯ ಬಗ್ಗೆ ಮಾತನಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

# ಸಿದ್ಧರಾಮಯ್ಯ ಅವರಂತಹ ಭ್ರಷ್ಟ ರಾಜಕಾರಣಿ ಮತ್ತೊಬ್ಬರಿಲ್ಲ: ಛಲವಾದಿ ನಾರಾಯಣಸ್ವಾಮಿ

ಮಲ್ಲಮ್ಮ ನುಡಿ ವಾರ್ತೆ ಬೀದರ. ಜೂ. 25 : ಸಿಎಂ ಸಿದ್ಧರಾಮಯ್ಯ ಅವರನ್ನು ಒಳ್ಳೆಯ ರಾಜಕಾರಣಿ ಎಂದು ತಿಳಿದುಕೊಂಡಿದ್ದೆವು. ಆದರೆ, ಅವರಂತಹ ಭ್ರಷ್ಟ ರಾಜಾಕರಣಿ ಮತ್ತೊಬ್ಬರಿಲ್ಲ ಎಂಬುದನ್ನು ಈ ಬಾರಿ ಸಾಬೀತು ಮಾಡಿದ್ದಾರೆ ಎಂದು ವಿರೋಧಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದರು. ನಗರದಲ್ಲಿ ಬುಧವಾರ (ಜೂ.25) ಸುದ್ದಿಗಾರರ ಜತೆ ಮಾತನಾಡಿದ ಅವರು, ಸಿದ್ದರಾಮಯ್ಯ ನಾಚಿಕೆಗೆಟ್ಟ ವ್ಯಕ್ತಿ ಎಂಬುದನ್ನು ತೋರಿಸಿಕೊಟ್ಟಿದ್ದಾರೆ.



ಭ್ರಷ್ಟಾಚಾರ ನಡೆದಿದೆ ಎಂದು ಹೇಳಿದರೆ, ಅವರನ್ನು ಕರೆದು ಮಾತನಾಡುತ್ತೇನೆ ಎನ್ನುತ್ತಾರೆ ಎಂದರು. ರಾಜ್ಯ ಸರ್ಕಾರ ಪಾಪರ್ ಆಗಿದೆ. ಮೂರು ಕಾಸು ಇಲ್ಲ, ಬಂದ ಹಣ ಎಲ್ಲಿಗೆ ಹೋಗುತ್ತಿದೆ ಎಂಬುದು ಗೊತ್ತಿಲ್ಲ. ದೇಶದಲ್ಲಿ ಕಾಂಗ್ರೆಸ್ ಪಕ್ಷವನ್ನು ನಡೆಸಲು ಹಣ ಇಲ್ಲ, ಹೀಗಾಗಿ ಕರ್ನಾಟಕವನ್ನು ಕಾಂಗ್ರೆಸ್ ಎಟಿಎಂ ಮಾಡಿಕೊಂಡಿದೆ ಎಂದು ಆರೋಪಿಸಿದರು.

ಗ್ಯಾರಂಟಿ ಯೋಜನೆಗಳ ಲಾಭ ಮೂರ್ನಾಲ್ಕು ತಿಂಗಳಾದರೂ ಸಿಗುತ್ತಿಲ್ಲ. ಈ ಬಗ್ಗೆ ಕೇಳಿದರೆ

(2ನೇ ಪುಟ ನೋಡಿ)

# ಜೈ ಹಿಂದ್.. ಜೈ ಭಾರತ್: ಶುಭಾಂಶು ಶುಕ್ಲಾ ಮೊದಲ ಸಂದೇಶ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜೂ.25:ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಆಕ್ಸಿಯಮ್–4 ಮಿಷನ್‌ಗಾಗಿ ಐತಿಹಾಸಿಕ ಬಾಹ್ಯಾಕಾಶ ಯಾತ್ರೆ ಕೈಗೊಂಡ ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ ಭಾರತದ ಜನತೆ ಜೊತೆ ತಮ್ಮ ಮೊದಲ ಸಂದೇಶ ಹಂಚಿಕೊಂಡಿದ್ದಾರೆ. ಸ್ಪೇಸ್‌ಎಕ್ಸ್‌ನ 'ಫಾಲ್ಕನ್–9' ರಾಕೆಟ್ ಬಾಹ್ಯಾಕಾಶಕ್ಕೆ ಹಾರುತ್ತಿದ್ದಂತೆ, ಮಿಷನ್‌ನ ಪೈಲಟ್ ಆಗಿರುವ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರು ಭಾರತವನ್ನುದ್ದೇಶಿಸಿ 'ನಮಸ್ಕಾರ' ಎಂಬ ಪದದೊಂದಿಗೆ ಮಾತು ಆರಂಭಿಸಿದರು. 'ನನ್ನ ಪ್ರೀತಿಯ ದೇಶವಾಸಿಗಳೇ, ನಮಸ್ಕಾರ.. 41 ವರ್ಷಗಳ ನಂತರ ನಾವು ಬಾಹ್ಯಾಕಾಶವನ್ನು ತಲುಪಿದ್ದೇವೆ. ಇದು ಒಂದು ಉತ್ತಮ ಸವಾರಿಯಾಗಿತ್ತು. ಎಂದು ಶುಭಾಂಶು ಶುಕ್ಲಾ ಭಾರತಕ್ಕಾಗಿ ತಮ್ಮ ಆರಂಭಿಕ ಹೇಳಿಕೆಯಲ್ಲಿ ತಿಳಿಸಿದ್ದಾರೆ. ರಾಕೆಟ್ ಸೆಕೆಂಡಿಗೆ 4.5 ಕಿ.ಮೀ ವೇಗದಲ್ಲಿ ಭೂಮಿಯ ಸುತ್ತಲೂ ಹಾರುತ್ತಿದೆ ಎಂದು ಅವರು ಮಾಹಿತಿ ಹಂಚಿಕೊಂಡಿದ್ದಾರೆ. ನನ್ನ ಭುಜದಲ್ಲಿ ಭಾರತೀಯ ತ್ರಿವರ್ಣ ಧ್ವಜವಿದೆ. ಧ್ವಜವು ಬಾಹ್ಯಾಕಾಶ ಹಾರಾಟದಲ್ಲಿ ಭಾರತವೇ ನನ್ನ ಜೊತೆಗಿದೆ ಎಂಬುದನ್ನು ನೆನಪಿಸುತ್ತದೆ. ಇದು ಐಎಸ್‌ಎಸ್‌ಗೆ ನನ್ನ ಪ್ರಯಾಣದ ಆರಂಭ ಮಾತ್ರವಲ್ಲ, ಭಾರತದ ಮಾನವ ಬಾಹ್ಯಾಕಾಶ ಹಾರಾಟದ ಆರಂಭವೂ ಆಗಿದೆ. ನೀವು ಪ್ರತಿಯೊಬ್ಬರೂ ಈ ಪ್ರಯಾಣದ ಭಾಗವಾಗಬೇಕೆಂದು ನಾನು ಬಯಸುತ್ತೇನೆ. ಭಾರತದ ಮಾನವ ಬಾಹ್ಯಾಕಾಶ ಕಾರ್ಯಕ್ರಮವನ್ನು ಒಟ್ಟಿಗೆ ಪ್ರಾರಂಭಿಸೋಣ ಎಂದು ಎಂದಿದ್ದಾರೆ. ಶುಭಾಂಶು ಶುಕ್ಲಾ ತನ್ನ ಸಂದೇಶದ ಕೊನೆಗೆ ಜೈ ಹಿಂದ್.. ಜೈ ಭಾರತ್.. ಎಂದು ಹೇಳಿದ್ದಾರೆ.

# ಕಳಪೆ ಬೀಜ ಹಾಗೂ ನಕಲಿ ರಸಗೊಬ್ಬರ ಮಾರಾಟಗಾರರ ಮೇಲೆ ಪೊಲೀಸ್ ಕೇಸ್: ಜಿಲ್ಲಾಧಿಕಾರಿ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ, ಜೂ 25 : ಕಳಪೆ ಬೀಜ ಹಾಗೂ ನಕಲಿ ರಸಗೊಬ್ಬರ ಮಾರಾಟ ಕುರಿತಂತೆ ರೈತರಿಂದ ದೂರು ಕೇಳಿಬಂದಲ್ಲಿ ತಕ್ಷಣವೇ ಪೊಲೀಸ್ ದೂರು ದಾಖಲಿಸಿ, ಸಂಬಂಧಿಸಿದ ಅಧಿಕಾರಿಗಳು ಕಾಲ–ಕಾಲಕ್ಕೆ ಖಾಸಗಿ ಅಥವಾ ಯಾವುದೇ ವಿತರಕರ ಅಂಗಡಿಗಳಿಗೆ ಅಚಾನಕ್ಕಾಗಿ ಭೇಟಿ ನೀಡುವ ಮೂಲಕ ಪರಿಶೀಲಿಸಬೇಕು, ರೈತರಿಗೆ ಯಾವುದೇ ತೊಂದರೆಯಾದ ದೂರುಗಳು ಬಂದಲ್ಲಿ ತಕ್ಷಣವೇ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಫೌಜಿಯಾ ತರುನ್ನಮ್ ಅವರು ಅಧಿಕಾರಿಗಳಿಗೆ ಸೂಚಿಸಿದರು. ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಕೃಷಿಸಂಬಂಧಿತ ಇಲಾಖೆಗಳ ಸಭೆಯ ಅಧ್ಯಕ್ಷತೆವಹಿಸಿ ಅವರು 2025–26ನೇ ಸಾಲಿನ ಕೃಷಿ ಇಲಾಖೆಯ ಕೇಂದ್ರಪುರಸ್ಕೃತ ಯೋಜನೆಗಳ ಕೃಷಿಯಾತ್ರೀಕರಣ



ಉಪ ಅಭಿಯಾನ, ಸೂಕ್ಷ್ಮ ನೀರಾವರಿ ಅನುಷ್ಠಾನ, ಕಬ್ಬಿನ ಬೆಳೆ ಹಾಗೂ ಬೆಳೆ ಸಮೀಕ್ಷೆ ಕ್ರಿಯಾ ಯೋಜನೆ ಅನುಮೋದನೆ ಸೇರಿದಂತೆ ಜಿಲ್ಲೆಯ ಕೃಷಿ ಮತ್ತು ರೈತರ ಸಮಸ್ಯೆಗಳ ಕುರಿತು ಚರ್ಚಿಸಿದರು.

ವಿವಿಧ ಇಲಾಖೆಗಳ ವರದಿಯನ್ನು ಪರಿಶೀಲಿಸಿ ನಂತರ ಮಾತನಾಡಿದ ಅವರು ಮುಂಗಾರು ಆರಂಭವಾಗಿರುವ ಹಿನ್ನಲೆಯಲ್ಲಿ ಬಿತ್ತನೆ ಬೀಜಗಳಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಪ್ರತಿ ತಾಲ್ಲೂಕಿಗೆ ಯಾವುದೇ ದೂರುಗಳಿಲ್ಲದೆ ವಿತರಿಸಬೇಕು. ಸೋಯಬೀನ್ ಬಿತ್ತನೆ ಬೀಜಗಳ ಸಮಸ್ಯೆಯನ್ನು ಶೀಘ್ರದಲ್ಲಿ ಬಗೆಹರಿಸಬೇಕು, ರಸಗೊಬ್ಬರ ಸಹ ಸಾಕಷ್ಟು ಪ್ರಮಾಣದಲ್ಲಿ ಕಾದಿರಿಸಬೇಕು ಎಂದು ಹೇಳಿದರು.

ರೈತರಿಗೆ ರಸಗೊಬ್ಬರ ಬಳಕೆ, ಒಂದೇ ತರಹದ ಬೆಳೆ ಬೆಳೆಯಬಾರದು ಎಂಬುದನ್ನು ತಿಳಿ ಹೇಳಬೇಕು, ಸ್ಥಳೀಯ ಮಾದರಿ ರೈತರೊಂದಿಗೆ ನೇರವಾಗಿ ಹಳ್ಳಿಗಳಿಗೆ ಹೋಗಿ ಚಿಕ್ಕ ರೈತರಿಗೆ ಬೆಳೆಗಳನ್ನು ಬದಲಾಯಿಸುವ ಮತ್ತು ಬೆಳೆಯುವ ಕುರಿತು ಅರಿವು ಮೂಡಿಸಬೇಕು. ಸರ್ಕಾರದ ವಿವಿಧ ಯೋಜನೆಗಳ ಅಡಿ ರೈತರಿಗೆ ವಿತರಿಸುವ ಕೃಷಿ ಸಂಬಂಧಿತ ಯಂತ್ರಗಳು ಸೇರಿದಂತೆ ಹನಿ ನೀರಾವರಿ, ಸ್ಪಿಂಕಲರ್ ಹಾಗೂ ಇತರೆ ರೈತಸ್ನೇಹಿ ಸಲಕರಣೆಗಳ

(2ನೇ ಪುಟ ನೋಡಿ)

# ಹಳೆ ವೈಷಮ್ಯ:ಡಾಭಾದಲ್ಲಿ ತ್ರಿವಳಿ ಕೊಲೆ:7 ಜನರ ಬಂಧನ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಜೂ.25: ನಗರದ ಹೊರವಲಯದ ಪಟ್ಟಣ ಗ್ರಾಮದ ಸಮೀಪದ ಡ್ರೈವರ್ ಧಾಬಾ ಬಳಿ ಮಾರಕಾಸ್ತ್ರಗಳಿಂದ ಕೊಚ್ಚಿ ಮೂವರನ್ನು ಹತ್ಯೆ ಮಾಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ 7 ಮಂದಿ ಆರೋಪಿಗಳನ್ನು ಬಂಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ ತಿಳಿಸಿದ್ದಾರೆ.

ಹತ್ಯೆಗೆ ಸಂಬಂಧಿಸಿದಂತೆ 11 ಮಂದಿ ವಿರುದ್ಧ ದೂರು ದಾಖಲಾಗಿದ್ದು, 7 ಮಂದಿಯನ್ನು ವಶಕ್ಕೆ ಪಡೆದು, ತನಿಖೆ ನಡೆಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಹಳೆಯ ದ್ವೇಷದ ಕಿಚ್ಚಿನಲ್ಲಿ ಒಂದೇ ಕುಟುಂಬದ ಮೂವರನ್ನು ದುಷ್ಕರ್ಮಿಗಳು ಮಾರಾಕಾಸ್ತ್ರಗಳಿಂದ ಕೊಚ್ಚಿಕೊಂದು ಹಾಕಿದ ಭಯಾನಕ ಘಟನೆ ಪಟ್ಟಣ ಗ್ರಾಮದ ಡ್ರೈವರ್ ಧಾಬಾ ಬಳಿ ಕಳೆದ ರಾತ್ರಿ ನಡೆದಿತ್ತು.

ಸಿದ್ದಾರೂಢ (32) , ಜಗದೀಶ್ (25) , ರಾಮಚಂದ್ರ (35) ಕೊಲೆಗೀಡಾದವರಾಗಿದ್ದರು.

ಧಾಬಾದಲ್ಲಿ ಕೆಲಸ ಮಾಡುತ್ತಿದ್ದ ವೇಳೆ ಡ್ರೈವರ್ ಧಾಬಾಗೆ ನುಗ್ಗಿದ ದುಷ್ಕರ್ಮಿಗಳು ಮಾರಾಕಾಸ್ತ್ರಗಳಿಂದ ಕೊಚ್ಚಿ ಮೂವರನ್ನೂ ಹತ್ಯೆಗೈದು ಪರಾರಿಯಾಗಿದ್ದಾರೆ.

ಕೊಲೆಗೆ ಕಾರಣ:

ಎರಡು ಬಿಯರ್ ಬಿಲ್ ವಿಚಾರಕ್ಕೆ ನಡೆದ ಗಲಾಟೆಯಲ್ಲಿ ಸೋಮು ರಾಠೋಡ್ ಎಂಬಾತ ಧಾಬಾ ಮಾಲೀಕನ ಮೇಲೆ ಈ ಹಿಂದೆ ಹಲ್ಲೆ ಮಾಡಿದ್ದ. ಈ ಘಟನೆ ಬಳಿಕ ಧಾಬಾ ಮಾಲೀಕ ಹಾಗೂ ಆತನ ಸಹಚರರು ಒಂದಾಗಿ ಸೋಮು ರಾಠೋಡನನ್ನು ನ.12, 2024ರಂದು ಧಾಬಾಕ್ಕೆ ಕರೆಸಿಕೊಂಡು ಹತ್ಯೆಗೈದಿದ್ದರು. ಸಾಲದೆಂಬಂತೆ, ಶವವನ್ನು ಬೈಕ್ ಹಿಂಭಾಗದಲ್ಲಿ ಬಿಗಿದು ಕಲಬುರಗಿ ಹೊರವಲಯದವರೆಗೆ ಎಳೆದೊಯ್ದು ಬಿಸಾಡಿದ್ದರು. ಈ ಕೊಲೆ ಆರೋಪಕ್ಕೆ ಸಂಬಂಧಿಸಿದಂತೆ ಧಾಬಾ ಮಾಲೀಕ ಸೇರಿ ಆತನ ಸಹಚರರು ಕಲಬುರಗಿ ಸೆಂಟ್ರಲ್ ಜೈಲು ಸೇರಿದ್ದರು

(2ನೇ ಪುಟ ನೋಡಿ)

ಒಂದನೇ ಪುಟದಿಂದ

# ಪ್ರಮಾಣದಲ್ಲಿ ಬಳಸುವಂತೆ ಸುತ್ತೋಲೆ

ಭಾಷಾ ನಮೂನೆ, ದಾಖಲೆ ಪುಸ್ತಕ ಮುಂತಾದವುಗಳನ್ನು ಕನ್ನಡದಲ್ಲಿ ಭರ್ತಿ ಮಾಡುವಂತೆ, ಆಂತರಿಕ ಪತ್ರ ವ್ಯವಹಾರ, ಕಡತದ ಟಿಪ್ಪಣಿ ಕನ್ನಡದಲ್ಲಿಯೇ ಇರುವಂತೆ ತಿಳಿಸಲಾಗಿದೆ. ಸಭಾ ಸೂಚನೆ, ಕಾರ್ಯಸೂಚಿ, ಸಂಕ್ಷಿಪ್ತ ಟಿಪ್ಪಣಿ ಹಾಗೂ ನಡವಳಿಗಳನ್ನು ಕನ್ನಡದಲ್ಲಿ ತಯಾರಿಸಿ ಸರ್ಕಾರದ ಭಾಷಾ ನೀತಿಯನ್ನು ಯಶಸ್ವಿಯಾಗಿ ಕಾರ್ಯರೂಪಕ್ಕೆ ತರುವುದನ್ನು ಈಗಾಗಲೇ ಸುತ್ತೋಲೆಯಲ್ಲಿ ತಿಳಿಸಲಾಗಿದೆ. ಕೇಂದ್ರ ಸರ್ಕಾರ, ಹೊರ ರಾಜ್ಯಗಳು ಮತ್ತು ನ್ಯಾಯಾಲಯಗಳ ಪತ್ರ ವ್ಯವಹಾರಗಳನ್ನು ಹೊರತುಪಡಿಸಿ, ಉಳಿದೆಲ್ಲಾ ಪತ್ರ ವ್ಯವಹಾರಗಳು ಕಡ್ಡಾಯವಾಗಿ ಕನ್ನಡದಲ್ಲಿಯೇ ಇರುವಂತೆ ಸೂಚಿಸಲಾಗಿದೆ.

ಸರ್ಕಾರಿ ಪತ್ರವ್ಯವಹಾರಗಳಲ್ಲಿ ಕಡತದ ಟಿಪ್ಪಣಿಗಳನ್ನು ಕನ್ನಡದಲ್ಲಿ ಮಾಡುವಂತೆ ಸೂಚಿಸಿದ್ದರೂ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸದಿರು ವುದನ್ನು ಗಮನಿಸಿದ ಸನ್ಮಾನ್ಯ ಮುಖ್ಯಮಂತ್ರಿಯವರು ಕಡತದಲ್ಲಿನ ಟಿಪ್ಪಣಿ ಮತ್ತು ಪತ್ರ ವ್ಯವಹಾರಗಳು ಕನ್ನಡದಲ್ಲಿ ಬಾರದಿದ್ದ ಪಕ್ಷದಲ್ಲಿ ಅಂತಹ ಕಡತಗಳನ್ನು ಹಿಂದಿರುಗಿಸಿ ಸೂಕ್ತ ಸಮಜಾಯಿಷಿ ಪಡೆಯಲು ನಿರ್ದೇಶನ ನೀಡಿರುತ್ತಾರೆ. ಆಡಳಿತದಲ್ಲಿ ಭಾಷಾ ನೀತಿಯನ್ನು ಪೂರ್ಣ ಪ್ರಮಾಣದಲ್ಲಿ ಹಾಗೂ ಎಲ್ಲಾ ಹಂತಗಳಲ್ಲಿ ಜಾರಿಗೊಳಿಸುವುದು ಎಲ್ಲ ಅಧಿಕಾರಿಗಳ ನೌಕರರ ಕರ್ತವ್ಯವಾಗಿದೆ. ಆದುದರಿಂದ ಈಗಾಗಲೇ ಹೊರಡಿಸಿರುವ ಸರ್ಕಾರಿ ಆದೇಶಗಳಲ್ಲಿ ನೀಡಿರುವ ಸೂಚನೆಗಳನ್ನು ಸರಕಾರ/ನಿಗಮ/ಮಂಡಳಿ/ಸ್ಥಳೀಯ ಸಂಸ್ಥೆಗಳ/ ವಿಶ್ವವಿದ್ಯಾಲಯಗಳ/ ಅನುದಾನಿತ ಸಂಘ-ಸಂಸ್ಥೆಗಳ ಎಲ್ಲಾ ಅಧಿಕಾರಿ/ ನೌಕರರು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು ಎಂದು ಮತ್ತೊಮ್ಮೆ ಪುನರುಚ್ಚರಿಸಲಾಗಿದೆ.

ಇತ್ತೀಚೆಗೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕೆಡಿಪಿ ಸಭೆಯ ಕಾರ್ಯಸೂಚಿಯನ್ನು ಆಂಗ್ಲ ಭಾಷೆಯಲ್ಲಿ ಹೊರಡಿಸಿರುತ್ತಾರೆಂದು ಹಾಗೂ ವಿಶೇಷವಾಗಿ ಕಾಮಗಾರಿ ಇಲಾಖೆಗಳು ತಮ್ಮೆಲ್ಲ ಮಾಹಿತಿಗಳನ್ನು ಆಂಗ್ಲ ಭಾಷೆಯಲ್ಲಿ ಮಂಡಿಸುತ್ತಿದೆ. ಇದನ್ನು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ

ಗಳು ಅನುಮೋದಿಸುತ್ತಿದ್ದಾರೆಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ವರದಿ ಮಾಡಿರುತ್ತಾರೆ.

ಕನ್ನಡ ಭಾಷೆಯಲ್ಲಿಯೇ ಆಡಳಿತ ನಡೆಸುವ ಬಗ್ಗೆ ಈಗಾಗಲೇ ಹಲವಾರು ಬಾರಿ ಸೂಚನೆಗಳನ್ನು ನೀಡಿ ಸುತ್ತೋಲೆಗಳನ್ನು ಹೊರಡಿಸಿದ್ದರೂ ಸಹ ಪಾಲನೆಯಾಗದೇ ಇರುವ ಬಗ್ಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ವರದಿ ಮಾಡುತ್ತಲೇ ಬಂದಿದೆ.

ಈ ಹಿನ್ನೆಲೆಯಲ್ಲಿ ಮೇಲ್ಕಂಡ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು. ಸದರಿ ಸೂಚನೆಗಳನ್ನು ಉಲ್ಲಂಘಿಸಿದವರ ವಿರುದ್ಧ ವೈಯಕ್ತಿಕವಾಗಿ ಶಿಸ್ತು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಮತ್ತೊಮ್ಮೆ ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು,

ಎಲ್ಲಾ ಇಲಾಖಾ ಮುಖ್ಯಸ್ಥರುಗಳು , ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಮತ್ತು ಎಲ್ಲಾ ಜಿಲ್ಲೆಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಜೂನ್ 24 ರ ಸುತ್ತೋಲೆಯಲ್ಲಿ ತಿಳಿಸಿದ್ದಾರೆ.

## ಮಾರಾಟಗಾರರ ಮೇಲೆ ಪೊಲೀಸ್ ಕೇಸ್: ಜಿಲ್ಲಾಧಿಕಾರಿ

ಕುರಿತ ಅರ್ಜಿಗಳ ತ್ವರಿತ ವಿಲೇವಾರಿಯಾಗಬೇಕು.

ನವ ಮಾಧ್ಯಮವನ್ನು ಬಳಸಿಕೊಂಡು ಮಾದರಿ ರೈತರ ಕುರಿತು ಚಿಕ್ಕ ವಿಡಿಯೋಗಳನ್ನು ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡಲ್ಲಿ ಇತರೆ ರೈತರಿಗೆ ಸ್ಪೂರ್ತಿಯಾಗುತ್ತದೆ. ಈಗಂತೂ ಪ್ರತಿಯೊಬ್ಬರು ಸಾಮಾಜಿಕ ಜಾಲತಾಣಗಳನ್ನು ಬಳಸುತ್ತಿರುವ ಕಾಲದಲ್ಲಿ ಅವುಗಳನ್ನು ಬಳಸಿಕೊಂಡು ಪ್ರಚಾರ ಕೈಗೊಳ್ಳಬೇಕು.

ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಯೋಜನೆಯಡಿ ರೈತರ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡಿ ಅವರಿಗೆ ಟ್ರಾಕ್ಟರ್, ಪವರ್ ಟಿಲ್ಲರ್, ನೇಗಿಲು, ರೊಟೋವೇಟರ್ ನೀಡಲು ಕ್ರಮಕೈಗೊಳ್ಳಿ, ಶೇ 100% ರಷ್ಟು ಸಾಧನೆ ಮಾಡಿದಲ್ಲಿ ಸರ್ಕಾರದಿಂದ ಹೆಚ್ಚುವರಿಯಾಗಿ ಟಾರ್ಗೆಟ್ ಪಡೆದು ಕೆಲಸ ಮಾಡೋಣ. ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಸರ್ಕಾರದ ಯೋಜನೆಗಳ ಲಾಭ ಪಡೆದು ಅತ್ಯುತ್ತಮ ರೈತರಾಗಿ ದುಡಿಯುತ್ತಿರುವವರನ್ನು ಗುರುತಿಸಬೇಕು. ಅವರ ಹೊಲಗಳಿಗೆ ಕೃಷಿ ಅಧಿಕಾರಿಗಳು ನೇರವಾಗಿ ಬೇಟಿ ನೀಡಿ ಸ್ಥಳೀಯರೊಂದಿಗೆ ಚಿಕ್ಕದಾಗಿ ಸಂವಾದವನ್ನು ಹಮ್ಮಿಕೊಳ್ಳಬೇಕು.

ಮುಂಗಾರು ವಾಡಿಕೆಗಿಂತ ಈ ವರ್ಷ ಮುಂಚಿತವಾಗಿಯೇ ಪ್ರಾರಂಭವಾಗಿದ್ದು, ಜಿಲ್ಲೆಯಲ್ಲಿ ಬೆಳೆ ಸಮೀಕ್ಷೆಗೆ ಮತ್ತು ಬೆಳೆ ವಿಮೆಗಳಿಗೆ ಸಂಬಂಧಿಸಿದಂತೆ ರೈತರಲ್ಲಿ ಅರಿವು ಮೂಡಿಸಬೇಕು, ಬೆಳೆ ಸರ್ವೆಯಲ್ಲಿ ಗೊಂದಲಗಳಾಗಬಾರದು, ರೈತರ ಮೊಬೈಲಿನಿಂದಲೇ ಅವರಿಂದ ಅರ್ಜಿ ಸಲ್ಲಿಸಲು ಪ್ರೇರೆಪಿಸಬೇಕು.ಬೆಳೆ ಸಮೀಕ್ಷೆಗೆ ಸಂಬಂಧಿಸದಂತೆ ಇರುವ ತಾಂತ್ರಿಕ ಸಮಸ್ಯೆಗಳಿಗೆ ಸಂಬಂಧಿಸಿದ ರಾಜ್ಯ ಮಟ್ಟದ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸಮಸ್ಯೆಗಳನ್ನು ತುರ್ತಾಗಿ ಬಗೆಹರಿಸಬೇಕು. ತಾಲ್ಲೂಕುವಾರು ನಕ್ಷೆಯಲ್ಲಿ ಕಾಣದ ಗ್ರಾಮಗಳನ್ನು ಗುರುತಿಸುವ ಕಾರ್ಯ ನಡೆಸಿ ರಾಜ್ಯಮಟ್ಟದ ಅಧಿಕಾರಿಗಳ ಗಮನಕ್ಕೆ ತರಬೇಕು.

ರೈತರಿಗೆ ಅಗತ್ಯ ಮಾಹಿತಿ ಹಾಗೂ ಅರಿವು ಮೂಡಿಸಲು ತರಬೇತಿ ನೀಡಬೇಕು, ಬೆಳೆಗಳಿಗೆ ಯಾವ ಯಾವ ಸಂದರ್ಭದಲ್ಲಿ ಏನನ್ನು ಹಾಕಬೇಕು, ಯಾವ ಮಣ್ಣಲ್ಲಿ ಯಾವ ಬೆಳೆಯನ್ನು ಬೆಳೆಯಬೇಕು ಎನ್ನುವುದರ ಕುರಿತು ಸಣ್ಣ-ಸಣ್ಣ ಗುಂಪುಗಳನ್ನಾಗಿ ಮಾಡಿ ತರಬೇತಿ ನೀಡಬೇಕು. ಅಂತಹ ತರಬೇತಿಗಳಿಗೆ ನನ್ನನ್ನು ಸಹ ಆಹ್ವಾನಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.ರೈತರಿಗೆ ಸಾಲ ನೀಡುವ ಕುರಿತಂತೆ ಸಹಕಾರಿ ಬ್ಯಾಂಕಗಳು ಹಾಗೂ ರಾಷ್ಟ್ರೀಕೃತ ಬ್ಯಾಂಕ್ ಗಳು ವಿನಾಕರಣ ತೊಂದರೆ ನೀಡಬಾರದು, ಬೆಳೆ ವಿಮಗೆ ಸಂಬಂಧಿಸಿದಂತೆ ರೈತರೊಂದಿಗೆ ಮಾನವೀಯತೆಯಿಂದ ವರ್ತಿಸಿ. ರೈತರು ಸಾಲಗಳಿಗೆ ಸಂಬಂಧಿಸಿದಂತೆ ದೂರುಗಳು ಕೇಳಿ ಬಂದಲ್ಲಿ ಬ್ಯಾಂಕನವರನ್ನು ಜವಬ್ಧಾರಿಯನ್ನಾಗಿಸಲಾಗುವುದು.ಸಬ ಯಲ್ಲಿ ಮುಖ್ಯವಾಗಿ ಕಲಬುರಗಿ ಜಿಲ್ಲೆಯಲ್ಲಿ ತೊಗರಿ ಬೆಳೆಗೆ ನೋಂದಣಿ ಮಾಡಿದಂತಹ ರೈತರ ಬೆಳೆ ಸಮೀಕ್ಷೆಯ ದತ್ತಾಂಶದ ಪ್ರಕಾರ ತೊಗರಿ ಬೆಳೆ ಇರುವುದನ್ನು ಪರಿಶೀಲಿಸುವುದು, ಪ್ರಸ್ತುತ ಸಂಧರ್ಭದಲ್ಲಿ ಸ್ಪಷ್ಟ ಅಭಿಪ್ರಾಯದೊಂದಿಗೆ ನೊಂದಣಿ ಮಾಡಿದ ರೈತವಾರು ಪಟ್ಟಿ ಸಲ್ಲಿಸುವುದು ಸೇರಿದಂತೆ ಇನ್ನಿತರ ಮೂಲಗಳ ದತ್ತಾಂಶವನ್ನು ಸಂಗ್ರಹಿಸಿ ಪರಿಶೀಲಿಸಲು ಅಧಿಕಾರಿಗಳಿಗೆ ಸೂಚಿಸಲಾಯಿತು.ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ತೊಗರಿ ಬೆಳೆಯ ಅವಕದ ಬಗ್ಗೆ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ತೊಗರಿ ಮಾರಾಟ ಮಾಡಿರುವ ಬಗ್ಗೆ, ದಾಲ್ ಮಿಲ್ ಗಳಿಗೆ ತೊಗರಿ ಸರಬರಾಜು ಮಾಡಿರುವ ಬಗ್ಗೆ ಪರಿಶೀಲಿಸಿ, ತಾಲ್ಲೂಕುವಾರು ಹಿಂದಿನ ಸಾಲಿನೊಂದಿಗೆ ತುಲನೆ ಮಾಡಿ ಒಂದು ವೇಳೆ ಹಿಂದಿನ ಸಾಲಿಗೆ ಹೋಲಿಸಿದಲ್ಲಿ, ಇಳುವರಿ ಹೆಚ್ಚಾಗಿದೆಯೇ ಅಥವಾ ಕಡಿಮೆಯಾಗಿದೆಯೇ? ಎಂಬ ಬಗ್ಗೆ, ಸ್ಪಷ್ಟ ಅಭಿಪ್ರಾಯ ನೀಡುವಂತೆ ಹೇಳಿದರು.

ಸಭೆಯಲ್ಲಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಸಮದ್ ಪಟೇಲ್, ಕೃಷಿ, ತೋಟಗಾರಿಕೆ, ರೇಷ್ಮೆ, ಭೂ ದಾಖಲೆಗಳು ಇಲಾಖೆಯ ಹಿರಿಯ ಅಧಿಕಾರಿಗಳು ಸೇರಿದಂತೆ ಖಾಸಗಿ ಹಾಗೂ ಸಹಕಾರಿ ಬ್ಯಾಂಕುಗಳ, ಖಾಸಗಿ ಸಕ್ಕರೆ ಕಾರ್ಖಾನೆಗಳ ಮತ್ತು ನಬಾರ್ಡ್ ಹಿರಿಯ ಅಧಿಕಾರಿಗಳು ಸಹ ಉಪಸ್ಥಿತರಿದ್ದರು.

## ತ್ರಿವಳಿ ಕೊಲೆ:7 ಜನರ ಬಂಧನ

ಇತ್ತೀಚೆಗಷ್ಟೇ ಕೊಲೆ ಆರೋಪಿಗಳು ಜಾಮೀನು ಪಡೆದು ಜೈಲಿನಿಂದ ಹೊರಬಂದಿದ್ದರು. ಆರೋಪಿಗಳು ಜೈಲಿನಿಂದ ಹೊರಬಂದಿರುವ ಮಾಹಿತಿ ಅರಿತ ಹಿನ್ನೆಲೆಯಲ್ಲಿ ಸೋಮು ರಾಠೋಡ್ ಕೊಲೆಗೆ ಪ್ರತೀಕಾರವಾಗಿ ಈ ಮೂವರ ಹತ್ಯೆ ನಡೆದಿರಬಹುದು ಎಂದು ಪೊಲೀಸರು ಶಂಕೆ ವ್ಯಕ್ತಪಡಿಸಿದ್ದರು.

ಕಲಬುರಗಿಯ ಸಬ್ ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ತನಿಖೆ ಜಾರಿಯಲ್ಲಿದೆ.

## ಮತ್ತೊಬ್ಬರಿಲ್ಲ: ಛಲವಾದಿ ನಾರಾಯಣಸ್ವಾಮಿ

ತಿಂಗಳಿಗೊಮ್ಮೆ ಕೊಡಲು ಸಂಬಳ ಇದಲ್ಲ ಅಂತಾರೆ. ಗ್ಯಾರಂಟಿ ಕೊಟ್ಟು, ಹಣವೂ ತಲುಪಿಸದೆ ಸಾಮಾನ್ಯ ಜನರಿಗೆ ಸರ್ಕಾರ ಮೋಸ ಅಷ್ಟೇ ಅಲ್ಲ; ಅವಮಾನವೂ ಮಾಡುತ್ತಿದೆ. ನಿಮ್ಮ ಹಣ ಯಾರಿಗೆ ಬೇಕು, ರಾಜೀನಾಮೆ ಕೊಡಿ ಎಂದು ಕೇಳುವ ಸ್ಥಿತಿ ಬಂದಿದೆ ಎಂದರು.

ಈಗ ಸರ್ಕಾರ ವಜಾಗೊಂಡು ಚುನಾವಣೆಗೆ ಹೋದರೆ, ಕಾಂಗ್ರೆಸ್ ಗೆ 30 ಸ್ಥಾನವೂ ಸಿಗುವುದಿಲ್ಲ. ಸರ್ಕಾರದ ದುರಾಡಳಿತದ ಬಗ್ಗೆ ನಾವು ಹೇಳುತ್ತಲೇ ಬಂದಿದ್ದೆವು. ಈಗ ಆಡಳಿತ ಪಕ್ಷದ ಶಾಸಕರೇ ತಮ್ಮ ಪಕ್ಷ ಹಾಗೂ ಸರ್ಕಾರದ ಮಾನ ಹರಾಜು ಹಾಕುತ್ತಿದ್ದಾರೆ ಎಂದು ಹೇಳಿದರು.




ಬಸವಕಲ್ಯಾಣ : ಇಲ್ಲಿನ ಮಾತಾಜಿ ಸೇವಾಗೆ ವಿಶ್ವ ಪರಿಸರ ದಿನಾಚರಣೆ ಹಾಗೂ ಕರ್ನಾಟಕ ರಾಜ್ಯ ಪರಿಸರ ಪ್ರಶಸ್ತಿ ಸಮಾರಂಭ ಬೆಂಗಳೂರಿನಲ್ಲಿ ಸಂಸ್ಥೆಯ ಅಧ್ಯಕ್ಷರಾದ ಎಸ್. ಡಿ. ಚಾಕೂರೆ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ. ಉಪ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ. ಪರಿಸರ ಹಾಗೂ ಅರಣ್ಯ ಸಚಿವರಾದ ಈಶ್ವರ ಖಂಡ್ರೆ. ಇನ್ನಿತರರ ಸಮ್ಮುಖದಲ್ಲಿ ಸನ್ಮಾನಿಸಲಾಯಿತು.

# ಪ್ಲಾಸ್ಟಿಕ್ ಮುಕ್ತ ರಾಯಚೂರು ಜಿಲ್ಲೆಯಾಗಲು ಸಹಕರಿಸಿ: ನ್ಯಾ.ಹೆಚ್.ಎ.ಸ್ವಾತಿಕ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂ 25 : ಸಾರ್ವಜನಿಕರು ಪ್ಲಾಸ್ಟಿಕ್ ವಸ್ತುಗಳ ಬಳಕೆ ಕಡಿಮೆ ಮಾಡಬೇಕು. ನಿಷೇಧಿತ ಪ್ಲಾಸ್ಟಿಕ್ ಬಳಸಬಾರದು ಎಂದು ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್ ಎ ಸಾತ್ವಿಕ್ ಅವರು ಜಿಲ್ಲೆಯ ಸಾರ್ವಜನಿಕರಲ್ಲಿ ಮನವಿ ಮಾಡಿದರು.



ಜಿಲ್ಲಾಡಳಿತ,ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಅರಣ್ಯ ಇಲಾಖೆ,ಸಾರ್ವಜನಿಕ ಶಿಕ್ಷಣ ಇಲಾಖೆ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಮತ್ತು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜೂನ್ 25ರಂದು ನಡೆದ ಪರಿಸರ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜಿಲ್ಲೆಯನ್ನು ಪ್ಲಾಸ್ಟಿಕ್ ಮುಕ್ತ ಮಾಡಲು ನಗರಸಭೆ ಸೇರಿದಂತೆ ಇನ್ನೀತರ ಇಲಾಖೆಗಳು ಕ್ರಮ ವಹಿಸಿ ಅಂಗಡಿ,ಮುಂಗಟ್ಟುಗಳ ಮೇಲೆ ದಾಳಿ ನಡೆಸಿ ಪ್ಲಾಸ್ಟಿಕ್ ಮಾರಾಟಗಾರರ ಮೇಲೆ ದಂಡ ವಿಧಿಸಿದರು ಸಹ ಕೆಲವೆಡೆ ಪ್ಲಾಸ್ಟಿಕ್ ಬಳಕೆ ಕಾಣುತ್ತದೆ. ಇದು ಸರಿಯಲ್ಲ. ಸಾರ್ವಜನಿಕರು ಸಹಕರಿಸಬೇಕು ಎಂದರು.

ಪರಿಸರ ಸರಿಯಾಗಿದ್ದಾಗ ಮಾತ್ರ ಉತ್ತಮ ಆರೋಗ್ಯ ಹೊಂದಲು ಸಾಧ್ಯವಾಗುತ್ತದೆ.

ವಾಯು ಮಾಲಿನ್ಯದ ದುಷ್ಪರಿಣಾಮಗಳ ಬಗ್ಗೆ ಜನತೆ ಅರಿಯಬೇಕು. ಪ್ಲಾಸ್ಟಿಕ್ ಬಳಸಬಾರದು ಎಂದು ಮನವಿ ಮಾಡಿದರು.

ವಾಯುಮಾಲಿನ್ಯನಿಯಂತ್ರಣ-ಕ್ಕಾಗಿ ಹಾಗೂ ನಿಷೇಧಿತ ಪ್ಲಾಸ್ಟಿಕ್ ಬಳಸದೆ ಪರಿಸರ ಸ್ನೇಹಿ ಮಾರ್ಗೋಪಾಯಗಳ ಬಗ್ಗೆ ತಿಳಿದು, ಮತ್ತಿತರರಿಗೂ ಅರಿವು ಮೂಡಿಸಲು ಜಿಲ್ಲೆಯ ಸಮಸ್ತ ನಾಗರೀಕರು ಜಿಲ್ಲಾಡಳಿತದೊಂದಿಗೆ ಕೈ ಜೋಡಿಸಬೇಕು. ಪ್ಲಾಸ್ಟಿಕ್ ವಸ್ತು ಬಳಸಬೇಡಿ, ಜಿಲ್ಲೆಯನ್ನು ಪ್ಲಾಸ್ಟಿಕ್ ಮುಕ್ತ ಮಾಡಲು ಸಹಕರಿಸಬೇಕು ಎಂದರು.

ವಾಯುಮಾಲಿನ್ಯವು ಹೃದಯ ರಕ್ತನಾಳದ ಕಾಯಿಲೆಗೆ ಮುಖ್ಯ ಕಾರಣವಾದ ಅಂಶವಾಗಿದೆ. ಹೃದ್ರೋಗ ಮತ್ತು ಪಾರ್ಶ್ವವಾಯು, ಶ್ವಾಸಕೋಶದ ಕ್ಯಾನ್ಸರ್ ಸಹ ಬರುತ್ತವೆ.

ಕಡಿಮೆ ಉಸಿರಾಟದಿಂದಾಗಿ ಡಯಾಬಿಟಿಸ್ ಬರಲಿದೆ ಎಂಬುದರ ಅಂಶಗಳ ಬಗ್ಗೆ ಸಾರ್ವಜನಿಕರು ಅರಿತು ಎಚ್ಚೆತ್ತುಕೊಳ್ಳಬೇಕು ಎಂದರು.

ಪ್ರತಿಜ್ಞಾ ವಿಧಿ ಬೋಧನೆ: ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಶಿಕ್ಷಣ ವಿಭಾಗದ ಜಿಲ್ಲಾ ಸಂಚಾಲಕರಾದ ದಂಡಪ್ಪ ಬಿರಾದರ್ ಅವರು ಇದೆ ವೇಳೆ

ಪರಿಸರ ಕುರಿತು ಪ್ರತಿಜ್ಞಾ ವಿಧಿ ಬೋಧಿಸಿದರು.

ಬಹುಮಾನ ವಿತರಣೆ: ವಿಶ್ವ ಪರಿಸರ ದಿನಾಚರಣೆ-2025ರ ಅಂಗವಾಗಿ ನಗರದ ಕನ್ನಡ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಕಾರ್ಯಕ್ರಮಕ್ಕೆ ಅರಣ್ಯ ಇಲಾಖೆಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಪ್ರವೀಣ್ ಎಸ್. ಅವರು ಚಾಲನೆ ನೀಡಿದರು.

ಈ ವೇಳೆ ಅವರು ಮಾತನಾಡಿ, ಮಾನವನಿಂದ ಪರಿಸರ ನಾಶವಾಗುತ್ತಿದ್ದು, ಮಾನವ ಮತ್ತು ಪರಿಸರ ನಡುವೆ ನಿರಂತರ ಸಂಘರ್ಷ ನಡೆಯುತ್ತಿದೆ. ಆಧುನಿಕ ಯುಗದಲ್ಲಿ ಪ್ಲಾಸ್ಟಿಕ್ ಬಳಕೆ ಹೆಚ್ಚಾಗಿದ್ದು, ಅದನ್ನು ಕಡಿಮೆ ಮಾಡಬೇಕು. ಅದಕ್ಕಾಗಿ ಜಿಲ್ಲೆಯ ಎಲ್ಲಾ ಶಾಲಾ ಹಾಗೂ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಲಾಗುತ್ತದೆ. ವಿದ್ಯಾರ್ಥಿಗಳು ತಮ್ಮ ತಂದೆ-ತಾಯಿಗಳಿಗೆ ಪ್ಲಾಸ್ಟಿಕ್ ಬಳಕೆ ಕುರಿತು ತಿಳಿ ಹೇಳಬೇಕೆಂದು ಹೇಳಿದರು.

ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಸಂಗಮೇಶ್, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಕೆ.ಡಿ.ಬಡಿಗೇರ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪರಿಸರ ಅಧಿಕಾರಿ ಬಿ.ಎಸ್. ಮುರಳೀಧರ್ ಈ ಪ್ರಕಾಶ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸ್ಥಳೀಯ ಸಂಸ್ಥೆಯ ಅಧ್ಯಕ್ಷರಾದ ಆರ್.ಹೆಚ್.ಸಾಗರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ ಸಿಬ್ಬಂದಿ ಇದ್ದರು.

# ಸಾಮಾಜಿಕ ಬಹಿಷ್ಕಾರದ ಆರೋಪ; ಚಿನ್ನಾಕಾರ ಗ್ರಾಮಕ್ಕೆ ಜಿಲ್ಲಾಧಿಕಾರಿ ಭೇಟಿ

ಯಾದಗಿರಿ:ಜೂ.25:ಜಿಲ್ಲೆಯ ಗುರುಮಠಕಲ್ ತಾಲ್ಲೂಕಿನ ಚಿನ್ನಾಕಾರ ಗ್ರಾಮದಲ್ಲಿ ಪರಿಶಿಷ್ಟ ಸಮುದಾಯದವರಿಗೆ ಸಾಮಾಜಿಕ ಬಹಿಷ್ಕಾರದ ಆರೋಪ ಕೇಳಿಬಂದ ಹಿನ್ನೆಲೆ ಜಿಲ್ಲಾಧಿಕಾರಿ, ಎಸ್‌ಪಿ ಸೇರಿದಂತೆ ಅಧಿಕಾರಿಗಳ ತಂಡ ಚನ್ನಾಕಾರ ಗ್ರಾಮಕ್ಕೆ ಭೇಟಿ ನೀಡಿ, ಸಭೆ ನಡೆಸಿತು.



ಗ್ರಾಮದಲ್ಲಿನ 9 ಗುಂಟೆ ಸರ್ಕಾರಿ ಜಮೀನಿನಲ್ಲಿ 6 ಗುಂಟೆ ಸಮಾಜ ಕಲ್ಯಾಣ ಇಲಾಖೆಗೆ ಈ ಹಿಂದೆಯೇ ನೀಡಲಾಗಿತ್ತು.

ಉಳಿದ 3 ಗುಂಟೆ ಜಮೀನಿನಲ್ಲಿ ಈಚೆಗೆ ಗ್ರಾಮ ಪಂಚಾಯಿತಿ ಕಟ್ಟಡ ನಿರ್ಮಾಣಕ್ಕೆ ಮುಂದಾಗಿತ್ತು. ಗ್ರಾಮ ಪಂಚಾಯಿತಿ ಕಟ್ಟಡ ನಿರ್ಮಾಣಕ್ಕೆ ಅನುದಾನ ಬಂದ ಹಿನ್ನೆಲೆ 3 ಗುಂಟೆ ಸ್ಥಳದಲ್ಲಿ ಕಟ್ಟಡ ನಿರ್ಮಿಸಲು ನಿರ್ಧರಿಸಿದ ನಂತರ ಸಮಸ್ಯೆ ಕಾಣಿಸಿಕೊಂಡಿದೆ. ವರದಿ ಸಲ್ಲಿಸಲು ಸೂಚನೆ: 3 ಗುಂಟೆ ಸರ್ಕಾರಿ ಜಮೀನಿಗೆ ಸಂಬಂಧಿಸಿದಂತೆ ಸಂಪೂರ್ಣ ವರದಿ ನೀಡುವಂತೆ ಜಿಲ್ಲಾಧಿಕಾರಿ ಸುಶೀಲಾ ಜಿ. ಅವರು ತಹಶೀಲ್ದಾರ್ ಶಾಂತಗೌಡ ಬಿರಾದರ ಅವರಿಗೆ ಸೂಚಿಸಿದರು.

ಕೂಡಲೇ ವರದಿ ನೀಡಿದರೆ, ಸ್ಥಳದ ಕುರಿತಾಗಿ ಮುಂದಿನ ಕ್ರಮವಹಿಸುವುದಾಗಿ ಜಿಲ್ಲಾಧಿಕಾರಿ ಹೇಳಿದರು.

ಸಾಮರಸ್ಯಕ್ಕೆ ಸಂಬಂಧಿಸಿದಂತೆ ಗ್ರಾಮದಲ್ಲಿ ಸಭೆ ನಡೆಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಶಾಂತಿ ಸಭೆ: ಜಿಲ್ಲಾಧಿಕಾರಿ ಸೂಚನೆಯಂತೆ ಮಂಗಳವಾ?? ತಹಶೀಲ್ದಾರ್, ಡಿವೈಎಸ್‌ಪಿ, ತಾಪಂ ಇಒ, ಸಮಾಜ ಕಲ್ಯಾಣ ಇಲಾಖೆಯ ಎಡಿ, ಪಿಡಿಒ ಮತ್ತು ಗ್ರಾಮ ಪಂಚಾಯಿತಿ ಪಿಡಿಒ ಹಾಗೂ ಅಧಿಕಾರಿಗಳು ಗ್ರಾಮದಲ್ಲಿ ಸಭೆ ನಡೆಸಿದರು.

ತಾರತಮ್ಯ ಮಾಡದಂತೆ ತಾಕೀತು: ಗ್ರಾಮದಲ್ಲಿನ ಕ್ಷೌರದಂಗಡಿ, ಹೋಟೆಲ್ ಸೇರಿದಂತೆ ಎಲ್ಲಾ ರೀತಿಯ ಅಂಗಡಿಗಳಲ್ಲಿ ಯಾವುದೇ ಕಾರಣಕ್ಕೂ ತಾರತಮ್ಯ ಮಾಡದಂತೆ, ನಿಗದಿತ ದರದಂತೆ ಹಣ ನೀಡಿದರೆ ಅವರಿಗೆ ವಸ್ತುಗಳನ್ನು ಮಾರಾಟ ಮಾಡುವಂತೆ, ಸೇವೆ ನೀಡುವಂತೆ ಅಧಿಕಾರಿಗಳ ತಂಡ ತಿಳಿವಳಿಕೆ ಪತ್ರಗಳನ್ನು ನೀಡಿ, ತಾಕೀತು ಮಾಡಿತು.

ಷೋಕಾಸ್ ನೋಟಿಸ್: ಕ್ಷೌರದಂಗಡಿಯಲ್ಲಿ ಕ್ಷೌರ ಮಾಡಲು ಬಹಿಷ್ಕರಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಅಂಗಡಿಗೆ ಕಾರಣ ಕೇಳಿ ನೋಟಿಸ್ ನೀಡಲು ನಿರ್ಧರಿಸಲಾಯಿತು.

# ವಿಶ್ವ ತಂಬಾಕು ವಿರೋಧಿ ದಿನಾಚರಣೆ

ಸೇಡಂ, ಜೂ. 25 :ತಾಲೂಕಿನಲ್ಲಿ"ವಿಶ್ವ ತಂಬಾಕು ವಿರೋಧಿ ದಿನಾಚರಣೆ" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.



ಈ ಕಾರ್ಯಕ್ರಮದಲ್ಲಿ ಜನಜಾಗೃತಿ ಸದಸ್ಯರು ಶ್ರೀಯುತ ಕಾಶೀನಾಥ್ ದೊಡ್ಡಮನಿ ಅವರು , ಉಪ ಕಾರಾಗೃಹದ ಅಧಿಕ್ಷಕರಾದ ಶ್ರೀಯುತ ವೀರಪ್ಪ ಎಂ ನಾಯಕ ಅವರು,ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳು ಹಾಗೂ ವಕೀಲರಾದ ಶ್ರೀಯುತ ಎಸ್ ಎಸ್ ಅವಟಿ ಅವರು ಹಾಗೂ ಮಾನ್ಯ ತಾಲೂಕು ಯೋಜನಾಧಿಕಾರಿಗಳಾದ ಶ್ರೀಯುತ ಮಂಜುನಾಥ್ ಎಸ್ ಜಿ ಅವರು ಕಾರ್ಯಕ್ರಮದ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ವೇದಿಕೆಯಲ್ಲಿರುವ ಗಣ್ಯರು, ಅಧಿಕಾರಿ ವರ್ಗದವರು ಸಶಿಗೆ ನಿರುಣಿಸುವ ಮೂಲಕ ಈ ಕಾರ್ಯಕ್ರಮಕ್ಕೆ ಚಾಲನೆಯನ್ನು ನೀಡಿದರು .

ಕಾರ್ಯಕ್ರಮವನ್ನು ಉದ್ದೇಶಿಸಿ ಪ್ರಾಸ್ತಾವಿಕವಾಗಿ ಮಾತನಾಡಿದ ಮಾನ್ಯ ತಾಲೂಕು ಯೋಜನಾಧಿಕಾರಿಗಳಾದ ಮಂಜುನಾಥ.ಎಸ್.ಜಿ ಅವರು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮೂಲಕ ಸೇಡಂ ತಾಲೂಕು ವ್ಯಾಪ್ತಿಯಲ್ಲಿ ಸ್ವ-ಸಹಾಯ ಸಂಘದಲ್ಲಿರುವಂತಹ ಸದಸ್ಯರಿಗೆ, ರೈತರಿಗೆ, ಶಾಲಾ ಮಕ್ಕಳಿಗೆ, ಅಸಹಾಯಕರಿಗೆ ಜ್ಞಾನವಿಕಾಸ ಕಾರ್ಯಕ್ರಮದ ಮೂಲಕ ಗ್ರಾಮ-ಗ್ರಾಮಗಳಲ್ಲಿ ಆರೋಗ್ಯ ಇಲಾಖೆಯ ಸಹಕಾರವನ್ನು ಪಡೆದುಕೊಂಡು ವೈದ್ಯರ ಮೂಲಕ ಹಲವಾರು ಆರೋಗ್ಯ ತಪಾಸಣಾ ಶಿಬಿರಗಳನ್ನು ಏರ್ಪಡಿಸಿ ಆರೋಗ್ಯ ತಪಾಸಣೆ ಮಾಡುವುದರ ಮೂಲಕ ಈ ಸಮಾಜವನ್ನು ಆರೋಗ್ಯ ಹಿತದೃಷ್ಟಿಯಿಂದ ಕಾಪಾಡಲು ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿಗಳನ್ನು ಆಯೋಜನೆ ಮಾಡಿ ಸುಚಿತ್ವ,ಆಹಾರ, ಯೋಗ,ಆರೋಗ್ಯ ಸಲಹೆಗಳನ್ನು ನೀಡುತ್ತಾ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ಬಗ್ಗೆ ಸ-ವಿಸ್ತಾರವಾಗಿ ಮಾಹಿತಿಯನ್ನು ಸಂದರ್ಭದಲ್ಲಿ ನೀಡಿದರು.

ಈ ಕಾರ್ಯಕ್ರಮಕ್ಕೆ ಆಗಮಿಸಿದ ವಕೀಲರು ಹಾಗೂ ಸಂಪನ್ಮೂಲ ವ್ಯಕ್ತಿಗಳಾದ

ಎಸ್ ಎಸ್ ಅವಟಿ ಸರ್ ಅವರು... ಕಾರ್ಯಕ್ರಮದಲ್ಲಿ ತಂಬಾಕು ಸೇವನೆಯಿಂದ ಮತ್ತು ಮಾದಕ ವಸ್ತುಗಳ ಬಳಕೆಗಳಿಂದ ಆರೋಗ್ಯದ ಆಗುತ್ತಿರುವ ದುಷ್ಪ-ಪರಿಣಾಮಗಳು ಮತ್ತು ಗಂಭೀರ ಕಾಯಿಲೆಗಳಿಗೆ ತುತ್ತಾಗಿ ಕುಟುಂಬದ ಜವಾಬ್ದಾರಿಯನ್ನು ಹೊತ್ತು ಸಂಸಾರವೆಂಬ ಎರಡು ಗಾಲಿನ ಬಂಡೆಯನ್ನು ಎಳೆದುಕೊಂಡು ಹೋಗುವ ಕೊಂಡಿ ಈ ರೋಗಗಳಿಗೆ ತುತ್ತಾಗಿ ಮುಂದೊಂದು ದಿನ ಬಲಿಯಾಗಿ ಆ ಸಂಸಾರದ ಕೊಂಡಿ ಕಳಚಿ ಬಿದ್ದಾಗ ಆ ಕುಟುಂಬಕ್ಕೆ ಆಗ ಆಗುವ ನೋವು ಯಾರಿಗೆ ಬರಬಾರದು ಎಂದು ಸಲಹೆ ನೀಡಿ,ಇಂದಿನಿಂದಲೇ ದುಚ್ಚಟಕ್ಕೆ ದಾಸರಾಗುವುದನ್ನು ತ್ಯಜಿಸಬೇಕು ಎಂದು ಕಾರ್ಯಕ್ರಮದಲ್ಲಿ ರುವ ಉಪ ಕಾರಾಗೃಹದ 46 ಬಂಧಿಗಳಿಗೆ ಮಾರ್ಗದರ್ಶನ ನೀಡಿದರು.

ಈ ಸಂದರ್ಭದಲ್ಲಿ ಕಾರ್ಯಕ್ರಮದ ಅಧ್ಯಕ್ಷತೆ ಸ್ಥಾನವನ್ನು ವಹಿಸಿಕೊಂಡು ಮಾತನಾಡಿದ ಉಪ ಕಾರಾಗೃಹದ ಅಧಿಕ್ಷಕರಾದ ಶ್ರೀಯುತ ವೀರಪ್ಪ ಎಂ ನಾಯಕ್ ಅವರು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಲವಾರು ಸಾಮಾಜಿಕ ಕಳಕಳಿಯ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಗ್ರಾಮೀಣ ಮಟ್ಟದಲ್ಲಿರುವ ಮಹಿಳೆಯರ ಆರ್ಥಿಕ ಶಕ್ತಿಯಾಗಿ ಸಬಲೀಕರಣದ ಜೊತೆಗೆ ಸುಚಿತ್ವ, ಆರೋಗ್ಯದ ಬಗ್ಗೆ ಜನಪ್ರಿಯ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅನುಷ್ಠಾನ ಮಾಡುತ್ತಿದ್ದು ತುಂಬಾ ಸಂತೋಷ ಮತ್ತು ಶ್ಲಾಘನಿಯ ಕಾರ್ಯ ಎಂದು ಹರ್ಷ ವ್ಯಕ್ತಪಡಿಸಿದರು. ಈ ಕಾರ್ಯಕ್ರಮದಲ್ಲಿ ಜ್ಞಾನವಿಕಾಸ ಸಮನ್ವಯಧಿಕಾರಿ ಶ್ರೀಮತಿ ಸುವರ್ಣಾ ಹೊನ್ನಳ್ಳಿ,ಕಾರ್ಯಾಗೃಹದ ಸಿಬ್ಬಂದಿಗಳು ಶ್ರೀಮತಿ ಬಸಮ್ಮ ,ಅಖಿಲ ಕಾರ್ಯಕರ್ತರು,ಕಚೇರಿ ಸಿಬ್ಬಂದಿ,ಸ್ಥಳೀಯ ಸೇವಾಪ್ರತಿನಿಧಿ ಹಾಗೂ ಇತರರು ಉಪಸ್ಥಿತರಿದ್ದರು.

ಬಸವಗಿರಿಯಲ್ಲಿ ಮಾಸಿಕ ಶರಣ ಸಂಗಮ ಕಾರ್ಯಕ್ರಮ

## ಶರಣರ ವಚನಗಳಲ್ಲಿ ಪರಿಸರ ಪ್ರಜ್ಞೆ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 25 :– ಬಸವಾದಿ ಶರಣರ ವಚನಗಳಲ್ಲಿ ಪರಿಸರ ಪ್ರಜ್ಞೆ ತುಂಬಿ ತುಳುಕುತ್ತಿದೆ ಎಂದು ಶಿಕ್ಷಕ ಡಾ. ಶಿವಲಿಂಗ ಹೇಡೆ ಹೇಳಿದರು.

ಲಿಂಗಾಯತ ಮಹಾ ಮಠದ ವತಿಯಿಂದ ನಗರದ ಬಸವಗಿರಿಯಲ್ಲಿ ಸೋಮವಾರ ನಡೆದ 264ನೇ ಶರಣ ಸಂಗಮ ಕಾರ್ಯಕ್ರಮದಲ್ಲಿ 'ಶರಣರು ಮತ್ತು ಪರಿಸರ' ಕುರಿತು ಅವರು ಉಪನ್ಯಾಸ ನೀಡಿದರು.

ಶರಣರು ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸಿದ್ದರು. ಪಶು, ಪ್ರಾಣಿ, ಕ್ರಿಮಿ ಕೀಟ, ಸಸ್ಯ ಸಂಕುಲ ಸಮತೋಲನದಿಂದಿದ್ದರೆ ಜಗತ್ತು ಚೆನ್ನಾಗಿರುತ್ತದೆ. ಪರಿಸರ ಉತ್ತಮವಾಗಿದ್ದರೆ ಮಾತ್ರ ಎಲ್ಲರೂ ಸುಖವಾಗಿ ಬಾಳಲು ಸಾಧ್ಯವಾಗುತ್ತದೆ ಎಂದು ಹೇಳಿದ್ದರು ಎಂದು ತಿಳಿಸಿದರು.

ಪರಿಸರದ ಮೇಲೆ ಮಾನವನ ದೌರ್ಜನ್ಯ ನಿಲ್ಲಬೇಕು. ಪಂಚಭೂತಗಳು ದೇವರ ಭಿಕ್ಷೆ. ಅವುಗಳನ್ನು ಕಲುಷಿತಗೊಳಿಸುವುದು ಮನುಷ್ಯನಿಗೆ ಸಲ್ಲದೆಂದರು ಎಂದು ಹೇಳಿದರು.

ಬಸವಣ್ಣ ಒಂದು ಜೀವಿಗೂ ತೊಂದರೆ ಕೊಡಲಾರೆನೆಂದರು. ಕೊಲ್ಲೆನಯ್ಯ, ಮೆಲ್ಲೆನಯ್ಯ ಎಂದು ದಯವೇ ಧರ್ಮದ ಮೂಲವೆಂದರು. ಭಯದ ಧರ್ಮ ಬೇಡವೆಂದರು ಎಂದು ತಿಳಿಸಿದರು.

ಸಾನಿಧ್ಯ ವಹಿಸಿದ್ದ ಪ್ರಭುದೇವ ಸ್ವಾಮೀಜಿ ಮಾತನಾಡಿ, ಸಸ್ಯಗಳಲ್ಲಿಯೂ ಜೀವ ಇದೆ ಎಂದು ಶರಣರು 900 ವರ್ಷಗಳ ಹಿಂದೆಯೇ ಕಂಡುಕೊಂಡಿದ್ದರು. ಬಸವಣ್ಣ, ಅಕ್ಕ ಮಹಾದೇವಿ, ಅಲ್ಲಮಪ್ರಭುದೇವರು ಸೇರಿದಂತೆ ಅನೇಕ ಶರಣರು ಪ್ರಕೃತಿ, ಗಿಡ–ಮರಗಳ ಕುರಿತು ತಮ್ಮ ವಚನಗಳಲ್ಲಿ ಉಲ್ಲೇಖಿಸಿದ್ದಾರೆ. ಅವುಗಳನ್ನು ಇಂದು ನಾವು ತಿಳಿದುಕೊಂಡು ಅನುಸರಿಸಬೇಕಿದೆ ಎಂದು ಹೇಳಿದರು.

ಎಲ್ಲರೂ ಪರಿಸರ ಉಳಿಸುವ ಪಣ ತೊಡಬೇಕು. ಒಬ್ಬ ವ್ಯಕ್ತಿ ವರ್ಷಕ್ಕೆ ಒಂದು ಸಸಿಯಾದರೂ ನೆಟ್ಟು ಬೆಳೆಸಬೇಕು. ಆಗ ಜಗತ್ತು ಸುಂದರವಾಗುತ್ತದೆ ಎಂದು ತಿಳಿಸಿದರು.

ಮಹಾ ಮಠದಿಂದ ಆರಂಭಿಸಿರುವ ಹಸಿದವರಿಗೆ ಅನ್ನ ಕೊಡುವ ಅನ್ನಪೂರ್ಣ ಯೋಜನೆ ಯಶಸ್ವಿಯಾಗಿ ನಡೆಯುತ್ತಿದೆ. ಯೋಜನೆಗೆ ಎಲ್ಲರೂ ಸಹಕರಿಸಬೇಕು

## ಕಸಾಪ ಸಾಮಾನ್ಯ ಸಭೆಗೆ ಹಲವು ವಿಘ್ನಗಳು

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಜೂ.25– ಈ ತಿಂಗಳು 29 ರಂದು ಜಿಲ್ಲೆಯ ಸಂಡೂರು ಪಟ್ಟಣದಲ್ಲಿ ನಡೆಸಲು ಉದ್ದೇಶಿಸಿರುವ ಕನ್ನಡ ಸಾಹಿತ್ಯ ಪರಿಷತ್ತಿನ ಈ ವರ್ಷದ ಸಾಮಾನ್ಯ ಸಭೆಗೆ ಹಲವು ವಿಘ್ನಗಳು ಕಾಡತೊಡಗಿವೆ ಎನ್ನಬಹುದು.

ಪರಿಷತ್ತಿನ ಅಧ್ಯಕ್ಷ ಮಹೇಶ್ ಜೋಶಿ ಅವರ ಮೇಲಿನ ಅಸಮಾಧಾನದ ಮನಸ್ಸುಗಳು ಒಂದಲ್ಲ ಒಂದು ಆಕ್ಷೇಪಣೆಗಳನ್ನು ಎತ್ತುತ್ತಿವೆ. ಆಕ್ಷೇಪಗಳು ಸಹ ಸ್ವೀಕಾರವಾದವುಗಳಾಗಿವೆ. ಆದರೂ ಹೊಂದಾಣಿಕೆಯ ಮನಸ್ಥಿತಿ ಬೇಕಾಗಿದೆ.

ಈ ಮೊದಲು ನಂದಿಹಳ್ಳಿ ಪಿಜಿ ಸೆಂಟರ್ ನಲ್ಲಿ ಸಭೆ ಮಾಡಲು ಮುಂದಾದಾಗ ಎತ್ತಿದ ಆಕ್ಷೇಪಗಳಿಂದ ಈ ತಿಂಗಳ 29 ಕ್ಕೆ ಸಂಡೂರಿನಲ್ಲಿ ನಡೆಸಲು ಮುಂದಾಗಿತ್ತು.

ಇತ್ತೀಚೆಗೆ ಬಳ್ಳಾರಿಗೆ ಆಗಮಿಸಿದ್ದ ಸಾಹಿತಿ ಎಸ್.ಜಿ ಸಿದ್ದರಾಮಯ್ಯ ಅವರು ಜಿಲ್ಲಾ ಪೊಲೀಸ್ ಇಲಾಖೆಗೆ ಪತ್ರ ಬರೆದು 'ಸುರಕ್ಷತೆ ಕಾರಣದಿಂದ ಸಂಡೂರಿನ ಆದರ್ಶ ಕಲ್ಯಾಣ ಮಂಟಪದಲ್ಲಿ ಸಭೆ ನಡೆಸಲು ಅವಕಾಶ ನೀಡಬಾರದು' ಎಂದು ಮನವಿ ಮಾಡಿದ್ದರಂತೆ. ಈ ಹಿನ್ನಲೆಯಲ್ಲಿ

ಸ್ಥಳೀಯ ಪೊಲೀಸರಿಂದ ವರದಿ ತರಿಸಿಕೊಂಡ ಎಸ್ಪಿ ಅವರು. ಸಂಡೂರಿನಲ್ಲಿ ಗಣಿಗಾರಿಕೆ ಕಾರಣದಿಂದ ಅದಿರು ಲಾರಿಗಳ ಸಂಚಾರ ಹೆಚ್ಚಾಗಿದೆ. ಇದರಿಂದ ಟ್ರಾಫಿಕ್ ಸಮಸ್ಯೆ ಆಗಬಹುದು. ಸಭೆ ನಿಗದಿ ಮಾಡಿರುವ ಸಂಡೂರಿನ ಆದರ್ಶ ಕಲ್ಯಾಣ ಮಂಟಪದಲ್ಲಿ ಸ್ಥಳಾವಕಾಶದ ಕೊರತೆ ಇದೆ. ಮೂಲ ಭೂತಸೌಕರ್ಯಗಳ ಕೊರತೆ ಇದೆ. ಸಾರಿಗೆ ಸೌಕರ್ಯದ ವ್ಯವಸ್ಥೆ ಸರಿಯಾಗಿಲ್ಲ. ವಸತಿಗೆ ಸರಿಯಾದ ಸ್ಥಳವಿಲ್ಲ ಎಂಬುದನ್ನು ಎಸ್ಪಿ ಅವರು ಡಿಸಿಯವರಿಗೆ ವರದಿ ಮಾಡಿದ್ದರು.

ಈ ಹಿನ್ನೆಲೆಯಲ್ಲಿ ಕಸಾಪ ಜಿಲ್ಲಾ ಘಟಕದ ಅಧ್ಯಕ್ಷ ನಿಷ್ಠಿ ರುದ್ರಪ್ಪ ಅವರಿಗೆ ಪತ್ರ ಬರೆದಿರುವ ಜಿಲ್ಲಾಧಿಕಾರಿಗಳು ಪೊಲೀಸ್ ಇಲಾಖೆಯ ವರದಿಯನ್ನು ತಿಳಿಸಿ. ಯಾವುದೇ ಅಹಿತಕರ ಘಟನೆ ನಡೆಯದಂತೆ ಎಚ್ಚರಿಕೆ ವಹಿಸುವುದು ನಿಮ್ಮ ಜವಾಬ್ದಾರಿ ಎಂಬ ನಿಬಂಧನೆ ಹಾಕಿದ್ದಾರಂತೆ.

ಈ ಬಗ್ಗೆ ಸಂಜೆವಾಣಿ ಜೊತೆ ಮಾತನಾಡಿದ ನಿಷ್ಠಿ ರುದ್ರಪ್ಪ ಅವರು ಡಿಸಿ ಎಸ್ಪಿಯವರ ಪತ್ರಗಳನ್ನು ಪರಿಷತ್ತಿನ ಅಧ್ಯಕ್ಷರ ಗಮನಕ್ಕೆ ತರಲಾಗುವುದು ಎಂದು ಹೇಳಿದ್ದಾರೆ.

## ಜೀ ಕನ್ನಡವಾಹಿನಿ ಸರಿಗಮಪದ 21 ವಿಜೇತೆ ಕು. ಶಿವಾನಿ ಶಿವದಾಸ ಸ್ವಾಮಿ ರವರಿಗೆ ಸನ್ಮಾನ.



ಮಲ್ಲಮ್ಮ ನುಡಿ ವಾರ್ತೆ

ಬೀದರ ಜೂನ್ 23 ರಂದು ಸಂಜೆ 6 ಗಂಟೆಗೆ ಬಸವ ಕೇಂದ್ರ ವಿದ್ಯಾನಗರ ಕಾಲೋನಿಯಲ್ಲಿ ಜಿಲ್ಲಾ ಹಾಗೂ ತಾಲ್ಲೂಕ ಕನ್ನಡ ಸಾಹಿತ್ಯ ಪರಿಷತ್ತು ಆಯೋಜನೆ ಮಾಡಿರುವ ಡಾ. ಜಯದೇವಿ ತಾಯಿ ಲಿಗಾಡೆ ರವರ ಜಯಂತಿ ವಿಚಾರಗೋಷ್ಠಿ ಅಭಿನಂದನ ಸಮಾರಂಭದಲ್ಲಿ ಕರ್ನಾಟಕದ ಕರೀಟ ಬೀದರ ಜಿಲ್ಲೆಯಿಂದ ಜೀ ಕನ್ನಡ ವಾಹಿನಿ ಆಯೋಜನೆ ಮಾಡಿರುವ ಸರಿಗಮಪ 21 ರಲ್ಲಿ ಸ್ಪರ್ಧೆ ಮಾಡಿ, ಭಾವಗೀತೆ ಭಕ್ತಿಗೀತೆ ಸಿನಿಮಾಗೀತೆ ನಾಡು ನುಡಿ ಗೀತೆ ಜಾನಪದ ಗೀತೆಗಳನ್ನು ಹಾಡುವುದರ ಮೂಲಕ ನಾಡಿನ ದೇಶದ ಮನಮೆಚ್ಚಿದ ಸಂಗೀತ ಗಾಯಕಿಯಾಗಿ ಹೊರಹೊಮ್ಮಿರುವ ಕು.ಶಿವಾನಿ ಶಿವದಾಸ ಸ್ವಾಮಿರವರಿಗೆ ಅಭಿನಂದನಾ ಸಮಾರಂಭವನ್ನು ಕನ್ನಡ ಸಾಹಿತ್ಯ ಪರಿಷತ್ತು ಬೀದರ ಜಿಲ್ಲಾಧ್ಯಕ್ಷರಾದ ಶ್ರೀ ಸುರೇಶ ಚನ್ನಶೇಟ್ಟಿ ರವರ ನೇತ್ರತ್ವದಲ್ಲಿ ನಡೆದ ಸಮಾರಂಭದಲ್ಲಿ ವಿಶ್ವ ಕನ್ನಡಿಗರ ಸಂಸ್ಥೆ ಕರ್ನಾಟಕ ಅಧ್ಯಕ್ಷರು, ವೀರ ಕನ್ನಡಿಗರ ಸೇನೆ ರಾಜ್ಯ ಸಂಚಾಲಕರಾದ ಡಾ. ಸುಬ್ಬಣ್ಣ ಕರಕನಳ್ಳಿ ಸನ್ಮಾನ ಮಾಡಿದರು. ಮಾಜಿ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಅರವಿಂದಕುಮಾರ ಅರಳಿ, ಡಾ. ಮನ್ಮತ ಡೋಳೆ, ಭಾಷಾಂತರ ನಿರ್ದೇಶನಾಲಯ ಬೆಂಗಳೂರು ಉಪನಿರ್ದೇಶಕರಾದ ಭಕ್ತರಾಜ ಪಾಟೀಲ್, ರಾಜ್ಯ ಸರ್ಕಾರಿ ನೌಕರ ಸಂಘದ ಮಾಜಿ ಜಿಲ್ಲಾಧ್ಯಕ್ಷರಾದ ಶ್ರೀ ರಾಜೇಂದ್ರಕುಮಾರ ಗಂದಗೆ, ಅನುಧಾನಿತ ಪದವಿ ಪುರ್ವ ಶಿಕ್ಷಣ ಇಲಾಖೆ ನೌಕರ ಸಂಘದ ಜಿಲ್ಲಾಧ್ಯಕ್ಷರಾದ ಡಾ. ವಿಜಯಕುಮಾರ ಕೆ ಪಾಟೀಲ ಕನ್ನಡ ಸಾಹಿತ್ಯ ಪರಿಷತ್ತು ತಾಲ್ಲೂಕ ಅಧ್ಯಕ್ಷರಾದ ಡಾ. ಟಿ ಎಂ ಮಚ್ಚೆ, ಉಮೇಶ ಜಾಬ್ ಡಾ. ಬಸವರಾಜ ಬಲ್ಲೂರು ಉಪಸ್ಥಿತರಿದ್ದರು.

## ಬಳ್ಳಾರಿ, ಜೂ.24:ಶಾಸಕರಿಂದ ಕಸ ವಿಲೇವಾರಿ ವಾಹನಗಳ ಲೋಕಾರ್ಪಣೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಜೂ.25: ನಲ್ಲಚೆರುವು ಪ್ರದೇಶದ ಕಸ ಸಂಗ್ರಹ ಘಟಕದ ಆವರಣದಲ್ಲಿ ಇಂದು ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ. ಪಾಲಿಕೆಯಿಂದ ಕಸ ಸಂಗ್ರಹಿಸಿ ವಿಲೇವಾರಿ ಮಾಡುವ 23 ಹೊಸ ವಾಹನಗಳಿಗೆ ನಗರ ಶಾಸಕ ನಾರಾ ಭರತ್ ರೆಡ್ಡಿ ಲೋಕಾರ್ಪಣೆ ಮಾಡಿದರು.

ಈ ವೇಳೆ ಮೇಯರ್ ಮುಲ್ಲಂಗಿ ನಂದೀಶ್, ಸದಸ್ಯರುಗಳಾದ ಪ್ರಭಂಜನಕುಮಾರ್, ಪಿ.ಗಾದೆಪ್ಪ, ಕುಬೇರಾ, ಮಿಂಚು ಸೀನಾ ಮೊದಲಾದವರು ಇದ್ದರು.

ವಿವಿಧ ಕಾಮಗಾರಿಗಳಿಗೆ ಚಾಲನೆ:

ಬಂಡಿಮೋಟ್ ಮಸೀದಿ ಹಿಂಭಾಗ ಅಂದಾಜು ವೆಚ್ಚ 63 ಲಕ್ಷ 50 ಸಾವಿರ ರೂ.ಗಳ ವೆಚ್ಚದಲ್ಲಿ ಮಳೆ ನೀರು ಕಾಲುವೆಯ ನಿರ್ಮಾಣ ಕಾಮಗಾರಿಗೆ , ಮಿಲ್ಲರ್ ಪೇಟೆಯಲ್ಲಿ 50 ಲಕ್ಷ ರೂ.ಗಳ ಕಾಮಗಾರಿಗೆ ಶಾಸಕರು ಭೂಮಿ ಪೂಜೆ ನೆರವೇರಿಸಿದರು.

ವಿಶಾಲ ನಗರ ಹನುಮಾನ ನಗರದಲ್ಲಿ 31 ಲಕ್ಷ 83 ಸಾವಿರ ರೂ.ಗಳ ವೆಚ್ಚದ ಕಾಮಗಾರಿಗೆ, ಅಂಜಿನಪ್ಪ ನಗರ ಹಾಗೂ ಬಿ.ಗೋನಾಳ್ ಗ್ರಾಮದ ಅಂಗನವಾಡಿ ನಿರ್ಮಾಣ ಕಾಮಗಾರಿಗಳಿಗೆ (ಅನುಕ್ರಮವಾಗಿ ಅಂ–ದಾಜು 40 ಲಕ್ಷ ರೂ.ಗಳು, 20 ಲಕ್ಷ ರೂ.ಗಳ ವೆಚ್ಚ) ಚಾಲನೆ ನೀಡಲಾಯಿತು. ಈ ಸಂದರ್ಭ ಪಾಲಿಕೆಯ ಸದಸ್ಯ ಎಂ.ಪ್ರಭಂಜನಕುಮಾರ್, ಕಾಂಗ್ರೆಸ್ ಮುಖಂಡ ಹೊನ್ನಪ್ಪ ಮೊದಲಾದವರು ಇದ್ದರು.

ನಲ್ಲಚೆರುವು ಪ್ರದೇಶದ ಕಸ ಸಂಗ್ರಹ ಘಟಕದ ಆವರಣದಲ್ಲಿ ಇಂದು ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ. ಪಾಲಿಕೆಯಿಂದ ಕಸ ಸಂಗ್ರಹಿಸಿ ವಿಲೇವಾರಿ ಮಾಡುವ 23 ಹೊಸ ವಾಹನಗಳಿಗೆ ನಗರ ಶಾಸಕ ನಾರಾ ಭರತ್ ರೆಡ್ಡಿ ಲೋಕಾರ್ಪಣೆ ಮಾಡಿದರು.

ಈ ವೇಳೆ ಮೇಯರ್ ಮುಲ್ಲಂಗಿ ನಂದೀಶ್, ಸದಸ್ಯರುಗಳಾದ ಪ್ರಭಂಜನಕುಮಾರ್, ಪಿ.ಗಾದೆಪ್ಪ, ಕುಬೇರಾ, ಮಿಂಚು ಸೀನಾ ಮೊದಲಾದವರು ಇದ್ದರು.

## ಕಣ್ಮುಚ್ಚಿ ಕುಳಿತ ಲೋಕೋಪಯೋಗಿ ಇಲಾಖೆ! ಸಾರ್ವಜನಿಕರಿಂದ ಆಕ್ರೋಶ



ಮಲ್ಲಮ್ಮ ನುಡಿ ವಾರ್ತೆ

ಕೊಟ್ಟೂರು, ಜೂ.24: ತಾಲೂಕಿನ ಉಜ್ಜಿನಿ ರಸ್ತೆಯ ಆಲದಮರದ ಹತ್ತಿರದ ನಾಗರಕಟ್ಟೆ, ಜೋಳದ ಕೂಡ್ಲಿಗಿ ಹಾಗೂ ಉಜ್ಜಿನಿ ಇತರೆ ಗ್ರಾಮಗಳಿಗೆ ತೆರಳುವ ಮಾರ್ಗ ರಸ್ತೆಯಲ್ಲಿ ತಗ್ಗು, ಗುಂಡಿಗಳದ್ದೇ ದರ್ಬಾರ್ ಇದರಿಂದಾಗಿ ಬೈಕ್ ಸವಾರರ ಕಷ್ಟ ಹೇಳಿ ತೀರದಂತಾಗಿದೆ. ಕಣ್ಣು ಕಂಡರು ಕಾಣದಂತೆ ಪಿಡಬ್ಲ್ಯೂಡಿ ಇಲಾಖೆ ಕಣ್ಮುಚ್ಚಿಕೊಂಡು ಕುಳಿತಿದೆ ಎಂದು ಸವಾರರು ಆಕ್ರೋಶವನ್ನು ವ್ಯಕ್ತಪಡಿಸಿದರು. ಈ ರಸ್ತೆಯಲ್ಲಿ ಅತೀ ಹೆಚ್ಚು ಗುಂಡಿ ತಗ್ಗುಗಳಿಂದಾಗಿ ಬೈಕ್ ಸವಾರರು ಬಿದ್ದಿರುವ ಉದಾಹರಣೆ ಸಾಕಷ್ಟು ಇವೆ. ದಿನ ನಿತ್ಯ ಮಳೆ ಬರುತ್ತಿರುವುದರಿಂದ ತಗ್ಗು ಗುಂಡಿಗಳಲ್ಲಿ ನೀರು ನಿಂತ ಪರಿಣಾಮ ವಾಹನ ಸವಾರರು ಮೈ ಮೇಲೆ ಎಚ್ಚರಿಕೆ ವಹಿಸಿ ಬೈಕ್ ಸವಾರಿ ಮಾಡಿಕೊಂಡು ಹೋಗಬೇಕು ಸ್ವಲ್ಪ ಯಾಮಾರಿದರೆ ಬಿದ್ದು ಕಡುಬು ತಿನ್ನುವುದು ಗ್ಯಾರಂಟಿ ಎಂಬಂತಾಗಿದೆ. ಕೆಡಿಪಿ ಸಭೆಯಲ್ಲಿ ಈ ಗುಂಡಿಗಳ ಬಗ್ಗೆ ಚರ್ಚಿಸಲಾಗಿತ್ತು. ಶಾಸಕರು ಈ ಗುಂಡಿಗಳನ್ನು ಮುಚ್ಚಲು ಪಿಡಬ್ಲ್ಯೂಡಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ಆದರೂ ಇದು ಕಾರ್ಯ ರೂಪಕ್ಕೆ ಬಂದಿಲ್ಲ.

ಇದಕ್ಕೆ ಸಂಬಂಧಿಸಿದ ಅಧಿಕಾರಿಗಳು ಆದಷ್ಟು ಬೇಗ ತಗ್ಗು ಗುಂಡಿಗಳನ್ನು ಮುಚ್ಚಿ ಸವಾರ ಸಮಸ್ಯೆ ಬಗೆಹರಿಸಬೇಕು ಎಂಬುವುದು ಸಾರ್ವಜನಿಕರು ಆಕ್ರೋಶವಾಗಿದೆ.

## ಯೋಗದಿಂದ ರೋಗ ಮುಕ್ತ: ತನಜೀರಾವ್ ಸಾವರೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಯೋಗದಿಂದ ರೋಗಮುಕ್ತ ಸಮಾಜ ನಿರ್ಮಾಣ ಸಾಧ್ಯ. ಈ ನಿಟ್ಟಿನಲ್ಲಿ ಆರೋಗ್ಯಕ್ಕೆ ಸಹಕಾರಿಯಾದ ಯೋಗಾಭ್ಯಾಸ ರೂಢಿಸಿಕೊಳ್ಳಿ ಎಂದು ಯೋಗ ಗುರುಗಳಾದ ತನಜೀರಾವ್ ಸಾವರೆ ತಾಲ್ಲೂಕಿನ ಘಾಟಬೋರಳ ಗ್ರಾಮದ ಜ್ಞಾನ್ ಭಾರತಿ ಪ್ರಾಥಮಿಕ ಶಾಲೆಯಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡುತ್ತಾ ತಿಳಿಸಿದರು. ಯೋಗ ಕಲಿತವರು ಯೋಗಿಗಳಾಗುತ್ತಾರೆ. ಸ್ವಾಸ್ಥ್ಯ ಸಮಾಜ ನಿರ್ಮಾಣ ಮುನ್ನಡೆಗೆ ಯೋಗದ ಕೊಡುಗೆ ಮಹತ್ತರವಾಗಿದೆ. ಮನುಕುಲಕ್ಕೆ ವರವಾದ ಯೋಗಭ್ಯಾಸ ನಿತ್ಯ ಮಾಡುವುದರಿಂದ ರೋಗಗಳು ದೂರವಾಗುತ್ತವೆ. ಅಲ್ಲದೇ ಸರ್ವ ವ್ಯಸನಗಳಿಗೆ ರಾಮಬಾಣವಾಗಿದೆ. ಆಧುನಿಕತೆ ಥಳಕು, ಬೆಳಕಿನ ಬೆನ್ನು ಹತ್ತಿರುವ ನಾವು ನಿಸರ್ಗದಿಂದ ದೂರ ಸರಿಯುತ್ತಿದ್ದೇವೆ. ಪರಿಣಾಮ ನಮ್ಮ ಶರೀರವು ಕಾಯಿಲೆಗಳ ಕೂಪೆಯಾಗಿದೆ. ಹಾಗಾಗಿ ಎಲ್ಲರೂ ಯೋಗ ಮಾಡುವ ಮೂಲಕ ತಮ್ಮ ಆರೋಗ್ಯ ಕಾಪಾಡಿಕೊಳ್ಳುವಂತೆ ಕರೆ ನೀಡಿದರು. ಗೌರಮ್ಮ ಎಸ್. ಬೆಳ್ಳೆ ಮುಖ್ಯಗುರುಗಳು ನೀಲಮ್ಮ ವಿ. ವಟಗೆ, ಬಸವಜ್ಯೋತಿ ವಿ. ಶೀಗಿ, ರೇಖಾ ಯು. ಮೇತ್ರೆ, ನಿರ್ಮಲಾ ವಿ. ಮಳಗೊಂಡ, ಜ್ಯೋತಿ ಪಿ. ಘೋಟನಾಳೆ, ಸು–ರೇಖಾ, ಚಾಮುಂಡಿ, ಪ್ರಿಯಾಂಕಾ, ಅರ್ಚನಾ, ಪ್ರಿಯಾಂಕಾ ಹಾಗೂ ಶಾಲೆಯ ಎಲ್ಲಾ ಮಕ್ಕಳು 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಪಾಲ್ಗೊಂಡಿದ್ದರು

## ಸರ್ಕಾರಿ ಕರ್ತವ್ಯಕ್ಕೆ ಅಡ್ಡಿ: ಇಬ್ಬರ ಬಂಧನ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಜೂ.25–ಸರ್ಕಾರಿ ಕರ್ತವ್ಯಕ್ಕೆ ಅಡ್ಡಿಪಡಿಸಿ ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಹರಿಬಿಟ್ಟ ಇಬ್ಬರನ್ನು ರಾಘವೇಂದ್ರ ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಬಿದ್ದಾಪುರ ಕಾಲೋನಿಯ ಮಲ್ಲಿನಾಥ ತಂದೆ ತಿಪ್ಪಣ್ಣ (30) ಮತ್ತು ಕರುಣೇಶ್ವರ ನಗರದ ಅಯ್ಯನಗೌಡ ಅಲಿಯಾಸ್ ಆಕಾಶ್ ತಂದೆ ಸಿದ್ದಣ್ಣ (26) ಎಂಬುವವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಇವರು ಜೂ.18 ರಂದು ನಗರದ ಸಂಗಮೇಶ್ವರ ಕಾಲೋನಿಯಲ್ಲಿರುವ ಶಂಕರ ಮಠಕ್ಕೆ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಲು ರಾಷ್ಟ್ರೀಯ ಹಿಂದೂ ಪರಿಷತ್ ಅಧ್ಯಕ್ಷ ಪ್ರವೀಣ್ ತೊಗಾಡಿಯಾ ಅವರು ಆಗಮಿಸಲಿದ್ದ ಹಿನ್ನೆಲೆಯಲ್ಲಿ ಬಂದೋಬಸ್ತ್‌ಗಾಗಿ ನಿಯೋಜಿಸಿದ್ದ ಪೊಲೀಸ್ ಸಿಬ್ಬಂದಿಯ ಕರ್ತವ್ಯಕ್ಕೆ ಅಡ್ಡಿ ಪಡಿಸಿದಲ್ಲದೆ ವಿಡಿಯೋ ಚಿತ್ರೀಕರಣ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದರು. ಈ ಸಂಬಂಧ ರಾಘವೇಂದ್ರ ನಗರ ಪೊಲೀಸ್ ಠಾಣೆ ಎಎಸ್ಐ ಮಲ್ಲಿಕಾರ್ಜುನ ಗೌರ ಅವರು ರಾಘವೇಂದ್ರ ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದರು. ಈ ದೂರಿನ ಅನ್ವಯ ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ ಅವರ ಮಾರ್ಗದರ್ಶನದಲ್ಲಿ ಕಲಬುರಗಿ ದಕ್ಷಿಣ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಶರಣಬಸಪ್ಪ ಸುಬೇದಾರ ಅವರ ನೇತೃತ್ವದಲ್ಲಿ ರಾಘವೇಂದ್ರನಗರ ಪೊಲೀಸ್ ಠಾಣೆ ಪಿಐ ಕುಬೇರ ಎಸ್.ರಾಯಮಾನೆ, ಎಎಸ್ಐ ಮಲ್ಲಿಕಾರ್ಜುನ ಜಾನೆ, ಸಿಬ್ಬಂದಿಗಳಾದ ಆತ್ಮಕುಮಾರ, ಸಂತೋಷಕುಮಾರ, ಶರಣಬಸವ ಸ್ವಾಮಿ ಅವರನ್ನು ಒಳಗೊಂಡ ತಂಡ ತನಿಖೆ ನಡೆಸಿ ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ.

## ವಿವಿಧ ವಸತಿ ಶಾಲೆಗಳ ಪ್ರವೇಶಕ್ಕೆ ಜೂನ್ 26 ರಂದು ಎರಡನೇ ಕೌನ್ಸೆಲಿಂಗ್

ರಾಯಚೂರು ಜೂನ್ 25– ಇಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಸತಿ ಶಾಲೆಗಳಲ್ಲಿ 6ನೇ ತರಗತಿಯ ಪ್ರವೇಶಾತಿಗೆ ಸಂಬಂಧಿಸಿದ ಜೂನ್ 26 ರಂದು 2ನೇ ಆಯ್ಕೆಪಟ್ಟಿಯ ಕೌನ್ಸಲಿಂಗ್‌ಗೆ ಅರ್ಹ ಅಭ್ಯರ್ಥಿಗಳು ಹಾಜರಾಗುವಂತೆ ಕೋರಲಾಗಿದೆ. ಜಿಲ್ಲೆಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ರಾಯಚೂರು, ಗಿಲ್ಲೇಸೂಗೂರು, ಮಾನವಿ, ಸಿಂಧನೂರು, ಲಿಂಗಸೂಗೂರು ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯರಮರಸ್ ಕ್ಯಾಂಪ್ ವಸತಿ ಶಾಲೆ ಮತ್ತು ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಶಾಲೆ ರಾಯಚೂರು ಇಲ್ಲಿಗೆ 6ನೇ ತರಗತಿಯಿಂದ 10ನೇ ತರಗತಿಯವರೆಗೆ ಆಂಗ್ಲ ಮಾಧ್ಯಮದಲ್ಲಿ ವ್ಯಾಸಂಗ ಮಾಡಲು ಅಲ್ಪಸಂಖ್ಯಾತರ ಸಮುದಾಯಕ್ಕೆ ಶೇ.75 ರಷ್ಟು ಸ್ಥಾನಗಳನ್ನು (ಮುಸ್ಲಿಂ ಶೇ.77, ಕ್ರಿಶ್ಚಿಯನ್ ಶೇ.14, ಜೈನ್ ಶೇ.7, ಸಿಖ್ ಶೇ.2, ಭೌದ್ಧ ಶೇ.2) ಶೇ.25 ರಷ್ಟು ಸ್ಥಾನಗಳನ್ನು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗದವರಿಗೆ ಮೀಸಲಿರಿಸಿ ಏಪ್ರಿಲ್ 27 ರಂದು ಪ್ರವೇಶ ಪರೀಕ್ಷೆ ನಡೆಸಿದ್ದು, ಮೇ.27 ರಂದು ಪ್ರವೇಶ ಪರೀಕ್ಷೆಯ ಫಲಿತಾಂಶ ಮತ್ತು ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ರಾಯಚೂರು ನಗರದ ಚಂದ್ರಬಂಡಾ ರಸ್ತೆಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಜೂನ್ 26ರ ಬೆಳಿಗ್ಗೆ 9.30ಕ್ಕೆ ಅಲ್ಪಸಂಖ್ಯಾತ ವರ್ಗದ ಬಾಲಕ, ಬಾಲಕಿಯರ ಹಾಗೂ ಇತ–ರೆ ವರ್ಗದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿಗಳಿಗೆ 2ನೇ ಆಯ್ಕೆಪಟ್ಟಿಯ ಕೌನ್ಸಲಿಂಗ್‌ನ್ನು ಏರ್ಪಡಿಸಲಾಗಿದೆ.

ಅಭ್ಯರ್ಥಿಗಳು ಪರೀಕ್ಷೆಯ ಪ್ರವೇಶ ಪತ್ರ, ವಿದ್ಯಾರ್ಥಿಯ 5 ನೇ ತರಗತಿ ಅಂಕಪಟ್ಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಿದ್ಯಾರ್ಥಿಯ ಆಧಾರ್ ಕಾರ್ಡ್, ವಿಶೇಷ ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ಸಂಬಂಧಿಸಿದ ಪ್ರಮಾಣಪತ್ರದೊಂದಿಗೆ ಹಾಜರಾಗುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಸ್ತೆಗಳ ಮೇಲಿನ ಗುಂಡಿಗಳನ್ನು ಮುಚ್ಚಿಸಿ, ಅವಘಡಗಳನ್ನು ತಪ್ಪಿಸಿ:ಜಿಲ್ಲಾಧಿಕಾರಿ



ಮಲ್ಲಮ್ಮ ನುಡಿ ವಾರ್ತೆ

ವಿಜಯನಗರ(ಹೊಸಪೇಟೆ), ಜೂ.25 : ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ರಸ್ತೆಗಳ ಮೇಲಿನ ಗುಂಡಿಗಳನ್ನು ಗುರುತಿಸಿ ಶೀಘ್ರವೇ ಮುಚ್ಚುವ ಮೂಲಕ ಅವಘಡಗಳನ್ನು ತಪ್ಪಿಸಬೇಕು ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಪಿಡಬ್ಲ್ಯೂಡಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಸೋಮವಾರ ಅವರು ಮಾತನಾಡಿದರು. ಈಚೆಗೆ ರಸ್ತೆಗಳಲ್ಲಿ ಅಪಘಾತ ಪ್ರಕರಣಗಳು ಹೆಚ್ಚುತ್ತಿವೆ. ಮಳೆಯಿಂದಾಗಿ ರಸ್ತೆಗಳ ಮೇಲೆ ನೀರು ನಿಂತು ಗುಂಡಿಗಳು ಕಾಣದೇ ಸವಾರರು ಅವಘಡಗಳನ್ನು ಅನುಭವಿಸುತ್ತಿದ್ದಾರೆ. ವೈಜ್ಞಾನಿಕವಾಗಿ ರಸ್ತೆ ನಿರ್ಮಾಣ ಕಾಮಗಾರಿಗಳು ನಡೆಯದೇ ಅನೇಕ ದುರ್ಘಟನೆಗಳು ಸಂಭವಿಸಿವೆ.

ಈಗಲಾದರೂ ಎಚ್ಚೆತ್ತು ಅಧಿಕಾರಿಗಳು ರಸ್ತೆಗಳ ನಿರ್ವಹಣೆಗೆ ಕಾರ್ಯೋನ್ಮುಖರಾಗಬೇಕು. ಎನ್‌ಎಚ್‌ಎಐ ಅಧಿಕಾರಿಗಳ ಸಭೆಯಲ್ಲಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಒಟ್ಟು 6 ಕಡೆ ಬ್ಲಾಕ್ ಸ್ಪಾಟ್‌ಗಳನ್ನು ಗುರುತಿಸಿ ಈಗಾಗಲೇ 5 ಬ್ಲಾಕ್ ಸ್ಪಾಟ್‌ಗಳನ್ನು ಸರಿಪಡಿಸಲಾಗಿದೆ ಎಂದು ವರದಿ ನೀಡಲಾಗಿದೆ. ರಾಷ್ಟ್ರೀಯ ಹೆದ್ದಾರಿಯಲ್ಲಿ ಬಿಎಂಎಂ ಕಂಪನಿ ಮುಂದಿನ ಡಣಾಪುರ ಕ್ರಾಸ್ ಬಳಿಯ ವಿದ್ಯುತ್ ದೀಪಗಳಿಲ್ಲದೇ ಕತ್ತಲು ಆವರಿಸಿದೆ. ಅದೇ ರಸ್ತೆಯಲ್ಲಿ ಬರುವ ಆರು ಹಳ್ಳಿಗಳಿಗೆ ಸಂಪರ್ಕಿಸುವ ರಸ್ತೆ ಮಾರ್ಗದಲ್ಲಿ ವಿದ್ಯುತ್ ದೀಪ ಇಲ್ಲದೇ ರಸ್ತೆ ಸಂಚಾರಕ್ಕೆ ತೊಂದರೆ ಆಗಿದೆ ಕೂಡಲೇ ವಿದ್ಯುತ್ ದೀಪಗಳನ್ನು ಅಳವಡಿಸಲು ಕ್ರಮವಹಿಸಬೇಕು. ಅರಸೀಕೆರೆಯಿಂದ ಮತ್ತಿಹಳ್ಳಿಗೆ ಹೋಗುವ ರಸ್ತೆ ಮಾರ್ಗದಲ್ಲಿ ಎರಡು ಕಿಲೋಮೀಟರ್ ನಷ್ಟು ರಸ್ತೆ ವಾಹನಗಳು ಸಂಚರಿಸಲು ಸಂಪೂರ್ಣ ಹದಗೆಟ್ಟಿದೆ ಶೀಘ್ರ ರಸ್ತೆ ಕಾಮಗಾರಿ ಸರಿಪಡಿಸಬೇಕು. ರಾಷ್ಟ್ರೀಯ ಹೆದ್ದಾರಿಗೆ ಸಂಪರ್ಕಿಸುವ ಸೇವಾ ರಸ್ತೆಗಳಲ್ಲಿ ಸೂಕ್ತ ನಾಮಫಲಕಗಳು, ರಸ್ತೆ ಅಡೆತಡೆಗಳನ್ನು ಅಳವಡಿಸಬೇಕು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಹರಿಬಾಬು.ಬಿ.ಎಲ್ ಮಾತನಾಡಿ, ಡಾ.ಪುನೀತ್ ರಾಜಕುಮಾರ ವೃತ್ತದ ಬಳಿ ನಾಲ್ಕು ಚಕ್ರದ ವಾಹನಗಳ ಪಾರ್ಕಿಂಗ್ ನಿಯೋಜಿಸಬೇಕಿದೆ. ಹೊಸಪೇಟೆ ನಗರದ ರಾಷ್ಟ್ರೀಯ ಹೆದ್ದಾರಿ–50 ರಲ್ಲಿ ಬರುವ ಟನಲ್ ನಲ್ಲಿ ಸಿಸಿ ಕ್ಯಾಮರಾಗಳನ್ನು ಅಳವಡಿಸಲು ಕ್ರಮವಹಿಸಬೇಕು. ನಗರ ಸೇರಿದಂತೆ ಗ್ರಾಮೀಣ ಭಾಗದಲ್ಲಿ ರಸ್ತೆಗೆ ಅಡ್ಡಲಾಗಿರುವ ಮರಗಳ ಕೊಂಬೆಗಳನ್ನು ತೆರವುಗೊಳಿಸಬೇಕು. ಹೊಸಪೇಟೆ, ಹರಪನಹಳ್ಳಿ, ಕೂಡ್ಲಿಗಿ, ಹಾಗೂ ಹಗರಿಬೊಮ್ಮನಹಳ್ಳಿಯಲ್ಲಿ ಆಟೋ ನಿಲ್ದಾಣ ನಿರ್ಮಾಣ ಮಾಡಲು ಸಂಬಂಧಿಸಿದ ಉಪವಿಭಾಗದ ಅಧಿಕಾರಿಗಳು ಮತ್ತು ಟ್ರಾಫಿಕ್ ಪೊಲೀಸರು ಜಂಟಿಯಾಗಿ ಸ್ಥಳ ಗುರುತಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು. ಹೊಸಪೇಟೆ ನಗರದಲ್ಲಿ ಒಟ್ಟು 20 ಆಟೋ ಸ್ಟಾಂಡ್‌ಗಳನ್ನು ಗುರುತಿಸಿದ್ದು, ಈಗಾಗಲೇ 10 ಹಂತಗಳಲ್ಲಿ ನಿರ್ಮಿಸಲು ಸೂಚಿಸಿದರು. ಮೊದಲ ಹಂತದಲ್ಲಿ ಪ್ರತಿಯೊಂದು ಸ್ಟಾಂಡ್‌ಗಳಲ್ಲಿ ಕನಿಷ್ಠ 10–15 ಆಟೋಗಳನ್ನು ನಿಲ್ಲಿಸಲು ಅನುಕೂಲ ಕಲ್ಪಿಸಬೇಕಿದೆ

ಎಂದರು. ಸಭೆಯಲ್ಲಿ ಸಾರಿಗೆ ಇಲಾಖೆ, ಪಿಡಬ್ಲೂಡಿ, ಎನ್‌ಎಚ್‌ಎಐ ಸೇರಿ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಪಠ್ಯಪುಸ್ತಕ, ಸಮವಸ್ತ್ರ ಉಚಿತ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 25 : ಅಂತರರಾಷ್ಟ್ರೀಯ ಯೋಗ ದಿನಾಚರಣೆ ನಿಮಿತ್ತ ಇಲ್ಲಿಯ ಕೃಷಿ ಕಾಲೊನಿಯಲ್ಲಿ ಇರುವ ಚಾಲುಕ್ಯ ಪೂರ್ವ ಪ್ರಾಥಮಿಕ ಶಾಲೆಯಲ್ಲಿ ಈಚೆಗೆ ಮಕ್ಕಳಿಗೆ ಉಚಿತ ಪಠ್ಯಪುಸ್ತಕ, ನೋಟ್‌ಪುಸ್ತಕ, ಸಮವಸ್ತ್ರ ಹಾಗೂ ಬ್ಯಾಗ್ ವಿತರಿಸಲಾಯಿತು.

ಮಕ್ಕಳ ಅನುಕೂಲಕ್ಕಾಗಿ ವಿವಿಧ ಸಾಮಗ್ರಿಗಳನ್ನು ಉಚಿತವಾಗಿ ವಿತರಿಸಲಾಗಿದೆ ಎಂದು ಶಾಲೆಯ ಅಧ್ಯಕ್ಷ ಶಿವಕುಮಾರ ನಾಗೂರೆ ತಿಳಿಸಿದರು.

ಯೋಗ ಶಿಕ್ಷಕ ಶಿವಕುಮಾರ ರೆಡ್ಡಿ, ಚಿಂತಕ ವಿನಾಯಕ, ಸಮೃದ್ಧಿ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಪುನೀತ್ ಸಾಳೆ, ಪ್ರಮುಖರಾದ ಗಣಪತಿ, ರಾಕೇಶ್, ಶಿಕ್ಷಕರಾದ ಆಶಾರಾಣಿ ಮೇತ್ರೆ, ರಾಧಾ, ಗೀತಾ, ರೇಣುಕಾ ಧೂಳೆ ಮತ್ತಿತರರು ಇದ್ದರು.

# ಶನಿವಾರ ಶಾಲಾ ಅವಧಿ ಬದಲಿಸಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 25 : ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಶನಿವಾರದ ಅವಧಿ ಬದಲಿಸಬೇಕು ಎಂದು ಕಲ್ಯಾಣ ಕರ್ನಾಟಕ ಪ್ರೌಢಶಾಲಾ ಶಿಕ್ಷಕರ ಸಂಘ ಆಗ್ರಹಿಸಿದೆ.

ಸಂಘದ ಪದಾಧಿಕಾರಿಗಳು ನಗರದಲ್ಲಿ ಮಂಗಳವಾರ ಈ ಕುರಿತು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸಲೀಂ ಪಾಶಾ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಇಲಾಖೆಯ ಆದೇಶದ ಹಿನ್ನೆಲೆಯಲ್ಲಿ ಪ್ರಸಕ್ತ ಶೈಕ್ಷಣಿಕ ವರ್ಷದ ಆರಂಭದಿಂದ ಶನಿವಾರ ಬೆಳಿಗ್ಗೆ 7.30 ರಿಂದ ಮಧ್ಯಾಹ್ನ 12 ರ ವರೆಗೆ ತರಗತಿ ನಡೆಸಲಾಗುತ್ತಿದೆ. ಆದರೆ, ಈ ಅವಧಿ ಅನುಕೂಲಕರವಾಗಿರದ ಕಾರಣ ಅರ್ಧಕ್ಕೂ ಹೆಚ್ಚು ಮಕ್ಕಳು ವಿಳಂಬ ಇಲ್ಲವೇ ಗೈರು ಹಾಜರಾಗುತ್ತಿದ್ದಾರೆ ಎಂದು ಗಮನ ಸೆಳೆದರು.

ಶಿಕ್ಷಕರು ಸಕಾಲಕ್ಕೆ ಹಾಜರಾಗುತ್ತಿದ್ದರೂ, ಶಾಲೆ ಅವಧಿ ಬೇಗ ಇರುವುದರಿಂದ ವಾಹನ ಸೌಕರ್ಯ ಹಾಗೂ ಇತರ ಕಾರಣಗಳಿಂದ ಬಹಳಷ್ಟು ಮಕ್ಕಳಿಗೆ ಶಾಲೆಗೆ ಬರಲು ವಿಳಂಬವಾಗುತ್ತಿದೆ. ಇದರಿಂದ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆಯಾಗುತ್ತಿದೆ. ವಿಶೇಷವಾಗಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗುತ್ತಿದೆ ಎಂದು ತಿಳಿಸಿದರು. ಕಳೆದ ಶೈಕ್ಷಣಿಕ ವರ್ಷದಂತೆ ಶನಿವಾರ ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.30 ರ ವರೆಗೆ ತರಗತಿ ನಡೆಸಲು ಕ್ರಮ ಕೈಗೊಳ್ಳಬೇಕು ಎಂದು ಬೇಡಿಕೆ ಮಂಡಿಸಿದರು. ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಪಾಂಡುರಂಗ ಬೆಲ್ದಾರ್, ಉಪಾಧ್ಯಕ್ಷ ಸೂರ್ಯಕಾಂತ, ತಾಲ್ಲೂಕು ಘಟಕದ ಗೌರವಾಧ್ಯಕ್ಷ ಶಕೀಲ್ ಜಾಫ್ರಿ, ಅಧ್ಯಕ್ಷ ವೈಜಿನಾಥ ಸಾಳೆ, ಪ್ರಧಾನ ಕಾರ್ಯದರ್ಶಿ ಬಲವಂತರಾವ್ ರಾಠೋಡ್, ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಶ್ರೀನಿವಾಸ್, ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ರಾಜು ಸಾಗರ್, ಕರ್ನಾಟಕ ರಾಜ್ಯ ಪ್ರೌಢಶಾಲಾ ಶಿಕ್ಷಕರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಶಂಕರ ಬಾಪುರೆ, ಪ್ರಮುಖರಾದ ಎಂ.ಡಿ. ಶಾಬುದ್ದೀನ್, ಶಾಮಸುಂದರ ಖಾನಾಪುರೆ, ಸಂಜೀವ್ ರಾಜನಾಳೆ, ಜೈಸಿಂಗ್ ಠಾಕೂರ್ ಇದ್ದರು.

# ಪ್ರವೇಶಾತಿ ಅವಧಿ ವಿಸ್ತರಣೆ

ಬೀದರ. ಜೂ. 25 : ಬೀದರ ವಿಶ್ವವಿದ್ಯಾಲಯದ ಅಡಿಯಲ್ಲಿ ಬರುವ ಎಲ್ಲಾ ಸಂಯೋಜಿತ ಸ್ನಾತಕ ಮಹಾವಿದ್ಯಾಲಗಳಲ್ಲಿ 2025–26ನೇ ಶೈಕ್ಷಣಿಕ ಸಾಲಿನ ಬಿ.ಎ/ಬಿ.ಎಸ್ಸಿ/ಬಿ.ಕಾಂ ಬಿ.ಬಿ.ಎ/ಬಿ.ಸಿ.ಎ ಮತ್ತು ಬಿ.ಯೋಕ್ ಕೋರ್ಸುಗಳಿಗೆ ಪ್ರವೇಶಾತಿ ಪಡೆಯುವ ಅವಧಿಯನ್ನು ಜುಲೈ.4 ರವರೆಗೆ ದಂಡ ರಹಿತ ಹಾಗೂ ಜುಲೈ.15 ರವರೆಗೆ ದಂಡ ಸಹಿತ ವಿಸ್ತರಿಸಲಾಗಿದೆ ಎಂದು ಬೀದರ ವಿಶ್ವವಿದ್ಯಾಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈಗಾಗಲೇ ದಿನಾಂಕ. 25–06–2025 ರವರೆಗೆ ದಂಡ ರಹಿತ ಪ್ರವೇಶಾತಿಗೆ ಅಧಿಸೂಚನೆ ಹೊರಡಿಸಲಾಗಿತ್ತು. ಕುಲಪತಿಗಳ ಅನುಮೋದನೆ ಮೇರೆಗೆ ಪ್ರವೇಶಾತಿ ದಿನಾಂಕವನ್ನು ವಿಸ್ತರಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ವಸಂತವರಾವ್‌ಗೆ ಪಿಎಚ್‌ಡಿ ಪದವಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.25– ನಗರದ ವಿದ್ಯಾಗಿರಿಯ ಪ್ರವೀಣ ವಸಂತರಾವ ಕಾಕಡೆ ಅವರು ಹಿಂದಿ ವಿಷಯದಲ್ಲಿ 'ಸಮಕಾಲೀನ ಪ್ರಮುಖ ಹಿಂದಿ ಕಹಾನಿಯೊಂ ಮೇ ಪರಿವರ್ತಿತ್ ಮಾನವ ಮೂಲ್ಯ' (2001 ಸೇ 2015 ತಕ್) ಎಂಬ ವಿಷಯ ಕುರಿತು ಮಂಡಿಸಿದ ಪ್ರಬಂಧಕ್ಕೆ ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯ ಪಿಎಚ್‌ಡಿ ನೀಡಿದೆ. ಧಾರವಾಡ ಕರ್ನಾಟಕ ಕಲಾ ಮಹಾವಿದ್ಯಾಲಯದ ಹಿಂದಿ ವಿಭಾಗದ ಸಹಾಯ ಪ್ರಾಧ್ಯಾಪಕ ಡಾ.ಝುಡ್.ಎ.ಗುಳಗುಂದಿ ಅವರು ಪ್ರವೀಣ ಕಾಕಡೆ ಅವರಿಗೆ ಮಾಗದರ್ಶನ ನೀಡಿದ್ದಾರೆ.

# ದೇಶದ ಸೈನಿಕ ಶಕ್ತಿ ಬಲಿಷ್ಠ:ಸುಧೀಂದ್ರ ಇಟ್ನಾಳ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.25– ಭಾರತದ ಸೈನಿಕ ವ್ಯವಸ್ಥೆ ಅತ್ಯಂತ ಬಲಿಷ್ಠವಾಗಿದ್ದು, ರಾಷ್ಟ್ರಧರ್ಮವೇ ಸೈನಿಕರ ಧರ್ಮವಾಗಿದೆ ಎಂದು ನಿವೃತ್ತ ಬ್ರಿಗೇಡಿಯರ್ ಸುಧೀಂದ್ರ ಇಟ್ನಾಳ ಹೇಳಿದರು. ನವನಗರದ ಎಂ.ಆರ್.ಎನ್ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನಲ್ಲಿ ವಿದ್ಯಾರ್ಥಿಗಳ ವ್ಯಕ್ತಿತ್ವ ಬೆಳವಣಿಗೆ ಮತ್ತು ರಾಷ್ಟ್ರಧರ್ಮ ಕುರಿತು ಅವರು ವಿಶೇಷ ಉಪನ್ಯಾಸ ನೀಡಿ, ಸದೃಢ ದೇಹದಲ್ಲಿ ಆರೋಗ್ಯಪೂರ್ಣ ಮನಸ್ಸಿರುತ್ತದೆ. ವಿದ್ಯಾರ್ಥಿಗಳು ಆರೋಗ್ಯ ಕಾಪಾಡಿಕೊಳ್ಳುವ ಬಗ್ಗೆ ಹೆಚ್ಚಿನ ಗಮನ ನೀಡಬೇಕು. ವಿಜ್ಞಾನ ತಂತ್ರಜ್ಞಾನ ಬಹಳಷ್ಟು ಬೆಳೆದಿದೆ. ಮೂಢನಂಬಿಕೆ ಕಂದಾಚಾರಗಳಿಂದ ದೂರ ಇರಬೇಕು ಎಂದರು. ಮಾಜಿ ಸಚಿವ ಎಂ.ಆರ್.ಎನ್ ಸಂಸ್ಥೆಯ ಅಧ್ಯಕ್ಷ ಮುರುಗೇಶ ನಿರಾಣಿ ಅಧ್ಯಕ್ಷತೆ ವಹಿಸಿದ್ದರು. ಕರ್ನಾಟಕ ಬೈಲಾಟ ಅಕಾಡೆಮಿ ಪ್ರಶಸ್ತಿ ಪಡೆದ ಜಾನಪದ ಕಲಾವಿದ ಕೃಷ್ಣ ಪೂಜಾರಿ, ಪತ್ರಕರ್ತ ಮಲ್ಲಿಕಾರ್ಜುನ ಹೆಗ್ಗಳಗಿ, ಡಾ.ಶಿವಕುಮಾರ್ ಗಂಗಲ ಮಾತನಾಡಿದರು. ಪ್ರಾಚಾರ್ಯ ಪ್ರಹ್ಲಾದ ಗಂಗಾವತಿ, ಇಂಜಿನಿಯರ್ ಭರತ ಇಟ್ಟಿ ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಇಟ್ನಾಳ್ ದಂಪತಿಗಳ್ನು ಸಂಸ್ಥೆಯ ಪರವಾಗಿ ಸನ್ಮಾನಿಸಲಾಯಿತು.

# ಹಾಲು ಮತ್ತು ಡೈರಿ ಉತ್ಪನ್ನಗಳಿಗೆ ಹೆಚ್ಚಿದ ಬೇಡಿಕೆ




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಜೂ.25: ರೈತರು ಸರಿಯಾದ ನಿರ್ವಹಣೆ, ವೈಜ್ಞಾನಿಕ ವಿಧಾನಗಳನ್ನು ಅಳವಡಿಸಿಕೊಂಡರೆ ಕೃಷಿ ಮತ್ತು ಹೈನುಗಾರಿಕೆಯಿಂದ ಉತ್ತಮ ಆದಾಯಗಳಿಸಬಹುದು. ಹಾಲು ಮತ್ತು ಡೈರಿ ಉತ್ಪನ್ನಗಳಿಗೆ ಬೇಡಿಕೆ ಹೆಚ್ಚಿದೆ ಎಂದು

ಬೀದರ್ ಹೈನು ಅಭಿವೃದ್ಧಿಯ ಜಿಲ್ಲಾ ನಿರ್ದೇಶಕ ಎಸ್.ಎಸ್. ಹಿರೇಮಠ ಹೇಳಿದರು.

ತಾಲ್ಲೂಕಿನ ನೀಲಮ್ಮನಳ್ಳಿ ಗ್ರಾಮದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಂಸ್ಥೆವತಿಯಿಂದ ಆಯೋಜಿಸಿದ್ದ ಕೃಷಿ ತರಬೇತಿ, ಹೈನುಗಾರಿಕೆ ಪ್ರಾತ್ಯಕ್ಷಿಕೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪಶು ಆಹಾರ ಮತ್ತು ಮೇವು ನೀಡುವ ಪದ್ಧತಿಯಲ್ಲಿ ಬದಲಾವಣೆ ಮಾಡಿಕೊಳ್ಳಬೇಕು. ಮಳೆಗಾಲದಲ್ಲಿ, ಬೇಸಿಗೆಕಾಲದಲ್ಲಿ ಒಣ ಮತ್ತು ಹಸಿ ಮೇವನ್ನು ಕ್ರಮವಾಗಿ ಹಾಕುವುದರಿಂದ ಹಾಲಿನ ಇಳುವರಿ ಮತ್ತು ಕೊಬ್ಬಿನ ಅಂಶವುಳ್ಳ ಹಾಲನ್ನು ಪಡೆಯಬಹುದು ಎಂದು ತಿಳಿಸಿದರು. ಅಜೋಲಾ ಘಟಕದಲ್ಲಿ ಮೆಕ್ಕೆಜೋಳ ಪ್ರಾತ್ಯಕ್ಷಿಕೆ ಮಾಡಿ ತೋರಿಸಲಾಯಿತು.

ಇದೇ ಸಂದರ್ಭದಲ್ಲಿ ನೀಲಮ್ಮನಳ್ಳಿ ಹಾಲು ಉತ್ಪಾದಕರ ಘಟಕ–ಕ್ಕೆ ಹಾಲಿನ ಸ್ಟೀಲ್ ಕ್ಯಾನ್, ಕಂಪ್ಯೂಟರ್ ಸಿಸ್ಟಮ್ ಹಸ್ತಾಂತರ ಮಾಡಲಾಯಿತು.

ಗೌತಮಿ ಹೆಸರಿನ ಹೊಸ ಸಂಘದ ಉದ್ಘಾಟನೆ ಮಾಡಲಾಯಿತು.

ಹೈನುಗಾರಿಕಾ ಅಭಿವೃದ್ಧಿ ಸಮನ್ವಯ ಅಧಿಕಾರಿ ಅರುಣಕುಮಾರ ಮಾತನಾಡಿದರು.

ಬ್ಯಾಲಹಳ್ಳಿ ವಲಯದ ಮೇಲ್ವಿಚಾರಕ ಸುರೇಶ, ಕೃಷಿ ಮೇಲ್ವಿಚಾರಕ ಮಹೇಶ, ಹೈನುಗಾರಿಕೆ ಪ್ರಬಂಧಕ ಸಂದೀಪ, ಸ್ಥಳೀಯ ಸೇವಾ ಪ್ರತಿನಿಧಿ ಲಕ್ಷ್ಮಿ ಸೇರಿದಂತೆ ಇತರರು ಇದ್ದರು.

# ಮಾದಕ ದ್ರವ್ಯ ಸೇವನೆಯಿಂದ ಅಪರಾಧ ಕೃತ್ಯ ಹೆಚ್ಚಳ :ಚಂದ್ರಶೇಖರ ನಿರ್ಣೆ




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜೂ.25:ಮಾದಕ ದ್ರವ್ಯ ಸೇವನೆ ಮೂಲಕ ಶರೀರದ ಮೇಲೆ ಗಾಡ ಪರಿಣಾಮ ಬೀರಿ ಅಪರಾಧ ಕೃತ್ಯಗಳಲ್ಲಿ ತೊಡಗುವ ಮೂಲಕ ಆರೋಗ್ಯವಂತ ಸಮಾಜದ ಪರಿಕಲ್ಪನೆ ಹಾಳಾಗುತ್ತಿದೆ. ಈ ನಿಟ್ಟಿನಲ್ಲಿ ಮಾದಕ ದ್ರವ್ಯ ವಿರೋಧಿ ದಿನದ ಮೂಲಕ ನಾವೆಲ್ಲರು ಮಾದಕ ವಸ್ತುಗಳ ಚಟದಿಂದ ಮುಕ್ತರಾಗಬೇಕು ಎಂದ ಪಿಎಸ್‌ಐ ಚಂದ್ರಶೇಖರ ನಿರ್ಣೆ ಹೇಳಿದರು.

ಪಟ್ಟಣದ ಶಾಂತಿವರ್ಧಕ ಪಿಯು ಕಾಲೇಜಿನಲ್ಲಿ ಜಿಲ್ಲಾ ಪೊಲೀಸ್ ಇಲಾಖೆ ಮತ್ತು ಕಮಲನಗರ ಪೊಲೀಸ್ ಠಾಣೆ ಸಂಯುಕ್ತಾಶ್ರಯದಲ್ಲಿ ಮಂಗಳವಾರ ಅಂತಾರಾಷ್ಟ್ರೀಯ ಮಾದಕ ದ್ರವ್ಯ ವಿರೋಧಿ ದಿನಾಚರಣೆ ನಿಮಿತ್ತ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಗಾಂಜಾ ಸೇವನೆ, ಕೊಕೇನ್, ನಿಕೊಟಿನ್ ಅಶ್ಲೀಲ್ ವ್ಯಸನ, ಲೈಗಿಂಕ ವ್ಯಸನ ಮುಂತಾದ ಗೀಳು ಯುವ ಜನಾಂಗದ ವ್ಯಕ್ತಿತ್ವದ ಮೇಲೆ ಗಾಢ ಪರಿಣಾಮ ಬೀರುತ್ತಿದೆ ಹಾಗಾಗಿ ಮಕ್ಕಳು ಇಂತಹ ಕೆಟ್ಟ ಚಟ್ಟಗಳಿಂದ ದೂರ ಇರಲು ಕಿವಿ ಮಾತು ಹೇಳಿದರು.

ಸಂಗಮೇಶ ನಳಗೇರೆ ಉಪ ಪ್ರಾಚಾರ್ಯ ಮಾತನಾಡಿ, ಭವಿಷ್ಯತ್ತಿನ ಉತ್ತಮ ಪ್ರಜೆಗಳಾಗಿ ಸುಂದರ ಸಮಾಜ ನಿರ್ಮಿಸಲು ವಿದ್ಯಾಭ್ಯಾಸದ ಕಡೆಗೆ ವಿದ್ಯಾರ್ಥಿಗಳು ಹೆಚ್ಚು ಗಮನ ಹರಿಸಬೇಕು. ಯಾವುದೇ ಕಾರಣಕ್ಕೂ ಮಾದಕ ವಸ್ತುಗಳ ವ್ಯಸನಿಗಳಾಗಬಾರದು. ಕುಟುಂಬದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಉಪನ್ಯಾಸಕರಾದ ಶರಣಗೌಡ ಪಾಟೀಲ್, ವಿಜಯಕುಮಾರ ವಾರದ, ಶಿವಶಂಕರ ಕಾಂಬಳೆ, ಕಾಳಿದಾಸ ಬೌದ್ದೆ, ಕಾದಂಬಿನಿ ಮೇತ್ರೆ, ವೆಂಕಟ ಮೋರೆ, ಚಂದ್ರಕಾಂತ ಬೈರೆ, ಪೊಲೀಸ್ ಸಿಬ್ಬಂದಿ ಲೊಕೇಶ ತೆಲಂಗ, ಶಿವಾನಂದ ಫುಲಾರೆ, ವಸಂತ ಮೇತ್ರೆ, ಪ್ರಶಾಂತ ಧೋತ್ರೆ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಜೂ.27 ಕೆಂಪೇಗೌಡ ಜಯಂತಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.25– ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜೂನ್ 27 ರಂದು ಬೆಳಿಗ್ಗೆ 9.30 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ಕೆಂಪೇಗೌಡ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಕಾರ್ಯಕ್ರಮ ಉದ್ಘಾಟಿಸುವರು. ಅಧ್ಯಕ್ಷತೆಯನ್ನು ಶಾಸಕ ಎಚ್.ವಾಯ್.ಮೇಟಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಪ್ರಕಾಶ ಹುಕ್ಕೇರಿ, ಶಾಸಕ ಜೆ.ಟಿ.ಪಾಟೀಲ, ಶಾಸಕ ಹಾಗೂ ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ ಸೇರಿದಂತೆ ಜಿಲ್ಲೆಯ ಎಲ್ಲ ಶಾಸಕರು, ವಿಧಾನ ಪರಿಷತ್ ಶಾಸಕರು ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ.

# ಅಂಗಡಿ ಮುಂಗಟ್ಟು, ಜಾಹಿರಾತು ಫಲಕಗಳಲ್ಲಿ ಕನ್ನಡ ಕಡ್ಡಾಯಗೊಳಿಸಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜೂ.25:ಅಂಗಡಿ ಮುಂಗಟ್ಟು, ಜಾಹಿರಾತು ಫಲಕಗಳಲ್ಲಿ ಕನ್ನಡ ಕಡ್ಡಾಯಗೊಳಿಗಡಿ ತಾಲೂಕಿನಲ್ಲಿ ಕನ್ನಡ ಬಳಕೆ ಮಾಡುವಂತೆ ಕರವೇ ಕಮಲನಗರ ತಾಲೂಕ ಅಧ್ಯಕ್ಷ ಮಂಜುನಾಥ್ ಸ್ವಾಮಿ ಅವರ ನೇತೃತ್ವದಲ್ಲಿ ಕಮಲನಗರ ಗ್ರಾಮ ಪಿಡಿಒ ಅವರಿಗೆ ಮನವಿ ಪತ್ರ ನೀಡಿ ಒತ್ತಾಯಿಸಿದ್ದರು.

ಈ ಸಂದರ್ಭದಲ್ಲಿ ಮಾತನಾಡಿ, ನಮ್ಮ ರಾಜ್ಯಾಧ್ಯಕ್ಷ ನಾರಾಯಣಗೌಡರ ಪ್ರತಿಭಟನೆಗೆ ಮಣಿದ ರಾಜ್ಯ ಸರಕಾರ ಡಿಸೆಂಬರ್ 29, 2023 ರಂದು ಕರ್ನಾಟಕ ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ರಾಜ್ಯದಲ್ಲಿ ಎಲ್ಲಾ ಅಂಗಡಿ ಮುಂಗಟ್ಟುಗಳು ರಸ್ತೆ ಬದಿಯ ಜಾಹಿರಾತು ಫಲಕಗಳು ಕನ್ನಡದಲ್ಲಿ ಶೇ 60% ರಷ್ಟು ನಾಮ ಫಲಕ ಅಳವಡಿಸಲು ಸುಗ್ರಿವಾಜ್ಞೆ ಹೊರಡಿಸಿರುತ್ತಾರೆ.

ಆದರೆ ಗಡಿ ತಾಲುಕು ಕೇಂದ್ರವಾದ ಕಮಲನಗರದಲ್ಲಿ ಶಾಲಾ ಶಿಕ್ಷಣ ಸಂಸ್ಥೆಗಳು, ಅಂಗಡಿ ಮುಂಗಟ್ಟುಗಳು, ರಸ್ತೆ ಬದಿಯಲ್ಲಿನ ಜಾಹಿರಾತು ಫಲಕಗಳ ಮೇಲೆ ಪರ ಭಾಷೆಗಳಲ್ಲಿ ಅಳವಡಿಸುತ್ತಿರುವುದು ವಿಷಾಧನೀಯ ಸಂಗತಿಯಾಗಿರುತ್ತದೆ. ಸರ್ಕಾರದ ಸ್ಪಷ್ಟ ಆದೇಶವಿದ್ದರೂ ಕನ್ನಡ ನಾಮಫಲಕ ಕಡ್ಡಾಯ ಸಮರ್ಪಕವಾಗಿ ಜಾರಿಗೆ ತರಲು ತಾವುಗಳು ನಿರ್ಲಕ್ಷಿಸುತ್ತಿರುವುದು ಕರ್ನಾಟಕ ರಕ್ಷಣಾ ವೇದಿಕೆ ತೀವ್ರವಾಗಿ ಖಂಡಿಸುತ್ತದೆ ಎಂದು ಹೇಳಿದರು.

ಪ್ರಶಾಂತ ಖಾನಾಪುರೆ ಕರವೇ ತಾಲೂಕ ಪ್ರಧಾನ ಕಾರ್ಯದರ್ಶಿ ಮಾತನಾಡಿ, ನಾವು ಈ ಸಂಬಂಧ ತಹಸೀಲ್ದಾರ, ಇಒ ಹಾಗೂ ಆರಕ್ಷಕ ಗಮನಕ್ಕೆ ತಂದಿದೆ, ಒಂದು ವಾರದ ಒಳಗೆ ಬದಲಾವಣೆ ಮಾಡದೇ ಇದ್ದಲೇ ನಮ್ಮ ಸಂಘನೆ ನಿಂದ ಅಂತಹ ನಾಮಫಲಗಳಿಗೆ ಮಸಿ ಬಳಿದು ಹೋರಾಟ ಮಾಡಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಕರವೇ ಗೌರವ ಅಧ್ಯಕ್ಷ ರಾದ ಸುಭಾಸ ಮಿರ್ಚೆ, ಸುಭಾಷ ಗಾಯಕವಾಡ, ಬಸವರಾಜ ಕಾಂಬಳೆ, ಅಜಯ ಪಾಟೀಲ, ಸಂಗಮೇಶ, ಸುನಿಲ ಸೇರಿದಂತೆ ಇನ್ನಿತರ ಇದ್ದರು.

# ಪುರಸಭೆ/ ತಹಸೀಲ್ ಕಚೇರಿಯ ಆವರಣದಲ್ಲಿ ಮುಷ್ಕರ, ಸತ್ಯಾಗ್ರಹ ನಿಷೇಧ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಜೂ.25: ಪಟ್ಟಣದ ಪುರಸಭೆ, ತಹಸೀಲ್ ಕಚೇರಿ ಆವರಣದಲ್ಲಿ ಸಾರ್ವಜನಿಕರು, ಸಂಘ ಸಂಸ್ಥೆಗಳು ಮುಷ್ಕರ ಸತ್ಯಾಗ್ರಹಗಳನ್ನು ಮಾಡುವುದನ್ನು ನಿಷೇಧಿಸಲಾಗಿದೆ ಎಂದು ತಹಸೀಲ್ದಾರ್ ಮಂಜುನಾಥ್ ಪಂಚಾಳ ತಿಳಿಸಿದ್ದಾರೆ.

ಪುರಸಭೆ ಮತ್ತು ತಹಸೀಲ್ ಕಚೇರಿ ಆವರಣದಲ್ಲಿ ಪ್ರತಿಭಟನೆ, ಮುಷ್ಕರ ಹಾಗೂ ಸತ್ಯಾಗ್ರಹಗಳನ್ನು ಹಮ್ಮಿಕೊಳ್ಳುತ್ತಿರುವುದರಿಂದ ಕಚೇರಿಯ ಕೆಲಸ ಕಾರ್ಯಗಳಿಗೆ ಹಾಗೂ ಸಾರ್ವಜನಿಕರಿಗೆ ಅಡಚಣೆ ಉಂಟಾಗುತ್ತಿದೆ. ಆದರಿಂದ ಕಚೇರಿಯ ಆವರಣದಲ್ಲಿ ಸಾರ್ವಜನಿಕರು, ಸಂಘ ಸಂಸ್ಥೆಗಳು ಧರಣಿ ಸತ್ಯಾಗ್ರಹ ಪ್ರತಿಭಟನೆ ಮಾಡುವುದನ್ನು ನಿಷೇಧಿಸಲಾಗಿದೆ. ಒಂದು ವೇಳೆ ಕಚೇರಿಯ ಆವರಣದಲ್ಲಿ ಪ್ರತಿಭಟನೆ, ಮುಷ್ಕರ, ಸತ್ಯಾಗ್ರಹಗಳು ಹಮ್ಮಿಕೊಂಡಿದ್ದಲ್ಲಿ ಸಂಬಂಧಪಟ್ಟವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಹಸೀಲ್ದಾರ್ ಮಂಜುನಾಥ್ ಪಂಚಾಳ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹವಾಮಾನ ಆಧಾರಿತ ಬೆಳೆ ವಿಮೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.25–2025–26ನೇ ಸಾಲಿನ ಮುಂಗಾರು ಹಂಗಾಮಿಗಾಗಿ ಜಿಲ್ಲೆಯ 9 ತಾಲೂಕುಗಳಲ್ಲಿ ದ್ರಾಕ್ಷಿ ಮತ್ತು ದಾಳಿಂಬೆ ಬೆಳೆಗಳಿಗೆ ಹವಾಮಾನ ಆಧಾರಿತ ಮರುವಿನ್ಯಾಸಗೊಳಿಸಿದ ಬೆಳೆ ವಿಮೆ ಯೋಜನೆ ಘೋಷಿಸಲಾಗಿದೆ. ಬ್ಯಾಂಕ ಮೂಲಕ ಸಾಲ ಪಡೆದ ರೈತರು ಸಂಬಂಧಿತ ಬ್ಯಾಂಕಗಳಲ್ಲಿ ಹಾಗೂ ಸಾಲ ಪಡೆಯದವರು ಹತ್ತಿರದ ಸಿಎಸಸಿ, ಗ್ರಾಮ ಒನ್ ಕೇಂದ್ರ ಅಥವಾ ತಮ್ಮ ಬ್ಯಾಂಕಗಳಲ್ಲಿ ವಿಮೆ ಕಂತು ಪಾವತಿಸಬಹುದಾಗಿದೆ. ದಾಳಿಂಬೆ ಬೆಳೆಗೆ ಪ್ರತಿ ಹೆಕ್ಟೇರಿಗೆ 7620 ರೂ, ದ್ರಾಕ್ಷಿ ಬೆಳೆಗೆ 14000 ರೂ ವಿಮೆ ಕಂತು ನಿಗದಿಯಾಗಿದೆ. ಕಂತು ಪಾವತಿಯ ಕೊನೆಯ ಜುಲೈ 31 ಆಗಿದ್ದು, ಯೋಜನೆಯ ಲಾಭ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ರೈತ ಸಂಪರ್ಕ ಕೇಂದ್ರ ಇವರನ್ನು ಸಂಪರ್ಕಸುವಂತೆ ತೋಟಗಾರಿಕೆ ಉಪನಿರ್ದೇಶಕ ರವೀಂದ್ರ ಹಕಾಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಮಾಸಿಕ ಶರಣ ಚಿಂತನಗೋಷ್ಠಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.25– ವಿದ್ಯಾಗಿರಿಯ ಕುಮಾರೇಶ್ವರ ವಿಶ್ವಧರ್ಮ ಶಾಂತಾಶ್ರಮ, ಸಮಾನಮನಸ್ಕ ಹಿರಿಯ ನಾಗರಿಕ ವೇದಿಕೆ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ಕರ್ನಾಟಕ ವಚನ ಸಾಹಿತ್ಯ ಪರಿಷತ್ ಜಿಲ್ಲಾ ಘಟಕ, ಅಖಿಲ ಭಾರತೀಯ ಸಾಹಿತ್ಯ ಪರಿಷತ್ ಜಿಲ್ಲಾ ಘಟಕ ಹಾಗೂ ವರದಾನೇಶ್ವರಿ ಮಹಿಳಾ ಮಂಡಳ ಇವುಗಳ ಸಂಯುಕ್ತ ಆಶ್ರಯದಲ್ಲಿ ಜೂ.26 ರಂದು 38 ನೇ ಮಾಸಿಕ ಶರಣ ಚಿಂತನಗೋಷ್ಠಿ ನಡೆಯಲಿದೆ.

ಗುರುವಾರ ಸಾಯಂಕಾಲ 6 ಗಂಟೆಗೆ ವಿದ್ಯಾಗಿರಿಯ ಸಾಯಿಮಂದಿರದಲ್ಲಿ ನಡೆಯುವ ಚಿಂತನಗೋಷ್ಠಿಯ ಸಾನಿಧ್ಯವನ್ನು ಚರಂತಿಮಠದ ಪ್ರಭುಸ್ವಾಮಿಗಳು ವಹಿಸಲಿದ್ದಾರೆ. ಕುಮಾರೇಶ್ವರ ವಿಶ್ವಧರ್ಮ ಶಾಂತಾಶ್ರಮದ ಅಧ್ಯಕ್ಷ ಜಿ.ಎನ್.ಪಾಟೀಲ ಅಧ್ಯಕ್ಷತೆ ವಹಿಸಲಿದ್ದು, ಬಸವೇಶ್ವರ ಕಲಾ ಮಹಾವಿದ್ಯಾಲಯದ ಪ್ರಾಧ್ಯಾಪಕ ಡಾ.ಬಸವರಾಜ ಕುಂಬಾರ ಶರಣ ಮೇದಾರ ಕೇತಯ್ಯ ಅವರ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಸಮಾನಮನಸ್ಕ ಹಿರಿಯ ನಾಗರಿಕ ವೇದಿಕೆ ಅಧ್ಯಕ್ಷ ಡಾ.ಸಿ.ಎಸ್.ಪಾಟೀಲ, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಎ.ಎಸ್.ಪಾವಟೆ, ಕರ್ನಾಟಕ ವಚನ ಸಾಹಿತ್ಯ ಪರಿಷತ್ ಅಧ್ಯಕ್ಷ ಶ್ರೀಶೈಲ ಕರಿಶಂಕರಿ, ವರದಾನೇಶ್ವರಿ ಮಹಿಳಾ ಮಂಡಳ ಅಧ್ಯಕ್ಷೆ ಪಾರ್ವತಮ್ಮ ಬಳೂಲಮಠ, ಭಾರತೀಯ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಮಾರುತಿ ಪಾಟೋಳಿ ಉಪಸ್ಥಿತರಿರುವರು.

ಬೆಳಗಾವಿಯ ರಾಣಿಚೆನ್ನಮ್ಮ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪಡೆದಿರುವ ಚರಂತಿಮಠದ ಪ್ರಭುಸ್ವಾಮಿಗಳನ್ನು ಸಮಾರಂಭದಲ್ಲಿ ಸನ್ಮಾನಿಸಲಾಗುವುದು.

ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರು, ಸದಸ್ಯರ ವಿವಿಧೆಡೆ ಭೇಟಿ–ಪರಿಶೀಲನೆ

# ಶಿಕ್ಷಣದ ಬೇಸಾಯ ಕೈಗೊಳ್ಳಿ: ಕೆ.ನಾಗಣ್ಣ ಗೌಡ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.25–ಶಾಲೆ ಮತ್ತು ವಸತಿ ನಿಲಯಗಳಲ್ಲಿ ಗ್ರಾಮೀಣ ಭಾಗದಿಂದ ಮಕ್ಕಳು ಶಿಕ್ಷಣ ಪಡೆಯಲು ಬರುತ್ತಾರೆ. ಮಕ್ಕಳಿಗೆ ಎಲ್ಲಾ ಸೌಲಭ್ಯಗಳನ್ನೊಳಗೊಂಡ ಪೂರಕ ವಾತಾವರಣ ಕಲ್ಪಿಸಬೇಕು. ಅವರಲ್ಲಿ ಶಿಕ್ಷಣದ ಬೇಸಾಯ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಡಾ.ನಾಗಣ್ಣ ಗೌಡ ಅವರು ಹೇಳಿದರು.

ಅವರು, ನಗರದ ಕೋಟೆ ಪ್ರದೇಶದ ಬಾಲಕಿಯರ ವಸತಿ ನಿಲಯ, ವಿದ್ಯಾನಗರದ ನಂದ ವಸತಿ ಶಾಲೆ, ಇಂದಿರಾನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆ ಮತ್ತು ತಾಳೂರು ರಸ್ತೆಯ ಬಾಲಭಾರತಿ ಕೇಂದ್ರಿಯ ವಿದ್ಯಾಲಯಕ್ಕೆ ಭೇಟಿ ನೀಡಿ, ಅಲ್ಲಿನ ಸ್ಥಿತಿ–ಗತಿಗಳ ಪರಿಶೀಲನೆ ನಡೆಸಿ ಸೂಕ್ತ ಮಾರ್ಗದರ್ಶನ ನೀಡಿ ಅವರು ಇತ್ತಿಚೇಗೆ ಮಾತನಾಡಿದರು.

ಮಕ್ಕಳ ಉತ್ತಮ ಜೀವನ ರೂಪಿಸಿಕೊಳ್ಳಲು ವಸತಿನಿಲಯಗಳು ಪೂರಕವಾಗಿದ್ದು, ಇಲ್ಲಿ ಅವರಿಗೆ ಸ್ನೇಹಮಯಿ ವಾತವರಣ ರೂಪಿಸಬೇಕು. ಇದರಿಂದ ಅವರು ದೇಶದ ಅಡಿಪಾಯ ಆಗುತ್ತಾರೆ ಎಂದರು.

ಕೋಟೆ ಪ್ರದೇಶದಲ್ಲಿನ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಮತ್ತು ನಂತರದ ಬಾಲಕಿಯರ ವಸತಿ ನಿಲಯದಲ್ಲಿ ಸುಮಾರು 400 ಕ್ಕೂ ಹೆಚ್ಚು ವಿದ್ಯಾರ್ಥಿಗಳಿದ್ದು,ನಿರ್ವಹಣೆಯೂ ಅಷ್ಟೇ ಸೂಕ್ತವಾಗಿರಬೇಕು. ವಸತಿನಿಲಯದಲ್ಲಿ ಸ್ವಚ್ಛತೆ, ಶೌಚಾಲಯಗಳ ಶುಚಿತ್ವ, ಗುಣಮಟ್ಟದ ಉಟೋಪಚಾರ ಮತ್ತು ಹೆಣ್ಣುಮಕ್ಕಳಿಗೆ ಅಗತ್ಯ ಸ್ಯಾನಿಟರ್ ಪ್ಯಾಡ್ಸ್ ವಿತರಣೆ ಮಾಡಬೇಕು ಎಂದು ನಿಲಯಪಾಲಕರಿಗೆ ಸೂಚಿಸಿದರು.

ವಸತಿನಿಲಯಗಳಲ್ಲಿ ಒಂದೆಡೆ ಎಲ್ಲರಿಗೂ ಗೋಚರಿಸುವಂತೆ ಗೋಡೆಯ ಮೇಲೆ ಮಕ್ಕಳ ಸಹಾಯವಾಣಿ ಸಂಖ್ಯೆ 1098 ನ್ನು ದೊಡ್ಡದಾಗಿ ಬರೆಸಬೇಕು. ಪೋಕ್ಸೋ ಮತ್ತು ಬಾಲ್ಯ ವಿವಾಹ ಕುರಿತಂತೆ ನೀತಿ ಶಿಕ್ಷಣ ಹೇಳಬೇಕು. ಮುಖ್ಯವಾಗಿ ಹೆಣ್ಣುಮಕ್ಕಳ ವಸತಿನಿಲಯಗಳಲ್ಲಿ ಮಕ್ಕಳ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಹೇಳಿದರು.

ಅನುತ್ತೀರ್ಣರಾದ ಮಕ್ಕಳ ಬಗ್ಗೆ ನಿಗಾವಹಿಸಬೇಕು.ಅವರು ವಿದ್ಯಾಭ್ಯಾಸ ಮುಂದುವರೆಸುತ್ತಿದ್ದಾರೆಯೇ?,ಅಥವಾ ಬಾಲ್ಯ ವಿವಾಹವಾಗಿದ್ದಾರೆಯೇ? ಎಂಬುದನ್ನು ಪರಿಶೀಲಿಸಿಕೊಳ್ಳಬೇಕು. ಅನುತ್ತೀರ್ಣರಾಗಿದ್ದಲ್ಲಿ, ಬಾಲ್ಯವಿವಾಹ ನಡೆಯುವ ಸಾಧ್ಯತೆ ಹೆಚ್ಚು ಇರುತ್ತದೆ. ಕಠಿಣ ಎನಿಸುವ ವಿಷಯಗಳ ಕುರಿತು ಮಕ್ಕಳಿಗೆ ಹೆಚ್ಚಿನ ಬೋಧನೆಗೆ ಶಿಕ್ಷಕರು ಮುತುವರ್ಜಿ ವಹಿಸಲು ತಿಳಿಸಬೇಕು ಎಂದರು.

ವಸತಿನಿಲಯದಲ್ಲಿ ಸಿಬ್ಬಂದಿ ಕೊರತೆಯಿರುವುದರಿಂದ, ಅಗತ್ಯ ಸಿಬ್ಬಂದಿ ನೇಮಕಕ್ಕಾಗಿ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಪತ್ರ ಬರೆಯಿರಿ; ಈ ಕುರಿತು ಆಯುಕ್ತರ ಜೊತೆ ಚರ್ಚಿಸಲಾಗುವುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಿಗೆ ಸೂಚಿಸಿದರು.

*ಸರ್ಕಾರದ ನಿಯಮಗಳಡಿ ಕಡ್ಡಾಯವಾಗಿ ಕಾರ್ಯನಿರ್ವಹಿಸಬೇಕು:*

ಬಳಿಕ ವಿದ್ಯಾನಗರದ ನಂದ ವಸತಿ ಶಾಲೆಗೆ ಭೇಟಿ ನೀಡಿದ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಡಾ.ನಾಗಣ್ಣ ಗೌಡ ಅವರು ಸರ್ಕಾರವು ಕಾಲ–ಕಾಲಕ್ಕೆ ಹೊರಡಿಸುವ ಸುತ್ತೋಲೆ ನಿಯಮಗಳನ್ವಯ ಖಾಸಗಿ ಶಾಲೆಗಳು ಕಾರ್ಯ ನಿರ್ವಹಿಸಬೇಕು ಎಂದು ಹೇಳಿದರು.

ಖಾಸಗಿ ಶಾಲೆಗಳು ಆಡಳಿತಾತ್ಮಕ, ಅಕಾಡೆಮಿ ಮತ್ತು ಮಕ್ಕಳ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ಕಾರ್ಯನಿರ್ವಹಿಸಬೇಕು. ಶಾಲಾ ಶುಲ್ಕಗಳ ಕುರಿತು ಪಾರದರ್ಶಕತೆ ಕಾಯ್ದುಕೊಳ್ಳಬೇಕು. ಶುಲ್ಕಗಳ ಸುತ್ತೋಲೆಗಳನ್ನು ಹೊರಡಿಸಬೇಕು. ಇವುಗಳ ಪ್ರತಿ ಡಿಡಿಪಿಐ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಗಳಿಗೆ ನೀಡಬೇಕು. ಶುಲ್ಕ ವಸೂಲಿ ಸಂಬಂಧಿಸಂತೆ ಪೋಷಕರ ಜೊತೆ ಚರ್ಚಿಸಬೇಕು. ಮಕ್ಕಳ ಗಮನಕ್ಕೆ ತಂದು, ವಿನಾಕಾರಣ ಕಿರುಕುಳ ನೀಡಿದಲ್ಲಿ ಅದು ಅಪರಾಧವಾಗುತ್ತದೆ ಎಂದು ತಿಳಿಸಿದರು. ಶಾಲೆಯಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆಗಳಾದ 1098 ಮತ್ತು 112 ಬರೆಸಬೇಕು. ಅಹವಾಲು ಪೆಟ್ಟಿಗೆಯನ್ನು ಸಿಸಿ ಟಿವಿ ಇರುವ ಜಾಗದಲ್ಲಿ ಅಳವಡಿಸಿ ಅವರಿಗೆ ದೂರು ನೀಡಲು ಭಯ ಪಡುವ ಹಾಗೆ ಮಾಡಬಾರದು. ಬೋಧನೆಗೆ ನೇಮಿಸಿಕೊಳ್ಳುವ ಶಿಕ್ಷಕರ ಅರ್ಹತೆ, ಸೇವಾನುಭಾವ ಹಾಗೂ ಅರ್ಹತೆಗಳು ಕಡ್ಡಾಯವಾಗಿರಬೇಕು. ಮುಖ್ಯವಾಗಿ ಮಕ್ಕಳೊಂದಿಗೆ ಕಾರ್ಯನಿರ್ವಹಿಸುವ ಪ್ರತಿಯೊಬ್ಬರ ಕುರಿತು ಪೊಲೀಸ್ ಪರಿಶೀಲನೆಯಾಗಿರಬೇಕು ಎಂದು ಸೂಚಿಸಿದರು.

ಮಕ್ಕಳ ಭವಿಷ್ಯ ರೂಪುಗೊಳ್ಳುವಲ್ಲಿ ದೈಹಿಕ ಶಿಕ್ಷಣವು ಒಂದಾಗಿದ್ದು, ಶಾಲೆಗಳಲ್ಲಿ ದೈಹಿಕ ಶಿಕ್ಷಣ ಮತ್ತು ಕ್ರೀಡಾ ಚಟುವಟಿಕೆಗಳಿಗೆ ಆದ್ಯತೆ ನೀಡಬೇಕು. ಒಂದು ಮಗು ಕನಿಷ್ಠ 45 ನಿಮಿಷಗಳ ವರೆಗೆ ಆಟಗಳಲ್ಲಿ ತೊಡಗಿಸಿಕೊಂಡರೆ ಆ ಮಗು ದೈಹಿಕ ಮತ್ತು ಮಾನಸಿಕವಾಗಿ ಸದೃಢನಾಗುತ್ತಾನೆ. ಹಾಗಾಗಿ ವಾರದಲ್ಲಿ ಕನಿಷ್ಠ 5 ತರಗತಿಗಳನ್ನು ದೈಹಿಕ ಶಿಕ್ಷಣಕ್ಕಾಗಿ ಮೀಸಲಿರಿಸಬೇಕು ಎಂದರು.

ಮುಖ್ಯವಾಗಿ ಪ್ರಾಂಶುಪಾಲರು, ಶಿಕ್ಷಕರು ಮಕ್ಕಳೊಂದಿಗೆ ಸಂವಾದ ನಡೆಸಬೇಕು. ಇದರಿಂದ ಅವರ ಅಹವಾಲುಗಳು ಬೆಳಕಿಗೆ ಬರುತ್ತವೆ. ಶಾಲೆಗಳು ಮಕ್ಕಳಿಗೆ ಸ್ನೇಹಮಯಿಯಾಗಿರಬೇಕು. ನಿಯಮಿತವಾಗಿ ಪೋಷಕರ ಸಭೆ ನಡೆಸಬೇಕು. ಶಾಲಾ ವಾಹನಗಳು ಸುಸ್ಥಿತಿಯಲ್ಲಿರಬೇಕು. ಈ ಕುರಿತು ವಾಹನ ಚಾಲಕರಿಗೆ ಸೂಕ್ತ ನಿರ್ದೇಶನ ನೀಡಬೇಕು. ಶಾಲೆ ನಡೆಸುವ ಅರ್ಹತೆ ನವೀಕರಣ ಮಾಡಿಕೊಳ್ಳುತ್ತಿರಬೇಕು. ಸಂಜೆ ವೇಳೆಯಲ್ಲಿ ಪದವಿ ಪೂರ್ವ ವಿದ್ಯಾರ್ಥಿಗಳಿಗೆ ವಿಶೇಷ ತರಬೇತಿಗಳಿಗಾಗಿ ಕೋಚಿಂಗ್ ನಡೆಸುತ್ತಿದ್ದರೆ ಕಡ್ಡಾಯವಾಗಿ ಸರ್ಕಾರದಿಂದ ಅನುಮತಿ ಪಡೆಯಬೇಕು ಎಂದು ತಿಳಿಸಿದರು.

ಬಳಿಕ ಅಧ್ಯಕ್ಷರು ಇಂದಿರಾನಗರ ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಗೆ ಭೇಟಿ ನೀಡಿ, ಅಲ್ಲಿನ ಶಾಲೆಯ ಮೈದಾನ ಸೂಕ್ತ ನಿರ್ವಹಣೆಗೆ ನಿರ್ದೇಶನ ನೀಡಿದರು. ಶಾಲೆಗಳನ್ನು ಪರೀಕ್ಷೆ ಮೌಲ್ಯಮಾಪನ, ಚುನಾವಣೆ ಮತ್ತು ಇತರೆ ಕಾರ್ಯಗಳಿಗಾಗಿ ಬಳಸಿಕೊಂಡಾಗ, ಮೂಲ ಸ್ಥಿತಿಯಲ್ಲಿದ್ದಂತೆಯೇ ಇರಬೇಕು ಎಂದು ಅವರಿಗೆ ತಿಳಿಸಬೇಕು, ಇದರಿಂದ ಶಾಲೆಗಳು ಅಂದಗೆಡುವುದಿಲ್ಲ ಮತ್ತು ಯಾವುದೇ ಶಾಲಾ ವಸ್ತುಗಳು ಹಾನಿಯಾಗುವುದಿಲ್ಲ ಎಂದರು.

ಶಾಲೆಯಲ್ಲಿ ನಲಿ–ಕಲಿ ಕಲಿಕೆಯು ಗುಣಮಟ್ಟದ್ದಾಗಿದ್ದು, ಇನ್ನೂ ಹೆಚ್ಚಿನ ಮಕ್ಕಳನ್ನು ಶಾಲೆಗೆ ದಾಖಲಿಸಲು ಕ್ರಮವಹಿಸಬೇಕು. ಈ ಕುರಿತು ಹತ್ತಿರದ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ದಾಖಲಿಸುವಂತೆ ಸಮನ್ವಯತೆ ಕೈಗೊಳ್ಳಬೇಕು ಎಂದು ಹೇಳಿದರು.

ಇದೇ ವೇಳೆ ಶಾಲೆಯ 'ನಲಿ–ಕಲಿ' ತರಗತಿಯೊಂದರ ಮಕ್ಕಳು 'ನಲಿಯೋಣ ಬಾ–ಕಲಿಯೋಣ ಬಾ' ಎಂಬ ಗೀತೆಯನ್ನು ನೃತ್ಯದ ಮುಖಾಂತರ ಪ್ರಸ್ತುತಪಡಿಸಿದ್ದಕ್ಕೆ ಅಧ್ಯಕ್ಷ ಕೆ.ನಾಗಣ್ಣ ಗೌಡ ಅವರು ಮಕ್ಕಳನ್ನು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ವೆಂಕಟೇಶ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಬಿ.ಮಲ್ಲಿಕಾರ್ಜುನ, ಸಹಾಯಕ ನಿರ್ದೇಶಕರಾದ ಮಮತಾ, ವಸತಿ ನಿಲಯಪಾಲಕರಾದ ಉಷಾಕುಮಾರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ಎಳೆನಾಗಪ್ಪ, ಬಿಇಒ ಸಿದ್ಧಲಿಂಗಮೂರ್ತಿ, ಸಿಆರ್‌ಪಿ ಸಿದ್ದಪ್ಪ, ನಂದ ವಸತಿ ಶಾಲೆಯ ಪ್ರಾಂಶುಪಾಲರಾದ ಸರೀತಾ, ಇಂದಿರಾನಗರ ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ಮುಖ್ಯಗುರುಗಳಾದ ಕಣುಮಕ್ಕ ಸೇರಿದಂತೆ ಇತರೆ ಅಧಿಕಾರಿಗಳು ಹಾಜರಿದ್ದರು.

## ಬಳ್ಳಾರಿಯಲ್ಲಿ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ
## ಯೋಗದಿಂದ ದೈಹಿಕ, ಮಾನಸಿಕ ಆರೋಗ್ಯ ಸುಧಾರಣೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.25–ಕೇಂದ್ರ ಆಯುಷ್ ಮಂತ್ರಾಲಯ, ರಾಷ್ಟ್ರೀಯ ಆಯುಷ್ ಅಭಿಯಾನ, ಆಯುಷ್ ಇಲಾಖೆ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ಮತ್ತು ಬಳ್ಳಾರಿಯ ಸಮಸ್ತ ಯೋಗ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ "ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ" ಎಂಬ ಘೋಷವಾಕ್ಯದೊಂದಿಗೆ ನಗರದ ಕಪ್ಪಗಲ್ ರಸ್ತೆಯ ಶೆಟ್ಟರ ಗುರುಶಾಂತಪ್ಪ ಪದವಿಪೂರ್ವ ಕಾಲೇಜು (ಲಾ ಕಾಲೇಜು ಮೈದಾನ) ಆವರಣದಲ್ಲಿ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮಕ್ಕೆ ಗಣ್ಯರಿಂದ ಸಸಿಗೆ ನೀರೆರೆಯುವ ಮೂಲಕ ಮತ್ತು ಕೆಲವು ಯೋಗಾಸನಗಳ ಅಭ್ಯಾಸ ಮಾಡುವ ಮೂಲಕ ಇತ್ತಿಚೇಗ ಚಾಲನೆ ನೀಡಲಾಯಿತು.

ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮೇಯರ್ ಮುಲ್ಲಂಗಿ ನಂದೀಶ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪಂಚಾಯತ್ ಸಿಇಒ ಮಹಮ್ಮದ್ ಹ್ಯಾರಿಸ್ ಸುಮ್ಮೈರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಎನ್.ಝುಬೇರ್, ಎಸ್.ಜಿ ಕಾಲೇಜು ಸಂಸ್ಥೆಯ ಅಧ್ಯಕ್ಷ ಹಚ್ಚೊಳ್ಳಿ ಶರಣಬಸವನಗೌಡ, ಜಿಲ್ಲಾ ಆಯುಷ್ ಇಲಾಖೆಯ ಅಧಿಕಾರಿ ಡಾ.ಎಂ.ವಿರುಪಾಕ್ಷ, ವೈದ್ಯಾಧಿಕಾರಿ ಡಾ.ವಿಜಯೇಂದ್ರ ಆಚಾರ್ ಸೇರಿದಂತೆ ಜಿಲ್ಲೆಯ ವಿವಿಧ ಯೋಗ ಸಂಸ್ಥೆಗಳು, ಶಾಲಾ ಮಕ್ಕಳು ಮತ್ತು ಸಾರ್ವಜನಿಕರು ಯೋಗಾಭ್ಯಾಸ ಮಾಡಿದರು.

ಅಂತಾರಾಷ್ಟ್ರೀಯ ಯೋಗ ದಿನವನ್ನು ವಿಶ್ವದಾದ್ಯಂತ ಜೂನ್ 21 ರಂದು ಆಚರಿಸಲಾಗುತ್ತದೆ. ಯೋಗವು ಭಾರತೀಯ ಸಂಸ್ಕೃತಿಯಲ್ಲಿ ಒಂದು ಪುರಾತನ ಅಭ್ಯಾಸವಾಗಿದೆ. ಇದು ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಆರೋಗ್ಯವನ್ನು ಸುಧಾರಿಸಲು ಸಹಾಯ ಮಾಡುತ್ತದೆ.

ಪ್ರತಿದಿನ ಯೋಗಾಭ್ಯಾಸ ಮಾಡುವುದು, ನಮ್ಮ ಆರೋಗ್ಯದ ದೃಷ್ಟಿಯಿಂದ ಬಹಳ ಒಳ್ಳೆಯದು. ಯೋಗವು ಹಲವಾರು ರೋಗಗಳನ್ನು ನಮ್ಮತ್ತ ಸುಳಿಯದಂತೆ ನೋಡಿಕೊಳ್ಳುತ್ತದೆ ಎಂಬುದನ್ನು ಅರಿಯಲಾಯಿತು.

ಯೋಗಾಭ್ಯಾಸದಲ್ಲಿ ಪತಂಜಲಿ ಯೋಗ ಸಮಿತಿಯ ರಾಜ್ಯ ಸಮಿತಿ ಸದಸ್ಯರು ಮತ್ತು ಜಿಲ್ಲಾ ಸಂಯೋಜಕರಾದ ಇಸ್ವಿ ಪಂಪಾಪತಿ ಅವರು ಧ್ವನಿ ಸುರುಳಿಯ ಮೂಲಕ ವಿವಿಧ ಆಸನಗಳ ಮಹತ್ವ ತಿಳಿಸುತ್ತಾ, ಯೋಗಾಸಕ್ತರಿಗೆ ನಿಯಮಾನುಸಾರ ಯೋಗಾಸನಗಳನ್ನು 45 ನಿಮಿಷಗಳ ಕಾಲ ಯೋಗ ನಡೆಸಿಕೊಟ್ಟರು.

ಇದೇ ವೇಳೆ ಕುರೆಕುಪ್ಪ ಎಸ್.ಆರ್.ಕೆ. ಯೋಗ ಸಂಸ್ಥೆಯ ಮಕ್ಕಳಿಂದ ವಿಶೇಷ ಯೋಗ ಪ್ರದರ್ಶನ ಪ್ರಸ್ತುತ ಪಡಿಸಿದರು ಹಾಗೂ 21 ಯೋಗ ಸಾಧಕರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಯೋಗಭ್ಯಾಸದಲ್ಲಿ ಭಾಗವಹಿಸಿದ ಎಲ್ಲಾ ಯೋಗಾಸಕ್ತರಿಗೆ ಕ್ಯೂಆರ್ ಕೋಡ್ ಮೂಲಕ ನೋಂದಾಯಿಸಿಕೊಂಡು ಭಾಗವಹಿದ ಪ್ರಮಾಣ ಪತ್ರ ಪಡೆದುಕೊಳ್ಳಬಹುದಾಗಿತ್ತು.

ಕಾರ್ಯಕ್ರಮದಲ್ಲಿ ವಿವಿಧ ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳು ಹಾಗೂ ಯೋಗಾಸಕ್ತರು ಸಾಮೂಹಿಕ ಯೋಗಾಭ್ಯಾಸದಲ್ಲಿ ಆಸಕ್ತಿಯಿಂದ ಭಾಗವಹಿಸಿದ್ದು ವಿಶೇಷವಾಗಿತ್ತು. ಯೋಗಾಭ್ಯಾಸದಲ್ಲಿ ಭಾಗವಹಿಸಿದ ಯೋಗಾಸಕ್ತರಿಗೆ ಟಿ–ಶರ್ಟ್, ಕ್ಯಾಪ್ ಮತ್ತು ಔಷಧ ಸಸಿಗಳನ್ನು ವಿತರಿಸಲಾಯಿತು.

ಬ್ಯಾಂಕ್ ಗಳ ಜಿಲ್ಲಾ ಸಮಾಲೋಚನಾ, ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿ ಸಭೆ, ಕೌಶಲ್ಯಾಧಾರಿತ

## ಸ್ವಯಂ ಉದ್ಯೋಗಕ್ಕೆ ಆರ್ಥಿಕ ಸಹಾಯ ನೀಡಿ ಸಂಸದ ಶ್ರೀ ಜಿ. ಕುಮಾರ ನಾಯಕ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 25–ಯಾದಗಿರಿ: ಸರಕಾರದ ವಿವಿಧ ಕೌಶಲ ಆಧಾರಿತ ಅಭಿವೃದ್ಧಿ ಯೋಜನೆಗಳಡಿ ಸ್ವಯಂ ಉದ್ಯೋಗಕ್ಕೆ ಆಯ್ಕೆಯಾದ ಫಲಾನುಭವಿಗೆ ಯೋಜನೆಯ ನಿಯಮನುಸಾರ ಆರ್ಥಿಕ ಸಹಾಯ ಧನ ನೀಡಿ, ಆರ್ಥಿಕ ಅಭಿವೃದ್ಧಿಗೆ ಪ್ರೋತ್ಸಾಹಿಸಿ ಎಂದು ರಾಯಚೂರು ಲೋಕಸಭಾ ಸಂಸದ ಶ್ರೀ ಜಿ.ಕುಮಾರ ನಾಯಕ ಅವರು ಬ್ಯಾಂಕ್ ಅಧಿಕಾರಿಗಳಿಗೆ ಸೂಚಿಸಿದರು.

ಭಾರತೀಯ ಸ್ಟೇಟ್ ಬ್ಯಾಂಕ್, ಲೀಡ್ ಬ್ಯಾಂಕ್ ಹಾಗೂ ಇತರೆ ಬ್ಯಾಂಕ್‌ಗಳ ಸಹಯೋಗದಲ್ಲಿ ಜೂ.24ರಂದು ಜಿಪಂ ಸಭಾಂಗಣದಲ್ಲಿ ನಡೆದ ಸರಕಾರದ ಮುದ್ರಾ ಯೋಜನೆ, ಪಿಎಂ ವಿಶ್ವಕರ್ಮ ಯೋಜನೆ, ಪ್ರಧಾನ ಮಂತ್ರಿ ಸುರಕ್ಷ ವಿಮೆ, ಪ್ರಧಾನ ಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆ ಹಾಗೂ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದ ಮಹಿಳಾ ಸ್ವಸಹಾಯ ಸಂಘಗಳ ಉಳಿತಾಯ ಖಾತೆ ಸೃಜನೆ, ಅಕೌಂಟ್ ಲಿಂಕೆಜ್ ಸೇರಿ ಇತರೆ ಬ್ಯಾಂಕ್‌ಗಳ. ವಾರ್ಷಿಕ ಸಾಲ ಕ್ರಿಯಾ ಯೋಜನೆಯ ಪ್ರಗತಿ ಪರಿಶೀಲನ ಸಭೆಯಲ್ಲಿ ಮಾತನಾಡಿದರು.

ಜನರ ಸ್ವಯಂ ಉದ್ಯೋಗದ ಮೂಲಕ ದೇಶದ ಆರ್ಥಿಕ ಪ್ರಗತಿ ಸಾಧಿಸಲು ಸರಕಾರ ಪಿಎಂ ವಿಶ್ವ ಕರ್ಮ ಯೋಜನೆ ಹಾಗೂ ಮುದ್ರಾ ಯೋಜನೆ ಜಾರಿಗೊಳಿಸಿ, ಯೋಜನೆಯಡಿ ಆಯ್ಕೆಯಾದ ಗ್ರಾಮೀಣ ಹಾಗೂ ನಗರ ಪ್ರದೇಶದ ಅರ್ಹ ಫಲಾನುಭವಿಗಳಿಗೆ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ ಮೂಲಕ ಕೌಶಲ ತರಬೇತಿ ನೀಡಿದೆ ಅಂತ ಫಲಾನುಭವಿಯ ಅಗತ್ಯ ದಾಖಲಾತಿ ಪಡೆದು ಯೋಜನೆ ನಿಯಮನುಸಾರ ಸಾಲ ಸೌಲಭ್ಯ ನೀಡಿ ಎಂದು ಬ್ಯಾಂಕ್ ಅಧಿಕಾರಿಗಳಿಗೆ ತಿಳಿಸಿದರು.

ಗ್ರಾಮೀಣ ಹಾಗೂ ನಗರ ಪ್ರದೇಶದ ಪ್ರತಿ ಕುಟುಂಬಕ್ಕೂ ಆರ್ಥಿಕ ರಕ್ಷಣೆ ನೀಡಲು ಸರಕಾರ ಜಾರಿಗೆ ತಂದ ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆ ಹಾಗೂ ಪ್ರಧಾನಮಂತ್ರಿ ಜೀವನ್ ಜ್ಯೋತಿ ಭೀಮಾ ಯೋಜನೆಗಳ ಸೌಲಭ್ಯದ ಕುರಿತು ಜನರಿಗೆ ಮಾಹಿತಿ ನೀಡಿ, ಯೋಜನೆಯ ನೋಂದಣಿ ಪ್ರಕ್ರಿಯೆ ತೀವ್ರಗೊಳಿಸಿ ಎಂದು ಬ್ಯಾಂಕ್ ಅಧಿಕಾರಿಗಳಿಗೆ ವಿಮಾ ನೋಂದಣಿ ಗುರಿ ನೀಡಿದರು. ಈ ನಡುವೆ ಸರಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಮುದ್ರಾ, ಪಿ.ಎಂ ವಿಶ್ವ ಕರ್ಮ ಯೋಜನೆಗಳಡಿ ಆಯ್ಕೆಯಾದ ಫಲಾನುಭವಿಗಳಿಗೆ ರಾಯಚೂರು ಲೋಕಸಬಾ ಸಂಸದ ಶ್ರೀ ಜಿ.ಕುಮಾರ ನಾಯಕ ಅವರು ಸಾಂಕೇತಿಕವಾಗಿ ಆರ್ಥಿಕ ಸಹಾಯ ಧನ ಚೆಕ್ ವಿತರಿಸಿದರು

ಈ ವೇಳೆ ಯಾದಗಿರಿ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶ್ರೀ ಲವೀಶ್ ಒರಡಿಯಾ, ಜಿಪಂ ಮುಖ್ಯ ಲೆಕ್ಕಾಧಿಕಾರಿ ಶ್ರೀ ವೆಂಕಟೇಶ ಬಿ.ಚಟ್ನಳ್ಳಿ, ಯೋಜನಾ ನಿರ್ದೇಶಕ ಶ್ರೀ ಸಿ ಬಿ ದೇವರಮನಿ, ಭಾರತೀಯ ಸ್ಟೇಟ್ ಬ್ಯಾಂಕ್ ಪ್ರಾದೇಶಿಕ ವ್ಯವಸ್ಥಾಪಕ ಶ್ರೀ ಸಂಜಯ್ ಕುಮಾರ, ಶ್ರೀಮತಿ ಯಮುನಾ ಪೈ, ಬೆಂಗಳೂರು ಭಾರತೀಯ ರಿಸರ್ವ್ ಬ್ಯಾಂಕ್‌ನ ಶ್ರೀ ಅಲೋಕ್ ಸಿಂಹ, ಜಿಲ್ಲಾ ಲೀಡ್ ಬ್ಯಾಂಕ್ ವ್ಯವಸ್ಥಾಪಕ ಶ್ರೀ ಭೀಮರಾವ್ ಪಂಚಾಳ, ಭಾರತೀಯ ಸ್ಟೇಟ್ ಬ್ಯಾಂಕ್ ಹಿರಿಯ ವ್ಯವಸ್ಥಾಪಕ ಶ್ರೀ ಸುಭಾಶ್ ಚಂದ್ರ, ಕರ್ನಾಟಕ ಗ್ರಾಮೀಣ ಬ್ಯಾಂಕ್ ಪ್ರಾದೇಶಿಕ ಕಛೇರಿ ಅಧಿಕಾರಿ ಶ್ರೀ ಕುಮಾರ ಸ್ವಾಮಿ, ಲೀಡ್ ಬ್ಯಾಂಕ್ ಸಿಬ್ಬಂದಿ ಶ್ರೀ ಅಮೀರ್ ಪಟೇಲ್ ಹಾಗೂ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಯೋಗ,ಧ್ಯಾನಕ್ಕೆ ಭಾರತವೇ ಮೂಲ ಶಾಸಕ ಚನ್ನಾರಡ್ಡಿ ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜೂ:25–ಆದಿ,ಅನಾದಿ ಕಾಲದಿಂದಲೂ ಯೋಗ, ವ್ಯಾಯಾಮ,ಧ್ಯಾನ ಋಷಿ ಮುನಿಗಳು ಮಾಡಿಕೊಂಡ ಬಂದ ಪರಿಣಾಮ ಅವರಿಗೆ ಆಯುಷ್ಯ ಹೆಚ್ಚಿಗೆ ಇತ್ತು ಮತ್ತು ಉತ್ತಮ ಆರೋಗ್ಯ ಹೊಂದಿದ್ದರೆಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ್ ಹೇಳಿದರು.

ಜಿಲ್ಲಾ ಪಂಚಾಯತ, ಆಯುಷ್ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ನಗರಸಭೆ, ಪತಂಜಲಿ ಯೋಗ ಸಮಿತಿ, ಹಾಗೂ ಸರ್ಕಾರದ ಇತರೆ ಇಲಾಖೆ ಮತ್ತು ಇತರೆ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಶನಿವಾರ ಇಲ್ಲಿನ ಸ್ವಪ್ನಾ ಮೈದಾನದಲ್ಲಿ ಆಯೋಜಿಸಿದ್ದ "11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ" ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಭಾರತೀಯರು ಯೋಗದ ಮೂಲಕವೇ ಅನೇಕ ರೋಗಗಳನ್ನು ಗುಣಪಡಿಸಿಕೊಳ್ಳುವ ಕಾಲವೊಂದಿತ್ತು. ಆದರೆ, ಮುಂದೆ ಇಂಗ್ಲಿಷ್ ಔಷಧಿಗಳಿಗೆ ಮೊರೆ ಹೋಗುವ ಮೂಲಕ ಈ ದೇಸಿ ಪದ್ದತಿ ಮೇಲಿನ ಕಾಳಜಿ ಕಡಿಮೆ ಆಯಿತು. ಆದರೆ ಇತ್ತೀಚಿನ ವರ್ಷಗಳಲ್ಲಿ ಮತ್ತೆ ಜನರು ಯೋಗ ಇತರೆ ದೈಹಿಕ ಕಸರತ್ತಿನ ಮೂಲಕ ತಮ್ಮ, ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳುವತ್ತ ಮರಳಿದ್ದಾರೆಂದು ಶಾಸಕರು ವಿವರಿಸಿದರು.

ಪ್ರತಿ ನಿತ್ಯ ಬೆಳಗ್ಗೆ ಯೋಗ ಮಾಡುವುದರಿಂದ ಒತ್ತಡ ಕಡಿಮೆ ಆಗಿ ಲವ,ಲವಿಕೆಯಿಂದ ಕೆಲಸ ಕಾರ್ಯಗಳನ್ನು ಸುಲಭವಾಗಿ ಮಾಡಬಬಹುದೆಂದು ಹೇಳಿದರು.

ಚಟಗಳ ದಾಸರಾಗದೇ ಉತ್ತಮ ಆರೋಗ್ಯ ಹೊಂದಿ,ಮೊಬೈಲ್ ಬಳಕೆ ಆದಷ್ಟು ಕಡಿಮೆ ಮಾಡಿ, ಶುದ್ಧ ಆಹಾರ ಸೇವನೆ ಮಾಡುವ ಮೂಲಕ ಆರೋಗ್ಯ ಕಾಪಾಡಿಕೊಳ್ಳಿ ಎಂದು ಶಾಸಕರು ಸಲಹೆ ನೀಡಿದರು.

ನಮ್ಮ ಈ ವಿದ್ಯೆ ಈಗ ಅಂತರ ರಾಷ್ಟ್ರಮಟ್ಟದಲ್ಲಿ ಭಾರಿ ಚಲಾವಣೆಗೆ ಬಂದಿದೆ. ಇದೇ ಭಾರತದ ಶಕ್ತಿ ಎಂದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಲವೀಶ ಒರಡಿಯಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಮಹೇಶ ಬಿರಾದಾರ್, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ನಗರಸಭೆ ಆಯುಕ್ತರಾದ ಉಮೇಶ ಚವ್ಹಾಣ, ಜಿಲ್ಲಾ ಆಯುಷ್ ಅಧಿಕಾರಿ ಡಾ. ವಂದನಾ ಜೆ.ಗಾಳಿ, ಯೋಗ ಗುರುಗಳಾದ ಸೋಮನಾಥರೆಡ್ಡಿ ಎಲ್ಹೇರಿ, ಸರ್ಕಾರಿ ಪದವಿ ಪೂರ್ವ ಕಾಲೇಜು ಉಪನಿರ್ದೇಶ ಪಂಡೀತರಾವ, ರೇಶ್ಮೆ ಇಲಾಖೆ ಸಹಾಯಕ ಸಂತೋಷ,

ವೈದ್ಯಾಧಿಕಾರಿ ಪ್ರಕಾಶರಾಜಾಪೂರೆ, ಬ್ರಹ್ಮಾಕುಮಾರಿ ವೀಣಾ ಅಕ್ಕಾ ಇದ್ದರು,

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

## ಪರಿಸರ ಸಂರಕ್ಷಣೆ ಅತ್ಯವಶ್ಯ:ವೆಂಕಟೇಶ ಪುರ



ಮಲ್ಲಮ್ಮ ನುಡಿ ವಾರ್ತೆ

ಸೈದಾಪುರ:ಜೂ.25:ಮುಂದಿನ ಪೀಳಿಗೆಗಾಗಿ ಪರಿಸರ ಸಂರಕ್ಷಣೆ ಮಾಡುವುದು ಅತ್ಯವಶ್ಯಕವಾಗಿದ್ದು ಅದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಲಾಯನ್ಸ್ ಕ್ಲಬ್ ಸೈದಾಪುರ ಅಧ್ಯಕ್ಷ ವೆಂಕಟೇಶ ಪುರಿ ಅವರು ಅಭಿಪ್ರಾಯ ಪಟ್ಟರು. ಪಟ್ಟಣ ಅಂಬಿಗರ ಚೌಡಯ್ಯ ವೃತ್ತದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಸಸಿ ನೆಟ್ಟು, ನೀರೆರೆದು ಮಾತನಾಡಿದರು. ಒಂದು ಕುಟುಂಬದಿಂದ ಕನಿಷ್ಠ ಒಂದು ಗಿಡ ನೆಟ್ಟು ಬೆಳೆಸಬೇಕು ಎಂಬ ದೃಢ ಸಂಕಲ್ಪ ಪರಿಸರ ದಿನಾಚರಣೆ ದಿನದಂದು ಮಾಡಬೇಕಿದೆ. ನಾವು ಎಷ್ಟು ಮರಗಳು ಉಳಿಸಿ ಬೆಳೆಸುತ್ತೇವೆ ಎಂಬುದು ಮುಖ್ಯವಾಗಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಬಿಸಿಲಿನ ತಾಪ ಕೆಂಡದಂತೆ ಸುಡುತ್ತಿರುತ್ತದೆ ಇದನ್ನು ಕಡಿಮೆ ಮಾಡಲು ಹಸಿರು ಪರಿಸರ ನಿರ್ಮಾಣವಾಗಬೇಕು ಮತ್ತು ಗಿಡಮರಗಳನ್ನು ನೆಡುವುದರ ಜೊತೆಗೆ ಪೋಷಣೆ ಮಾಡುವುದು ಬಹಳ ಮುಖ್ಯವಾಗಿದೆ ಎಂದರು. ನಮ್ಮ ಕ್ಲಬ್‌ನ ಸದಸ್ಯರು ಪರಿಸರ ರಕ್ಷಣೆಗೆ ಕೈ ಜೋಡಿಸುವ ಮೂಲಕ ಮಾದರಿಯಾಗಬೇಕು ಎಂದು ಹೇಳಿದರು.

ಈ ವೇಳೆ ಯಾದಗಿರಿ ಪ್ರಾಥಮಿಕ ಸಹಕಾರ ಕೃಷಿ, ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿರ್ದೇಶಕ ಬಸರೆಡ್ಡಿಗೌಡ ಹೆಗ್ಗಣಗೇರಾ, ನಾರಾಯಣಪೇಠ ಲಾಯನ್ಸ್ ಕ್ಲಬ್‌ನ ಆತ್ಮರಾಮ್, ಪಿ.ಕೃಷ್ಣಮೂರ್ತಿ, ಪಿ.ಐ ವಿನಾಯಕ, ಕ್ಲಬ್ ಕಾರ್ಯದರ್ಶಿ ಬನಯ್ಯಸ್ವಾಮಿ ಬದ್ದೇಪಲ್ಲಿ, ಕೋಶಾಧ್ಯಕ್ಷ ಲಕ್ಷ್ಮೀ ನಾರಾಯಣ ಪುರಿ, ಮುಖ್ಯಗುರು ಲಿಂಗಾರೆಡ್ಡಿ ನಾಯಕ್, ಶಿಕ್ಷಕ ಶರಣಬಸಪ್ಪ ಕಡೇಚೂರು, ಕೆ.ಪಿ ವಸಂತಕುಮಾರ, ಸಹ ಪ್ರಾಧ್ಯಪಕ ಡಾ ಶರಬಯ್ಯಸ್ವಾಮಿ ಹಿರೇಮಠ, ನ್ಯಾಯವಾದಿ ಸಂತೋಷ ಬಾದಾಮಿ, ಶರಣು ಚಂದ್ರಗಿರಿ, ಪರಮೇಶ ವಾರದ್, ಸಂದೀಪಕುಮಾರ ದೋಕ, ಶಶಿಧರಸ್ವಾಮಿ ಹಿರೇಮಠ, ಆನಂದ ವಾರದ್, ಸಚೀನ ಪಾಟೀಲ್ ಕ್ಯಾತ್ನಾಳ್, ಭೀಮಣ್ಣ ಮಡಿವಾಳಕರ್, ಕೆ.ಪಿ ವೆಂಕಟೇಶ ಪುರಿ, ರಾಘವೇಂದ್ರ ಪತ್ತಿ, ಸಿದ್ದು ಪೂಜಾರಿ ಬದ್ದೇಪಲ್ಲಿ, ವಿಲಾಸ ಅಂಬರೀಶನಾಯಕ್ ಕೂಡಲೂರು, ಸೇರಿದಂತೆ ಇತರರಿದ್ದರು.

## ಪಠ್ಯಪುಸ್ತಕ, ಸಮವಸ್ತ್ರ ಉಚಿತ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ್: ಅಂತರರಾಷ್ಟ್ರೀಯ ಯೋಗ ದಿನಾಚರಣೆ ನಿಮಿತ್ತ ಇಲ್ಲಿಯ ಕೃಷಿ ಕಾಲೊನಿಯಲ್ಲಿ ಇರುವ ಚಾಲುಕ್ಯ ಪೂರ್ವ ಪ್ರಾಥಮಿಕ ಶಾಲೆಯಲ್ಲಿ ಈಚೆಗೆ ಮಕ್ಕಳಿಗೆ ಉಚಿತ ಪಠ್ಯಪುಸ್ತಕ,



ನೋಟ್‌ಪುಸ್ತಕ, ಸಮವಸ್ತ್ರ ಹಾಗೂ ಬ್ಯಾಗ್ ವಿತರಿಸಲಾಯಿತು.

ಮಕ್ಕಳ ಅನುಕೂಲಕ್ಕಾಗಿ ವಿವಿಧ ಸಾಮಗ್ರಿಗಳನ್ನು ಉಚಿತವಾಗಿ ವಿತರಿಸಲಾಗಿದೆ ಎಂದು ಶಾಲೆಯ ಅಧ್ಯಕ್ಷ ಶಿವಕುಮಾರ ನಾಗೂರೆ ತಿಳಿಸಿದರು.

ಯೋಗ ಶಿಕ್ಷಕ ಶಿವಕುಮಾರ ರೆಡ್ಡಿ, ಚಿಂತಕ ವಿನಾಯಕ, ಸಮೃದ್ಧಿ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಪುನೀತ್ ಸಾಳೆ, ಪ್ರಮುಖರಾದ ಗಣಪತಿ, ರಾಕೇಶ್, ಶಿಕ್ಷಕರಾದ ಆಶಾರಾಣಿ ಮೇತ್ರೆ, ರಾಧಾ, ಗೀತಾ, ರೇಣುಕಾ ಧೂಳೆ ಮತ್ತಿತರರು ಇದ್ದರು.

ಬಳ್ಳಾರಿ: ಡಿಸೆಂಬರ್‌ನಲ್ಲಿ 88ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ

## ಕನ್ನಡದ ಅಸ್ಮಿತೆ ಪ್ರತಿಬಿಂಬಿಸಲು ಅವಕಾಶ: ಡಾ.ಮಹೇಶ್ ಜೋಶಿ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.24-ಕನ್ನಡಭಾಷೆಯು ಸ್ವತಂತ್ರಭಾಷೆಯಾಗಿದ್ದು,ತನ್ನದೇ ಆದ ಇತಿಹಾಸ ಹೊಂದಿದೆ. ಕನ್ನಡದ ಅಸ್ಮಿತೆ ಪ್ರತಿಬಿಂಬಿಸಲು ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಕನ್ನಡಾಭಿಮಾನಿಗಳಿಗೆ ಅವಕಾಶ ದೊರೆತಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ.ಮಹೇಶ್ ಜೋಶಿ ಅವರು ಹೇಳಿದರು.

ಬಳ್ಳಾರಿಯಲ್ಲಿ ಜರುಗಲಿರುವ 88ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಪೂರ್ವ ಸಿದ್ಧತೆಗಾಗಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದ ಪತ್ರಿಕಾ ಭವನದಲ್ಲಿ ಶನಿವಾರ ಏರ್ಪಡಿಸಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವು ನುಡಿಹಬ್ಬ, ಕನ್ನಡದ ಜಾತ್ರೆ ಇದ್ದಂತೆ. 68 ವರ್ಷಗಳ ಬಳಿಕ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವು ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆ ಒಳಗೊಂಡಂತೆ ಅಖಂಡ ಜಿಲ್ಲೆಯಲ್ಲಿ ಡಿಸೆಂಬರ್ ನಲ್ಲಿ ಜರುಗುತ್ತಿದ್ದು, ಎರಡು ಜಿಲ್ಲೆಗಳ ಕನ್ನಡ ಸಾಹಿತ್ಯಕಾರರು, ವಿವಿಧ ಕನ್ನಡಪರ ಸಂಘಟನೆಗಳು ಮತ್ತು ಮಾಧ್ಯಮದವರ ಪರಸ್ಪರ ಸಹಕಾರ ಮತ್ತು ಸಹಭಾಗಿತ್ವ ಅಗತ್ಯವಿದೆ ಎಂದರು.

ಬಳ್ಳಾರಿಯಲ್ಲಿ 88ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಡಿಸೆಂಬರ್ ತಿಂಗಳಲ್ಲಿ ಆಯೋಜಿಸಲು ಸೂಕ್ತ ಎಂದು ಸರ್ಕಾರದ ಗಮನಕ್ಕೆ ತರಲಾಗಿದೆ. ಈ ಕುರಿತು ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆ ಒಳಗೊಂಡಂತೆ ಜಿಲ್ಲಾಧಿಕಾರಿಗಳು, ಹಿರಿಯ ಸಾಹಿತ್ಯ ಮುಖಂಡರು, ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಲಾಗುವುದು ಎಂದರು.

ದೀರ್ಘಾವಧಿಯ ನಂತರ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವು ಬಳ್ಳಾರಿಯಲ್ಲಿ ನಡೆಯುತ್ತಿದ್ದು, ಇದಕ್ಕೆ ಬೇಕಾದ ಸ್ಥಳ ನಿಗದಿ, ದಿನಾಂಕ ಗೊತ್ತುಪಡಿಸುವಿಕೆ ಮತ್ತೀತರ ಅಗತ್ಯ ಕ್ರಮಗಳ ಕುರಿತಂತೆ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಜಿಲ್ಲಾಡಳಿತದೊಂದಿಗೆ ಚರ್ಚಿಸಲಾಗುವುದು. ಬಳಿಕ ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು ಎಂದರು.

ಸಾಹಿತ್ಯ ಸಮ್ಮೇಳನವನ್ನು ಅತ್ಯಂತ ವಿಜೃಂಭಣೆಯಿಂದ ಆಯೋಜಿಸಲು ಜಿಲ್ಲಾಡಳಿತದೊಂದಿಗೆ ವಿವಿಧ ಕನ್ನಡಪರ ಸಂಘಟನೆಗಳು ಸಹಾಯ, ಸಹಯೋಗ ಮತ್ತು ಸಮಾಲೋಚನೆಯಿಂದ ಉತ್ಸುಕರಾಗಿದ್ದು, ಸಮ್ಮೇಳನಕ್ಕೆ ಸಾರ್ವಜನಿಕರು, ಗಡಿಭಾಗದ ಜನರು, ಕನ್ನಡಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಅವರು ತಿಳಿಸಿದರು.

ಹಲವು ವರ್ಷಗಳ ಬಳಿಕ ಈ ಭಾಗದಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯಲಿದ್ದು, ಅತ್ಯಂತ ಹೆಚ್ಚಿನ ಸಂಖ್ಯೆಯಲ್ಲಿ ಜನರು ಪಾಲ್ಗೊಳ್ಳುವ ನಿರೀಕ್ಷೆ ಇಟ್ಟುಕೊಳ್ಳಲಾಗಿದೆ. ಹಾಗಾಗಿ ಈ ಕುರಿತು ಸರ್ಕಾರಕ್ಕೆ ಅನುದಾನದ ಬೇಡಿಕೆ ಪ್ರಸ್ತಾಪಿಸಿದ್ದೇವೆ. ಜಿಲ್ಲಾಡಳಿತವು ಸಹ ಮುಂದಿನ ದಿನಗಳಲ್ಲಿ ಸರ್ಕಾರಕ್ಕೆ ವರದಿ ನೀಡಲಿದೆ ಎಂದು ಸ್ಪಷ್ಟಪಡಿಸಿದರು.

88 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವು ಈ ಭಾಗದಲ್ಲಿ ನಡೆಯುತ್ತಿರುವುದು ಈ ಭಾಗದ ಜನರ ಬಹುದಿನಗಳ ಬೇಡಿಕೆ ಮತ್ತು ಸದಾವಕಾಶ ಸಿಕ್ಕಿದೆ. ಹಾಗಾಗಿ ಇಲ್ಲಿ ನಡೆಯುವುದರಿಂದ ಕನ್ನಡದ ಅಸ್ಮಿತೆಯು ಗಡಿಭಾಗದ ಎಲ್ಲೆ ಮೀರಿ ಹರಡಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಬಳ್ಳಾರಿ ಜಿಲ್ಲಾ ಕಸಾಪ ಅಧ್ಯಕ್ಷ ಡಾ.ನಿಷ್ಠಿರುದ್ರಪ್ಪ, ಚಿತ್ರದುರ್ಗ ಜಿಲ್ಲಾ ಕಸಾಪ ಅಧ್ಯಕ್ಷ ಕೆ.ಎಂ.ಶಿವಸ್ವಾಮಿ, ಹಾಸನ ಜಿಲ್ಲಾ ಕಸಾಪ ಅಧ್ಯಕ್ಷ ಮಲ್ಲೇಶ್ ಗೌಡ, ಹಾವೇರಿ ಜಿಲ್ಲಾ ಕಸಾಪ ಅಧ್ಯಕ್ಷ ಲಿಂಗಯ್ಯ ಬಿ.ಹಿರೇಮಠ, ದಾವಣಗೆರೆ ಜಿಲ್ಲಾ ಕಸಾಪ ಅಧ್ಯಕ್ಷ ವಾಮದೇವಪ್ಪ ಹಾಗೂ ಇತರರು ಅವರು ಸುದ್ದಿಗೋಷ್ಠಿಯಲ್ಲಿದ್ದರು.

## ಶಾಲಾ-ಕಾಲೇಜು ವಿದ್ಯಾರ್ಥಿಗಳು ತಪ್ಪದೇ ಹೆಲ್ಮೆಟ್ ಧರಿಸಬೇಕು: ಡಾ.ಶೋಭಾರಾಣಿ ವಿ.ಜೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.25-ಜಿಲ್ಲೆಯ ಎಲ್ಲಾ ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳ ಸುರಕ್ಷತೆಯ ಹಿನ್ನಲೆಯಲ್ಲಿ ದ್ವಿ-ಚಕ್ರ ವಾಹನ ಚಲಾಯಿಸುವಾಗ ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಈ ಕುರಿತು ಆಯಾ ಶಿಕ್ಷಣ ಸಂಸ್ಥೆಗಳ ಪ್ರಾಂಶುಪಾಲರು ಮತ್ತು ಶಿಕ್ಷಕರು ಜಾಗೃತಿ ನೀಡಬೇಕು ಮತ್ತು ಖಚಿತಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಶೋಭಾರಾಣಿ ವಿ.ಜೆ ಅವರು ಹೇಳಿದರು.

ನಗರದ ಜಿಲ್ಲಾ ಪೊಲೀಸ್ ಕಚೇರಿಯ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ಬಳ್ಳಾರಿ ನಗರ ಹಾಗೂ ಬಳ್ಳಾರಿ ಗ್ರಾಮೀಣದಲ್ಲಿರುವ ಎಲ್ಲಾ ಶಾಲೆ ಮತ್ತು ಕಾಲೇಜುಗಳ ಪ್ರಾಂಶುಪಾಲರ ಹಾಗೂ ಆಡಳಿತ ಮಂಡಳಿ ಸದಸ್ಯರ ಸಭೆಯಲ್ಲಿ ಅವರು ಮಾತನಾಡಿದರು.

ವಾಹನ ಚಾಲನೆ ಮಾಡುವ ಬೈಕ್ ಸವಾರ ಮತ್ತು ಹಿಂಬದಿ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸುವ ಬಗ್ಗೆ ಕಟ್ಟುನಿಟ್ಟಿನ ಕ್ರಮಗಳನ್ನು ಪಾಲಿಸಬೇಕು ಹಾಗೂ ಶಾಲಾ ಕಾಲೇಜು ಬಸ್ ಮತ್ತು ಇತರೇ ವಾಹನಗಳು ಸಂಚಾರ ಸುರಕ್ಷತೆಯ ಬಗ್ಗೆ ಪ್ರಾಂಶುಪಾಲರು ಮತ್ತು ಶಿಕ್ಷಕರು ಮಕ್ಕಳಿಗೆ ಮಾಹಿತಿ ನೀಡಬೇಕು ಎಂದರು.

ಶಾಲಾ ಕಾಲೇಜಿನ ಎಲ್ಲಾ ಶಿಕ್ಷಕರು ಮತ್ತು ಶಿಕ್ಷಕೇತರ ಸಿಬ್ಬಂದಿಯವರು ಹಾಗೂ ಮೋಟಾರ್ ಸೈಕಲ್ ಚಲಾಯಿಸುವ ಪ್ರತಿಯೊಬ್ಬ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು ಎಂದು ತಿಳಿಸಿದರು.

ಶಾಲಾ ಕಾಲೇಜಿನ ವಾಹನಗಳ ಸಂಬಂಧಪಟ್ಟ ಚಾಲಕರು ಅತೀವೇಗ ಮತ್ತು ನಿರ್ಲಕ್ಷ್ಯತನದಿಂದ ಚಾಲನೆ ಮಾಡದಿರುವ ಬಗ್ಗೆ ಖಚಿತ ಪಡಿಸಿಕೊಳ್ಳಬೇಕು. ರಸ್ತೆ ಸುರಕ್ಷತೆ-ಯ ಎಲ್ಲಾ ನಿಯಮಗಳನ್ನು ಪಾಲಿಸಲು ತಿಳಿಸಬೇಕು.

ಶಾಲಾ ಕಾಲೇಜಿನ ವಾಹನಗಳಿಗೆ ಎಲ್.ಇ.ಡಿ ಹೆಡ್ ಲೈಟ್‌ಗಳನ್ನು ಮತ್ತು ಡ್ರಿಲ್/ ಕರ್ಕಶ ಶಬ್ದದ ಹಾರ್ನ್‌ಗಳನ್ನು ಅಳವಡಿಸಬಾರದು. ವಾಹನಗಳಿಗೆ ರಿಪ್ಲೆಕ್ಟರ್ ಸ್ಟಿಕರ್‌ಗಳನ್ನು ಅಳವಡಿಸಬೇಕು. ಕಡ್ಡಾಯವಾಗಿ ಶಾಲಾ ಕಾಲೇಜು ವಾಹನಗಳ ಚಾಲಕರು ಖಾಕಿ ಸಮವಸ್ತ್ರ ಧರಿಸಬೇಕು ಎಂದು ಸೂಚನೆ ನೀಡಿದರು.

ಶಾಲಾ ಕಾಲೇಜಿನ ವಾಹನಗಳ ಚಾಲಕರು ಮದ್ಯಪಾನ, ಡ್ರಗ್ಸ್ ಅಥವಾ ಇತರೆ ಮಾದಕ ದ್ರವ್ಯಗಳ ಆಮಲಿನಲ್ಲಿ ವಾಹನಗಳನ್ನು ಚಾಲನೆ ಮಾಡುವುದು ಕಾನೂನು ಬಾಹಿರ. ಕಂಡು ಬಂದಲ್ಲಿ ಶಿಕ್ಷೆಗೆ ಒಳಪಡುತ್ತಾರೆ ಎಂದು ಎಚ್ಚರಿಸಿದರು.

ವಿದ್ಯಾರ್ಥಿಗಳು ಬೋರ್ಡಿಂಗ್ ಮತ್ತು ಡಿ-ಬೋರ್ಡಿಂಗ್ ವೇಳೆಯಲ್ಲಿ ಮಕ್ಕಳ ಸುರಕ್ಷತೆ ಬಗ್ಗೆ ಶಿಕ್ಷಕರು ಗಮನ ವಹಿಸಬೇಕು. ವಾಹನಗಳಿಗೆ ಕಡ್ಡಾಯವಾಗಿ ವಾಹನದ ನೋಂದಣಿ ಪತ್ರ, ಇನ್ಸೂರೆನ್ಸ್ ಪರ್ಮಿಟ್ ಇರಬೇಕು. ಒಂದು ವರ್ಷಕ್ಕಿಂತ ಮೇಲ್ಪಟ್ಟ ವಾಹನಗಳಿಗೆ ಫಿಟ್‌ನೆಸ್ ಪ್ರಮಾಣ ಪತ್ರ ಹಾಗೂ ಚಾಲಕನು ಅಧಿಕೃತ ಡಿ.ಎಲ್ ಹೊಂದಿರಬೇಕು ಎಂದು ಹೇಳಿದರು.

ಈ ನಿಯಮಗಳನ್ನು ಪಾಲಿಸದಿದ್ದಲ್ಲಿ ಮತ್ತು ಶಾಲಾ ಕಾಲೇಜಿನ ವಿದ್ಯಾರ್ಥಿಗಳ ಸುರಕ್ಷತೆಯ ಬಗ್ಗೆ ಯಾವುದೇ ನಿರ್ಲಕ್ಷತನ ವಹಿಸಿದಲ್ಲಿ ಅಂತ ಕಾಲೇಜಿನ ಆಡಳಿತ ಮಂಡಳಿ ಮತ್ತು ಸಂಬಂಧಪಟ್ಟವರ ವಿರುದ್ಧ ಕಟ್ಟು ನಿಟ್ಟಿನ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ವಿವಿಧ ಶಾಲಾ-ಕಾಲೇಜುಗಳ ಆಡಳಿತ ಮಂಡಳಿಯವರು ಮತ್ತು ಪೊಲೀಸ್ ಅಧಿಕಾರಿಗಳು ಇದ್ದರು.

## ಸಂಗೀತದಿಂದ ಆಧ್ಯಾತ್ಮದ ಸಾಧನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ 25-ಸಂಗೀತದಿಂದ ಆಧ್ಯಾತ್ಮಿಕ ಸಾಧನೆ ಮತ್ತು ಒಲವು ಪ್ರಾಪ್ತವಾಗುತ್ತದೆ ಎಂದು ರವೀಂದ್ರ ಗುತ್ತೇದಾರ್ ನುಡಿದರು ಕಲ್ಬುರ್ಗಿ ನಗರದ ಗ್ರೀನ್ ಪಾರ್ಕ್. ದಕ್ಷಿಣ ಮುಖಿ ಹನುಮಾನ್ ದೇವಸ್ಥಾನದ ಪ್ರಾಂಗಣದಲ್ಲಿ ಪಂಡಿತ್ ಪುಟ್ಟರಾಜ ಸಾಂಸ್ಕೃತಿಕ ಸೇವಾ ಸಂಘ ಕಲ್ಬುರ್ಗಿ ಇವರ ಸಂಯುಕ್ತ ಆಶ್ರಯದಲ್ಲಿ ಸ್ವರ ಶ್ರದ್ಧಾಂಜಲಿ ಸಂಗೀತ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡುತ್ತಾ ತತ್ವಪದ ವಚನ ಗಾಯನ ಇವೆಲ್ಲವುದರಗಳಲ್ಲಿ ಆಧ್ಯಾತ್ಮಿಕ ಕಡೆಗೆ ಒಲವು ಹಾಗೂ ಮಾನಸಿಕ ತೃಪ್ತಿ ದೊರೆಯುತ್ತದೆ ಸಂಗೀತ ಸಾಧನೆಯಿಂದ ಹೃದಯ ವೈಶಾಲ್ಯತೆ ಬೆಳೆಯುತ್ತದೆ ಎಂದು ಅವರು ನುಡಿದರು ಮಲಕಾರಿ ಪೂಜಾರಿ ಅಧ್ಯಕ್ಷತೆ ವಹಿಸಿದರು ಮುಖ್ಯ ಅತಿಥಿಗಳಾದ ಕರ್ವಸ್ರಯ್ಯ ಸ್ವಾಮಿ.ಶಿವಪ್ಪಕಟ್ಟಿಮನಿ. ಸಂತೋಷ್ ಭೂಪಾಲ್. ಶಿವಕಾಂತ್ ಚುಮ್ಮಾ ದಿಗಂಬರ್ ಕುಲಕರ್ಣಿ ಶ್ರೀಮತಿ ನಾಗಮ್ಮ. ಶ್ರೀಮತಿ ಉಮಾದೇವಿ ಶ್ರೀ ರಾಮದಾಸ್ ಪಾಟೀಲ್ ಇದ್ದರು. ಸ್ವರದಾಂಜಲಿ ಸಂಗೀತ ಕಾರ್ಯಕ್ರಮದಲ್ಲಿ ಅನೇಕ ಹಿರಿಯ ಕಲಾವಿದರು ಗಳಾದ ಸೈದಪ್ಪ ಚೌಡಾಪುರ್. ಗುರುಶಾಂತಯ್ಯ ಸ್ವಾಮಿ ಸ್ಥಾವರ ಮಠ. ತೇ-ೂಟಯ್ಯ ಶಾಸ್ತ್ರಿಗಳು. ಶ್ರೀಮತಿ ಪವಿತ್ರ. ವಿನೋದ್ ದಸ್ತಪುರ್. ವೀರಭದ್ರಯ್ಯ ಸ್ಥಾವರಮಠ ಹಾಗೂ ಮೌನೇಶ್ ಪಂಚಾಲ್ ತಬ್ಲಾ ಸಾತ್ ನೀಡಿದರು ವಿಜ್ರಮಣೆಯಿಂದ ಈ ಎಲ್ಲ ಕಲಾವಿದರಿಂದ ಸಂಗೀತ ಜರುಗಿತು. ಸಂಸ್ಥೆಯ ಅಧ್ಯಕ್ಷರಾದ ರಾಚಯ್ಯ ಸ್ವಾಮಿ ರಟಕಲ್ ಅವರು ಸರ್ವರನ್ನು ಸ್ವಾಗತಿಸಿ ವಂದನಾರ್ಪಣೆ ಗೈದರು.

ಬಳ್ಳಾರಿ: ಜಿಲ್ಲಾ ನ್ಯಾಯಾಲಯದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ

## ಯೋಗ ಮಾಡುವುದು ಪ್ರತಿಯೊಬ್ಬರಿಗೂ ಅವಶ್ಯಕ: ನ್ಯಾಯಾಧೀಶರಾದ ಕೆ.ಜಿ.ಶಾಂತಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.25-ಪ್ರಸ್ತುತದಿನಗಳಲ್ಲಿ ಯೋಗವು ಪ್ರತಿಯೊಬ್ಬರಿಗೂ ಅತ್ಯಾವಶ್ಯಕವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ಹೇಳಿದರು.

ಜಿಲ್ಲಾ ನ್ಯಾಯಾಂಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಹಾಗೂ ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ 'ಒಂದು ಭೂಮಿ, ಒಂದೇ ಆರೋಗ್ಯಕ್ಕಾಗಿ ಯೋಗ' ಎಂಬ ಘೋಷವಾಕ್ಯದೊಂದಿಗೆ ನಗರದ ತಾಳೂರು ರಸ್ತೆಯ ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಇಂದಿನ ಬದುಕಿನ ಜಂಜಾಟದಲ್ಲಿ ಎಲ್ಲರಿಗೂ ಒತ್ತಡ ಸಾಮಾನ್ಯವಾಗಿದೆ. ಯೋಗ ಎಂದರೆ ದೇಹ ಮತ್ತು ಮನಸ್ಸಿನ ಸಂಗಮವಾಗಿದ್ದು, ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕಾಗಿ ಯೋಗ ಪ್ರತಿಯೊಬ್ಬರಿಗೂ ಅವಶ್ಯಕವಾಗಿದೆ. ಹಾಗಾಗಿ ಪ್ರತಿಯೊಬ್ಬರೂ ದಿನದಲ್ಲಿ ಕನಿಷ್ಠ ಒಂದು ಗಂಟೆ ಯೋಗಭ್ಯಾಸ ಮಾಡುವುದರಿಂದ ಆರೋಗ್ಯವನ್ನು ಸುಸ್ಥಿತಿಯಲ್ಲಿಟ್ಟುಕೊಳ್ಳಬಹುದು ಎಂದರು.

ಕಾರ್ಪೋರೇಟರ್ ವಲಯದಲ್ಲಿ ಉದ್ಯೋಗಿಗಳು ಕೆಲಸಕ್ಕೆ ಹೋಗುವ ಮುನ್ನ ಅವರಿಗೆ ಯೋಗ ಮಾಡಿಸಲಾಗುತ್ತದೆ. ಇದರಿಂದ ಒತ್ತಡ ಮುಕ್ತರಾಗಿ ಕಾರ್ಯನಿರ್ವಹಿಸಲು ಸಹಾಯಕವಾಗುತ್ತದೆ. ಹಾಗಾಗಿ ಪ್ರತಿಯೊಬ್ಬರೂ 10 ನಿಮಿಷಗಳ ಕಾಲ ಧ್ಯಾನ ಮಾಡಬೇಕು ಎಂದು ತಿಳಿಸಿದರು.

ವಿದೇಶಿಯನ್ನರು ನಮ್ಮ ದೇಶಕ್ಕೆ ಬಂದು ಇಲ್ಲಿನ ಯೋಗಾಭ್ಯಾಸವನ್ನು ಕಲಿತು ಅಲ್ಲಿ ಪ್ರಾರಂಭಿಸುತ್ತಿದ್ದಾರೆ. ಯೋಗದ ಆಯಾಮಗಳಿಂದಾಗುವ ಪರಿಣಾಮವನ್ನರಿತು ಸದೃಢ ಆರೋಗ್ಯವನ್ನು ಹೊಂದುತ್ತಿದ್ದಾರೆ. ನಾವು ಸಹ ನಮ್ಮ ಜೀವನದಲ್ಲಿ ಯೋಗಾಭ್ಯಾಸ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಚಿಂತೆ ಮಾಡುವವರು ಅನಾರೋಗ್ಯ ಕಟ್ಟಿಟ್ಟ ಬುತ್ತಿ. ಹಾಗಾಗಿ ಚಿಂತೆಗೆ ಒಳಪಡದೇ ಆರೋಗ್ಯಕರ ಜೀವನ ಹೊಂದಬೇಕು. ಯೋಗ ಕೇವಲ ಒಂದು ದಿನಕ್ಕೆ ಸೀಮಿತವಾಗಬಾರದು. ದಿನನಿತ್ಯದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಪಿ.ರಾಮಬ್ರಹ್ಮಂ ಅವರು ಯೋಗಾಭ್ಯಾಸ ನಡೆಸಿಕೊಟ್ಟರು.

ಒಂದನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಪ್ರಮೋದ.ಬಿ.ಜಿ., ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ರಾಘವೇಂದ್ರ ಗೌಡ.ಬಿ.ಜಿ., 3ನೇ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಡಿ.ಪಿ ಕುಮಾರಸ್ವಾಮಿ, 4ನೇ ಅಪರ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ವಾಸುದೇವ ರಾಧಕಾಂತ್ ಗುಡಿ, ಜಿಲ್ಲಾ ಕುಟುಂಬ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ವೆಂಕಟೇಶ್, ಪ್ರಿನ್ಸಿಪಲ್ ಹಿರಿಯ ಸಿವಿಲ್ ನ್ಯಾಯಾಧೀಶರು ಪ್ರಿನ್ಸಿಪಲ್ ಹಿರಿಯ ಸಿವಿಲ್ ನ್ಯಾಯಾಧೀಶರಾದ ಇಬ್ರಾಹಿಂ ಮುಜಾವರ್, ಒಂದನೇ ಅಪರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶೆ ಅಪರ್ಣ, ಎರಡನೇ ಅಪರ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರಾದ ನಸ್ರತ್ ಮುಖ್ತಾರ್ ಅಹ್ಮದ್ ಖಾನ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಪ್ರಿನ್ಸಿಪಲ್ ಸಿವಿಲ್ ಹಾಗೂ ಜೆಎಂಎಫ್‌ಸಿ ನ್ಯಾಯಾಧೀಶರಾದ ನಾಗೇಶ್ ನಾಯ್ಕ, 1ನೇ ಅಪರ ಸಿವಿಲ್ ನ್ಯಾಯಾಧೀಶರಾದ ಸಿದ್ಧಲಿಂಗಯ್ಯ ಗಂಗಾಧರಮಠ, 2ನೇ ಅಪರ ಸಿವಿಲ್ ನ್ಯಾಯಾಧೀಶರಾದ ವಿನುತಾ.ಬಿ.ಎಸ್., 3ನೇ ಅಪರ ಸಿವಿಲ್ ನ್ಯಾಯಾಧೀಶರಾದ ಮುದುಕಪ್ಪ ಒಡನ್, ಅರಣ್ಯ ಇಲಾಖೆಯ ಅಧಿಕಾರಿ ದಾಸನಗೌಡ ಬಿ.ಪಾಟೀಲ್ ಸೇರಿದಂತೆ ಜಿಲ್ಲಾ ನ್ಯಾಯಾಲಯದ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಯೋಗಾಭ್ಯಾಸದಲ್ಲಿ ಭಾಗವಹಿಸಿದ್ದರು.

## ಬಳ್ಳಾರಿ: ಭೂದಾಖಲೆಗಳ ಇ-ಖಜಾನೆಗೆ ಚಾಲನೆ ನೀಡಿದ ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.25-ಜಿಲ್ಲೆಯಲ್ಲಿ ಭೂ ಸುರಕ್ಷಾ ಯೋಜನೆ ದಾಖಲೆಗಳ ಡಿಜಿಟಲೀಕರಣ ಈಗಾಗಲೇ ಕಾರ್ಯ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಎನ್. ಝುಬೇರ್ ಅವರು ನಗರದ ಹೊಸ ಜಿಲ್ಲಾಡಳಿ ಭವನದ ಭೂ ದಾಖಲೆಗಳ ಇ-ಖಜಾನೆ(ಆಧುನಿಕ ಅಭಿಲೇಖಾಲಯ)ಗೆ ಶನಿವಾರ ಭೇಟಿ ನೀಡಿ ಚಾಲನೆಗೊಳಿಸಿ ಸಾಂಕೇತಿಕವಾಗಿ ಗಣಕೀಕೃತ ಪ್ರತಿಗಳನ್ನು ರೈತರಿಗೆ ನೀಡಿದರು.

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಭೂ ಸುರಕ್ಷಾ ಯೋಜನೆಯಡಿ ಜಿಲ್ಲೆಯ ಕಂದಾಯ ಇಲಾಖೆಯ ಎಲ್ಲಾ ದಾಖಲೆಗಳನ್ನು ಗಣಕೀಕರಣ ಮಾಡುವ ಕಾರ್ಯ ಈಗಾಗಲೇ ಆರಂಭಿಸಲಾಗಿದೆ. ಡಿಜಿಟಲೀಕರಣಗೊಂಡ ಕಡತ ಮತ್ತು ವಹಿಗಳನ್ನು ಡಿಜಿಟಲ್ ಮಾದರಿಯಲ್ಲಿ ಜುಲೈ 01 ರಿಂದ ಕಡ್ಡಾಯವಾಗಿ ಡಿಜಿಟಲ್ ದಾಖಲೆಯನ್ನು ನೀಡುವ ವ್ಯವಸ್ಥೆಯನ್ನು ಎಲ್ಲಾ ತಾಲ್ಲೂಕುಗಳಲ್ಲಿ ಪ್ರಾರಂಭಿಸಲು ಸರ್ಕಾರದ ಆದೇಶವಿದ್ದು, ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಕಡತ ಮತ್ತು ವಹಿಗಳ ಡಿಜಿಟಲ್ ದಾಖಲೆಯನ್ನು ನೀಡುವ ಕಾರ್ಯ ಪ್ರಾರಂಭಿಸಲಾಗಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಕುರುಗೋಡು ತಾಲ್ಲೂಕನ್ನು ಪೈಲಟ್ ತಾಲ್ಲೂಕನ್ನಾಗಿ ಕೈಗೆತ್ತಿಕೊಂಡು 73,815 ಕಡತಗಳ ಪೈಕಿ ಈಗಾಗಲೇ 73,815 ಕಡತಗಳನ್ನು ಸಂಪೂರ್ಣವಾಗಿ ಗಣಕೀಕರಣ ಮಾಡಲಾಗಿದೆ ಎಂದರು.

ಜಿಲ್ಲೆಯಲ್ಲಿ ಒಟ್ಟು 6,18,185 ಕಡತಗಳ ಪೈಕಿ 1,52,324 ಕಡತಗಳನ್ನು ಗಣಕೀಕರಣ ಮಾಡಲಾಗಿದೆ. ದಾಖಲಾತಿಗಳ ಗಣಕೀಕರಣದಿಂದ ಸಾರ್ವಜನಿಕರಿಗೆ ಆನ್‌ಲೈನ್ ಮೂಲಕ ಸುಲಭವಾಗಿ ದಾಖಲಾತಿಗಳು ದೊರಕಲಿವೆ ಎಂದು ತಿಳಿಸಿದರು.

ಸಾರ್ವಜನಿಕರು ತಮ್ಮ ದಾಖಲೆಗಳನ್ನು ಅಭಿಲೇಖಾಲಯದ (https://recordroom.karnataka.gov.in/ERECORD-ROOM/) ತಂತ್ರಾಂಶದ ಮೂಲಕ ಪಡೆದುಕೊಳ್ಳಬಹುದು. ಇದರೊಂದಿಗೆ ಕಚೇರಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಿ ದಾಖಲೆಯನ್ನು ಡಿಜಿಟಲ್ ರೂಪದಲ್ಲಿ ಸಹ ಪಡೆಯಬಹುದು ಎಂದು ತಿಳಿಸಿದರು.

ಈಗಾಗಲೇ ಡಿಜಿಟಲ್‌ಗೊಂಡ ಕಡತ ಮತ್ತು ವಹಿಗಳನ್ನು ಅರ್ಜಿ ನೀಡಿದ ಸಮಯದಲ್ಲಿ ನೀಡಲಾಗುವುದು ಹಾಗೂ ಡಿಜಿಟಲೀಕರಣಕ್ಕೆ ಬಾಕಿ ಇರುವ ಕಡತ ಮತ್ತು ವಹಿಗಳನ್ನು 07 ದಿನಗಳ ಒಳಗೆ ಡಿಜಿಟಲೀಕರಣಗೊಳಿಸಿ ದಾಖಲೆಯನ್ನು ನೀಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಬಳ್ಳಾರಿ ತಾಲ್ಲೂಕು ತಹಶೀಲ್ದಾರ್ ರೇಖಾ.ಟಿ ಮತ್ತು ಇಲಾಖೆಯ ಸಿಬ್ಬಂದಿಗಳು ರೈತರು ಮತ್ತು ಸಾರ್ವಜನಿಕರು ಇದ್ದರು.

## ಜೂನ್ 27 ರಂದು ನೇರ ಸಂದರ್ಶನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 25- ಇಲ್ಲಿನ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ವಿನಿಮಯ ಇಲಾಖೆ ಕಚೇರಿಯಲ್ಲಿ ಜೂನ್ 27ರ ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ಗಂಟೆವರೆಗೆ ನೇರ ಸಂದರ್ಶನ ಆಯೋಜನೆ ಮಾಡಿಲಾಗಿದ್ದು, ಆಸಕ್ತ ಯುವಕ ಅಥವಾ ಯುವತಿಯರು ಭಾಗಹಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.

ನೇರ ಸಂದರ್ಶನವನ್ನು ವಿವಿಧ ಖಾಸಗಿ ಸಂಸ್ಥೆಗಳ ಸಹಭಾಗಿತ್ವದಲ್ಲಿ ಆಯೋಜನೆ ಮಾಡಲಾಗಿದ್ದು, ತಮ್ಮ ಕಂಪನಿಯಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

18 ರಿಂದ 28 ವರ್ಷಗಳವರೆಗಿನ ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ವಿದ್ಯಾರ್ಹತೆಯ ಅಂಕ ಪಟ್ಟಿಗಳ ಜೆರಾ-ಕ್ಸ್ ಪ್ರತಿಗಳು ಮತ್ತು ಬಯೋಡಾಟಾ, ಆಧಾರ್ ಕಾರ್ಡ್ ಪ್ರತಿ ಹಾಗೂ ಭಾವಚಿತ್ರಗಳೊಂದಿಗೆ ಆಗಮಿಸಬೇಕು.

ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಈ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂ-ಖ್ಯೆ; 08532-231684, 9008211750, 8095125775ಗೆ ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರತಿಯೊಬ್ಬರೂ ಉದ್ಯೋಗ ಸೃಷ್ಟಿಸುವಂತರಾಗಬೇಕು:

## ಜಿಲ್ಲಾಧಿಕಾರಿ ಪ್ರಶಾಂತ ಕುಮಾರ್ ಮಿಶ್ರಾ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.25-ಪ್ರತಿಯೊಬ್ಬರೂ ಸ್ವ ಉದ್ಯೋಗ, ಸ್ವಾವಲಂಬನೆ ಮತ್ತು ಸ್ವ-ದುಡಿಮೆಗಾಗಿ ಉದ್ಯೋಗ ಸೃಷ್ಟಿಸುವಂತರಾಗಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ ಕುಮಾರ್ ಮಿಶ್ರಾ ಅವರು ಕರೆ ನೀಡಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಬಳ್ಳಾರಿ ಚೇಂಬರ್ ಸ್ಕಿಲ್ ಡೆವಲಪ್‌ಮೆಂಟ್ ಸೆಂಟರ್, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕೈಗಾರಿಕಾ ಕೇಂದ್ರ, ಕೌಶಲ್ಯಾಭಿವೃದ್ಧಿ ಇಲಾಖೆ, ಪ್ರಧಾನ ಮಂತ್ರಿ ಖನಿಜ ಕ್ಷೇತ್ರ ಕಲ್ಯಾಣ ಯೋಜನೆಯಡಿ ತರಬೇತಿ ಪಡೆದಿರುವ ಟ್ಯಾಲಿ ಪ್ರೈಮ್ ಮತ್ತು ಹೋಟಲ್ ಮೇನೇಜ್‌ಮೆಂಟ್ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಪ್ರಮಾಣಪತ್ರ ವಿತರಣಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಯುವಕರು ದೇಶದ ಭವಿಷ್ಯ. ಮುಕ್ತ ಮತ್ತು ತೆರೆದ ಮನಸ್ಸಿನಿಂದ ಹೊಸತನಕ್ಕೆ ದೊಡ್ಡ ದೊಡ್ಡ ಕನಸುಗಳನ್ನು ಕಾಣಬೇಕು. ದೊಡ್ಡ ದೊಡ್ಡ ಸಾಧನೆಗಳನ್ನು ಸಾಧಿಸಲು ಪ್ರತಿಯೊಬ್ಬರೂ ಪ್ರಯತ್ನಿಸಿ ಮುಂದಿನ ಪೀಳಿಗೆಗೆ ಆದರ್ಶ ಮಾರ್ಗದರ್ಶಕರು ಮತ್ತು ಪ್ರೇರಣೆ ನೀಡುವವರಂತಾಗಬೇಕು ಎಂದರು.

ಈ ಹಿಂದೆ ಮಾಹಿತಿ ಕೊರತೆ ಸಾಕಷ್ಟಿತ್ತು. ಇಂಟರ್‌ನೆಟ್ ಮತ್ತು ಸ್ಮಾರ್ಟ್ ಮೊಬೈಲ್‌ಗಳು ಮಾಹಿತಿಯ ಕೊರತೆಯನ್ನು ನೀಗಿಸಿದ್ದು, ಮೆಟ್ರೋ ಸಿಟಿಯ ವಿದ್ಯಾರ್ಥಿಗಳಿಗೆ ಸಿಗುವ ಎಲ್ಲಾ ಮಾಹಿತಿ, ಜ್ಞಾನ ಹಳ್ಳಿಯ ವಿದ್ಯಾರ್ಥಿಗಳಿಗೂ ಸುಲಭವಾಗಿ ಸಿಗುತ್ತಿದೆ. ವಿದ್ಯಾರ್ಥಿಗಳು ತಮಗೆ ಬೇಕಾದ್ದನ್ನು ಆಯ್ಕೆ ಮಾಡಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಯಶವಂತರಾಜ್ ನಾಗಿರೆಡ್ಡಿ ಅವರು ಅಧ್ಯಕ್ಷತೆ ವಹಿಸಿ, ಟ್ಯಾಲಿಪ್ರೈಂ, ಬೇಸಿಕ್ ಕಂಪ್ಯೂರ್ಸ್‌ಲ್ಲಿ 200 ಅಭ್ಯರ್ಥಿಗಳು, ಹೋಟಲ್ ಮ್ಯಾನೇಜ್ ಮೆಂಟ್‌ನಲಿ 50 ಅಭ್ಯರ್ಥಿಗಳು ತರಬೇತಿ ಪಡೆದಿದ್ದು, ಆಸಕ್ತರಿಗೆ ಅಪ್ರೆಂಟಿಶಿಫ್ ನೀಡಲು ವ್ಯವಸ್ಥೆ ಮಾಡಲಾಗಿದೆ ಎಂದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಜಂಟಿ ಕಾರ್ಯದರ್ಶಿ ಡಾ.ಮರ್ಚೇಡ್ ಮಲ್ಲಿಕಾರ್ಜುನಗೌಡ ಮಾತನಾಡಿ, ಹೋಟಲ್ ಮ್ಯಾನೇಜ್ ಮೆಂಟ್ ಕೋರ್ಸ್ನ ತರಬೇತಿ ಪಡೆದಲ್ಲಿ 'ನಿರುದ್ಯೋಗ' ಸಮಸ್ಯೆಯೂ ಇರುವುದಿಲ್ಲ, ಈ ಕ್ಷೇತ್ರದಲ್ಲಿ ಅವಕಾಶಗಳಿಗೆ ಕೊನೆಯಿಲ್ಲ ಎಂದರು.

ಟ್ಯಾಕ್ಸೇಷನ್ ಕಮಿಟಿ ಚೇರ್ಮನ್ ಸಿಎ ಕೆ.ರಾಜಶೇಖರ್ ಮಾತನಾಡಿ, ಭವಿಷ್ಯದಲ್ಲಿ ವೃತ್ತಿಪರ ಕೋರ್ಸ್‌ಗಳಿಗೆ ಬೇಡಿಕೆ ಇದೆ. ಹಾಗಾಗಿ ವಿದ್ಯಾರ್ಥಿಗಳು ಕೇವಲ ಕ್ಲಾಸ್‌ರೂಂಗೆ ಸೀಮಿತಗೊಳ್ಳದೇ ವೃತ್ತಿಪರ ಕೋರ್ಸ್‌ಗಳಿಗೆ ಸೇರಿ ಆಯಾ ವೃತ್ತಿಯ ಕೌಶಲ್ಯ, ನೈಪುಣ್ಯತೆಯನ್ನು ಪಡೆಯಲು ಪ್ರಯತ್ನಿಸಬೇಕು ಎಂದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಗೌರವ ಕಾರ್ಯದರ್ಶಿಗಳಾದ ಕೆ.ಸಿ. ಸುರೇಶಬಾಬು ಅವರು ವಂದನಾರ್ಪಣೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಹಿರಿಯ ಉಪಾಧ್ಯಕ್ಷ ಅವ್ವಾರು ಮಂಜುನಾಥ, ಉಪಾಧ್ಯಕ್ಷ ಎಸ್. ದೊಡ್ಡನಗೌಡ, ಜಂಟಿ ಕಾರ್ಯದರ್ಶಿ ವಿ.ರಾಮಚಂದ್ರ, ಚೇಂಬರ್ ಸ್ಕಿಲ್ ಡೆವಲಪ್‌ಮೆಂಟ್ ಸೆಂಟರ್‌ನ ನಾಗಳ್ಳಿ ರಮೇಶ್, ಕೆ.ನಾಗರಾಜ್ ಹಾಗೂ ಅಭ್ಯರ್ಥಿಗಳು ಉಪಸ್ಥಿತರಿದ್ದರು.

## ಜೆಸ್ಕಾಂ ಗ್ರಾಮೀಣ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 25-ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ವಡವಟ್ಟಿ ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಜೂನ್ 26ರ ಬೆಳಗ್ಗೆ 09 ಗಂಟೆಯಿಂದ ಸಾಯಂಕಾಲ 04 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ತರಬೇತಿಗೆ ಅರ್ಜಿ

ರಾಯಚೂರು ಜೂನ್ 25-ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಖೇಲೋ ಇಂಡಿಯಾ ಯೋಜನೆಯಡಿ ಸಣ್ಣ ಖೇಲೋ ಇಂಡಿಯಾ ಕೇಂದ್ರಗಳನ್ನು ಪ್ರಾರಂಭಿಸಲು ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿದ್ದು, ಉತ್ತಮ ಕ್ರೀಡಾಪಟುಗಳನ್ನು ಆಯ್ಕೆ ಮಾಡಿ ಒಂದು ವರ್ಷದ ಅವಧಿಗೆ ತರಬೇತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಖೇಲೋ ಇಂಡಿಯಾ ಯೋಜನೆಯಡಿ ಅಥ್ಲಟಿಕ್ ಕ್ರೀಡಾಪಟುಗಳ ಆಯ್ಕೆ ಪ್ರಕ್ರಿಯೆ ನಡೆಸಲಾಗುತ್ತಿದ್ದು, ಜಿಲ್ಲೆಯ ಆಸಕ್ತ 12 ರಿಂದ 18 ವರ್ಷದ ಬಾಲಕ ಬಾಲಕಿಯರು ತಮ್ಮ ಜನ್ಮ ದಿನಾಂಕ ದೃಢೀಕರಣ ಪತ್ರ (ಶಾಲೆ ಅಥವಾ ಕಾಲೇಜು ಮುಖ್ಯಸ್ಥರಿಂದ ದೃಢೀಕೃತ) ಹಾಗೂ ಕ್ರೀಡಾ ಸಾಧನೆಯ ಪ್ರಶಸ್ತಿ ಪತ್ರದೊಂದಿಗೆ ಜೂನ್ 26ರ ಬೆಳಿಗ್ಗೆ 10 ಗಂಟೆಗೆ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣ ರಾಯಚೂರು ಇಲ್ಲಿ ನೋಂದಣೆ ಮಾಡಿಕೊಳ್ಳಬಹುದಾಗಿದೆ.

ಆಯ್ಕೆ ಪ್ರಕ್ರಿಯೆಗೆ ಕ್ರೀಡಾ ಸಮವಸ್ತ್ರದೊಂದಿಗೆ ಭಾಗವಹಿಸಬೇಕಾಗಿದ್ದು, ಅಥ್ಲೆಟಿಕ್ ಕ್ರೀಡೆಯ ಟ್ರಾಯಕ್ ಮತ್ತು ಫೀಲ್ಡ್ ಇವೆಂಟ್ಸಗಳಲ್ಲಿ ಆಯ್ಕೆ ಮಾಡಲಾಗುತ್ತದೆ. ಇತ್ತೀಚಿನ 02 ಭಾವಚಿತ್ರದೊಂದಿಗೆ ಸ್ವ-ವಿವರದ ಅರ್ಜಿಯನ್ನು ಆಯ್ಕೆ ಸಂದರ್ಭದಲ್ಲಿ ಸಲ್ಲಿಸಬೇಕು. ಆಯ್ಕೆ ಸಂದರ್ಭದಲ್ಲಿ ಯಾವುದೇ ಗಾಯಗಳು ಅನಾರೋಗ್ಯ ಯಾವುದೇ ಇತರೆ ಸಾವು ನೋವುಗಳು ಶಾಶ್ವತ ಅಂಗವೈಕಲ್ಯ ಮತ್ತು ಜೀವಹಾನಿ ಸಂಭವಿಸಿದರೆ ಸಂಸ್ಥೆ ಅಥವಾ ಇಲಾಖೆ ಜವಾಬ್ದಾರಿಯುತವಾಗಿರುವುದಿಲ್ಲ. ಹಾಗೂ ಆಯ್ಕೆಗೆ ಹಾಜರಾಗುವ ಕ್ರೀಡಾಪಟುಗಳಿಗೆ ಯಾವುದೇ ರೀತಿಯ ದಿನ ಭತ್ಯೆ ಅಥವಾ ಪ್ರಯಾಣ ಭತ್ಯೆ ನೀಡಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣ ರಾಯಚೂರು ಕಚೇರಿ ಅಥವಾ ಖೇಲೋ ಇಂಡಿಯಾ ತರಬೇತುದಾರರಾದ ಚಂದ್ರಶೇಖರ್ ಮೊಬೈಲ್ ಸಂಖ್ಯೆ: 9886551214ಗೆ ಸಂಪರ್ಕಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ಲಾಸ್ಟಿಕ್ ತಿಂದುಹಾಕುವ ಶಿಲೀಂಧ್ರ (Fungi): ಸಮುದ್ರದ ಗಂಭೀರ ಸಮಸ್ಯೆಗೆ ಸೂಕ್ಷ್ಮ ಪರಿಹಾರ

ಇಂದಿನ ದಿನಗಳಲ್ಲಿ ನಾವು ಪ್ರತಿದಿನವೂ ಬಳಸುವ ಪ್ಲಾಸ್ಟಿಕ್ (Plastic) ನಮ್ಮ ಬದುಕಿನ ಅಗತ್ಯವಾದ ಭಾಗವಾಯಿತು. ಆದರೆ ಇದೇ ಪ್ಲಾಸ್ಟಿಕ್ ಇಂದು ನಮ್ಮ ಗ್ರಹಕ್ಕೆ ಭಾರಿ ತೊಂದರೆ ತಂದಿದೆ. ಸಮುದ್ರಗಳಲ್ಲಿ ಪ್ಲಾಸ್ಟಿಕ್ ಕಸದ ಗುಡ್ಡಗಳು (Garbage Patches)ರಚನೆಯಾಗಿ,ಅನೇಕ ಜಲಚರ ಜೀವಿಗಳಿಗೆ ಜೀವಭಯ ಉಂಟುಮಾಡುತ್ತಿದೆ.ಈಪರಿಸ್ಥಿತಿಯಲ್ಲಿ, ವಿಜ್ಞಾನಿಗಳು ಪತ್ತೆಹಚ್ಚಿರುವ ಒಂದು ವಿನೂತನ ಶಿಲೀಂಧ್ರ (Fungi)– ಪಾರೆಂಜಿಯೋಡೋಂಟಿಯಮ್ ಅಲ್ಬಮ್ (Parengyodontium album) – ಮನುಷ್ಯ ಸೃಷ್ಟಿಸಿದ ಪ್ಲಾಸ್ಟಿಕ್ ಸಮಸ್ಯೆಗೆ ಕಿಂಚಿತ್ತಾದರೂ ಪರಿಹಾರ ನೀಡಬಹುದೆಂಬ ನಿರೀಕ್ಷೆ ಮೂಡಿಸಿದೆ.

ಎಲ್ಲಿ ಕಂಡುಬಂದ ಈ ಶಿಲೀಂಧ್ರ (Fungi)?

ನೆದರ್ಲ್ಯಾಂಡ್ಸ್ (Netherlands)ರಾಯಲ್ ನಿದರ್ಲ್ಯಾಂಡ್ಸ್ ಇನ್ಸ್ಟಿಟ್ಯೂಟ್ ಫಾರ್ ಸೀ ರಿಸರ್ಚ್ (NIOZ) ಸಂಸ್ಥೆಯ ಶೋಧಕ ತಂಡವು ಈ ಶಿಲೀಂಧ್ರವನ್ನು ಪೆಸಿಫಿಕ್ ಮಹಾಸಾಗರದ ಮಧ್ಯಭಾಗದಲ್ಲಿ ಇರುವ Great Pacific Garbage Patch ಎಂಬ ಪ್ಲಾಸ್ಟಿಕ್ ಕಸದ ತೇಲುವ ಗುಡ್ಡದ ಮೇಲೆ ಪತ್ತೆಹಚ್ಚಿದೆ. ಇದು ಪ್ಲಾಸ್ಟಿಕ್ನ ಮೇಲೆ ವಾಸವಿರುವ ಸಮುದ್ರಜೀವಿಗಳ ಸಮುದಾಯದ (Marine Microbial Community) ಭಾಗವಾಗಿದೆ. ಈ ಶಿಲೀಂಧ್ರವು ತಾನು ಬಿದ್ದಿದ್ದ ಪರಿಸರಕ್ಕೆ ಸರಿಹೋಗಿಕೊಂಡು ಅಲ್ಲಿನ ಪ್ಲಾಸ್ಟಿಕ್ನಿಂದಲೇ ತನ್ನ ಜೀವ ಶಕ್ತಿಯನ್ನು ಪಡೆಯುವಲ್ಲಿ ಪರಿಣತವಾಗಿದೆ!

ಪ್ಲಾಸ್ಟಿಕ್ ಜೀರ್ಣಿಸಬಲ್ಲ ಶಿಲೀಂಧ್ರ (Fungi) – ಹೇಗೆ ಸಾಧ್ಯ?

ಪಾರೆಂಜಿಯೋಡೋಂಟಿಯಮ್ ಅಲ್ಬಮ್ (P.album) ಎಂಬ ಈ ಶಿಲೀಂಧ್ರವು ಪಾಲಿಥೀನ್ (Polyethylene-PE) ಎಂಬ ಅತ್ಯಂತ ಸಾಮಾನ್ಯ ಪ್ಲಾಸ್ಟಿಕ್ ಜಾತಿಯನ್ನು ಉಡಿಸಿಕೊಂಡು ಹೋಗುವ ಶಕ್ತಿ ಹೊಂದಿದೆ. ಇದು ಪ್ಲಾಸ್ಟಿಕ್ನ ಅಣು ರಚನೆಯನ್ನು ಜೀರ್ಣಿಸಬಹುದು ಮತ್ತು ಅದರಿಂದ ಶಕ್ತಿ (Energy) ಹಾಗೂ ಕಾರ್ಬನ್ (ಅಚಿಡಿಭಠಟಿ) ಪಡೆದುಕೊಳ್ಳಬಹುದು. ಆದರೆ ಇದಕ್ಕಾಗಿ ಒಂದು ಮುಖ್ಯ ಷರತ್ತು ಇದೆ – ಆ ಪ್ಲಾಸ್ಟಿಕ್ಕು ಮೊದಲು ಗಗಿ ಬೆಳಕಿಗೆ (Ultraviolet Light) ಒಳಪಡಿಸಬೇಕು.

ಗಗಿ ಬೆಳಕು ಪ್ಲಾಸ್ಟಿಕ್ನ ಅಣುಗಳನ್ನು ಕ್ಷೀಣಗೊಳಿಸುತ್ತದೆ (Weaken Molecular Bonds), ಇದರಿಂದ ಶಿಲೀಂಧ್ರ (ಈಣಟಿರು) ಅದನ್ನು ಸುಲಭವಾಗಿ ಜೀರ್ಣಿಸಬಲ್ಲದು. ಇದು ಪ್ರಕೃತಿಯ ಒಂದೊಂದು ವಿಚಿತ್ರ ಕಲೆಯಂತೆ ಕಾಣುತ್ತದೆ – ಮನುಷ್ಯರು ಮಾಡಿದ ಸಮಸ್ಯೆಗೆ ಪ್ರಕೃತಿಯಲ್ಲೇ ಪರಿಹಾರ ಇರುವಂತೆ!

ಶೀಲತೆ, ಶಕ್ತಿ ಮತ್ತು ಸವಾಲುಗಳು

ಪರೀಕ್ಷಾ ಪ್ರಯೋಗಾಲಯದ (Laboratory conditions) ಪ್ರಕಾರ, ಈ ಶಿಲೀಂಧ್ರವು ಗಗಿ–ಪ್ರಕ್ರಿಯೆಯಾದ ಪ್ಲಾಸ್ಟಿಕ್ ಅನ್ನು ದಿನಕ್ಕೆ ಕೇವಲ 0.05% ಪ್ರಮಾಣದಲ್ಲಿ ಜೀರ್ಣಿಸುತ್ತದೆ. ಅಂದರೆ ಇದು ಬಹಳ ನಿಧಾನವಾದ ಪ್ರಕ್ರಿಯೆ. ಆದರೂ, ಇದು ಪ್ಲಾಸ್ಟಿಕ್ ನಾಶಗತಿಯ ದಿಕ್ಕಿನಲ್ಲಿ ಪ್ರಮುಖ ಹೆಜ್ಜೆಯಾಗಿದೆ.

ಇನ್ನೊಂದು ಆಸಕ್ತಿಕರ ಸಂಗತಿ ಎಂದರೆ – ಈ ಶಿಲೀಂಧ್ರ (ಈಣಟಿರು) ಒಂಟಿಯಾಗಿ ಕೆಲಸ ಮಾಡಲ್ಲ. ಇದು ಸಮುದ್ರದ ಪ್ಲಾಸ್ಟಿಕ್ ಮೇಲಿರುವ ಬಯೋಫಿಲ್ಮ್ (Biofilm) ಎಂಬ ಜೀವಿಗಳ ಜತೆಗೆ ಸೇರಿಕೊಂಡು ಕಾರ್ಯನಿರ್ವಹಿಸುತ್ತದೆ. ಈ ಜೀವಿಗಳ ಎಲ್ಲಾ ಸಹಕಾರದಿಂದ ಪ್ಲಾಸ್ಟಿಕ್ ಕಡಿಮೆ ಆಗುವ ಕ್ರಿಯೆ ಸುಗಮಗೊಳ್ಳುತ್ತದೆ.

ಭವಿಷ್ಯದ ಸಾಧ್ಯತೆಗಳು

ಈ ಶಿಲೀಂಧ್ರ (ಈಣಟಿರು) ನಮಗೆ ಎಂಥ ಪರಿಚಯವನ್ನು ನೀಡುತ್ತಿದೆ ಅಂದ್ರೆ, ನಾವು ಬಿಸಾಡಿದ ಪ್ಲಾಸ್ಟಿಕ್ನೂ ಕೆಲವೊಂದು ಜೀವಿಗಳಿಗೆ ಆಹಾರವಾಗಬಹುದು. ಇವತ್ತಿಗೆ ಈ ಶಿಲೀಂಧ್ರವನ್ನು ನೇರವಾಗಿ ಪರಿಸರದಲ್ಲಿ ಬಳಸುವುದು ಸಾಧ್ಯವಿಲ್ಲ, ಏಕೆಂದರೆ ಪ್ಲಾಸ್ಟಿಕ್ಗೆ ಮೊದಲು ಗಗಿ ಪ್ರಕ್ರಿಯೆ ಆಗಬೇಕು ಮತ್ತು ಶೀಲತೆ ನಿಧಾನವಾಗಿದೆ. ಆದರೆ ವಿಜ್ಞಾನಿಗಳ ಪ್ರಯತ್ನಗಳು ಮುಂದುವರೆದರೆ, ಇಂಥ ಶಿಲೀಂಧ್ರಗಳನ್ನು ಅನುವಂಶಶಾಸ್ತ್ರದ (Genetic) ಮಾರ್ಗದಲ್ಲಿ ಅಭಿವೃದ್ಧಿಪಡಿಸಿ ವೇಗವಾಗಿ ಕಾರ್ಯನಿರ್ವಹಿಸುವಂತೆ ಮಾಡಬಹುದೆಂಬ ನಿರೀಕ್ಷೆ ಇದೆ.

ಅಂತಿಮವಾಗಿ...

ಪ್ರಕೃತಿ ನಮ್ಮ ತಪ್ಪುಗಳಿಗೆ ಉತ್ತರ ಕೊಡುವ ಸಾಮರ್ಥ್ಯವನ್ನೇ ಹೊಂದಿದೆ. ಪಾರೆಂಜಿಯೋಡೋಂಟಿಯಮ್ ಅಲ್ಬಮ್ ಎಂಬ ಸಮುದ್ರ ಶಿಲೀಂಧ್ರ (ಈಣಟಿರು) ನಮಗೆ ತಿಳಿಸಿಕೊಡುವುದು ಏನೆಂದರೆ – ಸಮಸ್ಯೆಗಳ ಪರಿಹಾರವೇ ಪ್ರಕೃತಿಯಲ್ಲಿ ಇದೆ. ನಾವು ಅವುಗಳನ್ನು ಗುರುತಿಸಿ, ಜಾಣ್ಮೆಯಿಂದ ಬಳಸಿದರೆ, ಭವಿಷ್ಯವನ್ನು ಪ್ಲಾಸ್ಟಿಕ್ ಮುಕ್ತವಾಗಿ ಮಾಡುವುದು ಅಸಾಧ್ಯವಲ್ಲ.



**ರೋಹಿತ್ ವಿಜಯ್ ಜಿರೋಬೆ**
**ಸಸ್ಯಶಾಸ್ತ್ರ ಉಪನ್ಯಾಸಕ – ಬೀದರ್**

## ಸರ್ವೋತ್ತಮ ಸೇವಾ ಪ್ರಶಸ್ತಿಗೆ ಆಯ್ಕೆಯಾದ ಬಿಇಒ ಗೆ ಸನ್ಮಾನ




ಮಲ್ಲಮ್ಮ ನುಡಿ ವಾರ್ತೆ

ಹಗರಿಬೊಮ್ಮನಹಳ್ಳಿ. ಜೂ.24 ಜಿಲ್ಲಾ ಸರ್ವೋತ್ತಮ ಸೇವಾ ಪ್ರಶಸ್ತಿಗೆ ಆಯ್ಕೆಯಾದ ಕ್ಷೇತ್ರ ಶಿಕ್ಷಣಾಧಿಕಾರಿ ಮೈಲೇಶ್ ಬೇವೂರ್ ರವರನ್ನು ತಾಲೂಕು ಡಾ॥ ಬಿ. ಆರ್. ಅಂಬೇಡ್ಕರ್ ಸಂಘ, ಕರ್ನಾಟಕ ದಲಿತ ಸಂಘರ್ಷ ಸಮಿತಿಯ ತಾಲೂಕು ಘಟಕಗಳ ಪದಾಧಿಕಾರಿಗಳು /ಕಾರ್ಯಕರ್ತರು ಹಾಗೂ ನದಾಫ್ /ಪಿಂಜಾರ್ ಸಮಾಜಗಳ ಮುಖಂಡರು ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ತಾಲೂಕು ಬಿ.ಆರ್. ಅಂಬೇಡ್ಕರ್ ಸಂಘದ ಅಧ್ಯಕ್ಷರಾದ ಹೆಚ್. ದೊಡ್ಡಬಸಪ್ಪ ಗದ್ದಿಕೆರೆ, ಪ್ರಧಾನ ಕಾರ್ಯದರ್ಶಿ ಕೆ. ಮಹೇಶ್ವರ ಮಾದೂರು, ಹಿರಿಯ ಮುಖಂಡರಾದ ಯಡ್ರಾಮನಹಳ್ಳಿ ಮರಿಯಪ್ಪ, ಸೊನ್ನದ ದುರುಗಪ್ಪ, ನದಾಫ್ /ಪಿಂಜಾರ್ ಸಮಾಜದ ಮುಖಂಡರಾದ ಏಣಿಗಿ ಪಕ್ಕೀರಸಾಬ್, ಅಂಬಳಿ ಇಬ್ರಾಹಿಂ, ನಿವೃತ್ತ ಶಿಕ್ಷಕ ಎಂ.ನಾಗೇಂದ್ರಪ್ಪ, ಉಪ್ಪಾರ ಸಮಾಜದ ಉಪ್ಪಾರಗಟ್ಟಿ ಕೊಟ್ರೇಶ. ಅಂಬೇಡ್ಕರ್ ಸಂಘದ ಲೋಕಪ್ಪ, ಬೆಣ್ಣಿಕಲ್ಲು ಪ್ರಕಾಶ್, ಉಲುವತ್ತಿ ಓಮೇಶ, ಉಪ್ಪಾರಗಟ್ಟಿ ಬುಳ್ಳಪ್ಪ, ಹರೇಗೊಂಡನಹಳ್ಳಿ ದುರುಗಪ್ಪ,

ಹೊಸ್ಕೇರಿ ಚಾರೆಪ್ಪ, ದಶಮಾಪುರ ಮರಿಯಪ್ಪ, ಮಾಲವಿಭೀಮಪ್ಪ, ಉಲುವತ್ತಿ ಬುಳ್ಳಪ್ಪ, ನೆಲ್ಕುದ್ರಿ ಸಂಗಪ್ಪ, ಬೆಣ್ಣಿಕಲ್ಲು ಬಸವರಾಜ ಇತರರಿದ್ದರು..

## ಮಾನವೀಯತೆಗಾಗಿ ಯೋಗ: ಡಾ.ಚಂದ್ರಶೇಖರ್



ಮಲ್ಲಮ್ಮ ನುಡಿ ವಾರ್ತೆ

ಕೋಲಾರ,ಜೂ.25–ಬಂಗಾರಪೇಟೆ ತಾಲ್ಲೂಕಿನ ಹಂಚಾಳಗೇಟ್ ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಸಮೂಹ ವಿದ್ಯಾ ಸಂಸ್ಥೆಗಳ ಸಂಯಕ್ತ ಆಶ್ರಯದಲ್ಲಿ ಜೂ21 ರಂದು ಏರ್ಪಡಿಸಿದ್ದ ಅಂತರ ರಾಷ್ಟ್ರೀಯ ಯೋಗ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದ ಸಂಸ್ಥೆಯ ಅಧ್ಯಕ್ಷರಾದ ಡಾ: ಎಂ.ಚಂದ್ರಶೇಖರ್, ಡಿಲಿಟ್., ರವರು ಇಂದು ಯೋಗ ದಿನಾಚರಣೆಯನ್ನು ವಿಶ್ವದ ಬಹುತೇಕ ರಾಷ್ಟ್ರಗಳಲ್ಲಿ ಆಚರಿಸಲಾಗುತ್ತಿದೆ. ಇದು ಭಾರತದ ಕೊಡುಗೆ ಎಂದು ಹೆಮ್ಮೆಯಿಂದ ಹೇಳಿಕೊಳ್ಳಬಹುದು ಯೋಗವು ಭಾರತೀಯ ಮೂಲದ ಹಾಗೂ 6 ಸಾವಿರ ವರ್ಷಕ್ಕಿಂತ ಹಳೆಯದಾದ ಭೌತಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಅಭ್ಯಾಸವಾಗಿದೆ.

ಕ್ರಿ.ಸ್ತಪೂರ್ವ 3ನೇ ಶತಮಾನದಲ್ಲಿದ್ದ ಪತಂಜಲಿ ಋಷಿಯ ಚಿಂತನೆಯ ಫಲವಾದ ಯೋಗ ಬರೀ ಶಾಸ್ತ್ರವಾಗದೆ ಆಚರಣೆ, ಅಭ್ಯಾಸವಾಗಿ ಇಲ್ಲಿಯ ತನಕ ಬೆಳೆದು ಬಂದಿದೆ. ಪ್ರತಿ ವ್ಯಕ್ತಿಯ ದೈಹಿಕ, ಮಾನಸಿಕ, ಭಾವನಾತ್ಮಕ ಮತ್ತು ಆಧ್ಯಾತ್ಮಿಕ ಉನ್ನತಿಗೆ ಯೋಗವು ಸಹಕಾರಿಯಾಗಿದೆ. ಯೋಗವು ಮನಸ್ಸು ಮತ್ತು ದೇಹವನ್ನು ಒಗ್ಗೂಡಿಸುತ್ತದೆ. ಹಾಗೂ ಮನುಷ್ಯ ಮತ್ತು ಪ್ರಕೃತಿಯ ನಡುವೆ ಸಾಮರಸ್ಯವನ್ನು ಉಂಟು ಮಾಡುತ್ತದೆ. ಯೋಗವು ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಉತ್ತಮವಾಗಿಸುವ ವಿಶೇಷ ಕಲೆಯಾಗಿದೆ.

ಅಂತರ ರಾಷ್ಟ್ರೀಯ ಯೋಗ ದಿನಾಚರಣೆಯನ್ನು ಆಚರಿಸಬೇಕೆಂದು ಇದರ ಪ್ರಸ್ತಾವನೆಯನ್ನು 2014 ರ ಡಿಸೆಂಬರ್‌ನಲ್ಲಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಭಾರತದ ಪ್ರತಿನಿಧಿಯಾಗಿರುವ ಅಶೋಕ್‌ಕುಮಾರ್ ಮಂಡಿಸಿದ್ದರು. ಇದಕ್ಕೆ ವಿಶ್ವಸಂಸ್ಥೆಯ 177 ದೇಶಗಳು ಯೋಗ ದಿನಾಚರಣೆಗೆ ಅನುಮೋದನೆಯನ್ನು ನೀಡಿದವು. ಇದರ ಫಲವಾಗಿ 2015 ಜೂನ್ 21 ರಂದು ಮೊದಲ ಅಂತರ ರಾಷ್ಟ್ರೀಯ ಯೋಗ ದಿನವನ್ನು ವಿಶ್ವದಾದ್ಯಂತ ಆಚರಿಸಲಾಯಿತು. ಜೂನ್ 21 ಯೋಗ ದಿನಾಚರಣೆಯನ್ನು ಆಚರಿಸಲು ಕಾರಣವೇನೆಂದರೆ ಜೂನ್ 21 ದೀರ್ಘಕಾಲ ಹಗಲು ಹೊಂದಿರುವ ದಿನ.

ಸುಮಾರು 2000 ವಿದ್ಯಾರ್ಥಿಗಳಿಂದ ಶಾಲಾ ಮೈದಾನದಲ್ಲಿ ಸಾಮೂಹಿಕವಾಗಿ ಯೋಗಾಭ್ಯಾಸವನ್ನು ಮಾಡಿಸಲಾಯಿತು. ಮಾನವೀಯತೆಗಾಗಿ ಯೋಗ ಮಾಡಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡುವುದರ ಮುಖಾಂತರ ಅರಿವು ಮೂಡಿಸಿದರು.

ಕಾರ್ಯಕ್ರಮದಲ್ಲಿ ಶಾಲಾಭಿವೃದ್ಧಿ ಸಮಿತಿಯ ಪದಾಧಿಕಾರಿಗಳು, ಆಡಳಿತಾಧಿಕಾರಿಗಳಾದ ಎಸ್.ಲಕ್ಷ್ಮೀನಾರಾಯಣ ರೆಡ್ಡಿ, ಮುಖ್ಯೋಪಾಧ್ಯಾಯರುಗಳು, ಪ್ರಾಂಶುಪಾಲರುಗಳು, ಸಿಬ್ಬಂದಿವರ್ಗ ಉಪಸ್ಥಿತರಿದ್ದರು, ಶಿಕ್ಷಕರಾದ ಎಂ.ಪಾಪಣ್ಣ ಸ್ವಾಗತಿಸಿ, ನಿರೂಪಿಸಿದರು.

## ಮರಕ್ಕೆ ಅಪ್ಪಳಿಸಿ ರಸ್ತೆ ವಿಭಜಕ ಹತ್ತಿ ನಿಂತ ಲಾರಿ, ತಪ್ಪಿದ ಅನಾಹುತ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಜೂ.25– ಬೆಳ್ಳಂಬೆಳಗ್ಗೆ ದೊಡ್ಡ ಲಾರಿಯೊಂದು ನಿಯಂತ್ರಣ ತಪ್ಪಿ ರಸ್ತೆ ಬದಿಯ ಮರಕ್ಕೆ ಅಪ್ಪಳಿಸಿ, ರಸ್ತೆ ವಿಭಜಕ ಹತ್ತಿ ನಿಂತಿದ್ದು, ಭಾರೀ ಅನಾಹುತವೊಂದು ತಪ್ಪಿದಂತಾಗಿದೆ.

ಜ್ಞಾನಭಾರತಿ ಕಡೆಯಿಂದ ಕೆಂಗೇರಿ ಕಡೆಗೆ ವಿದ್ಯುತ್ ಕಂಬಗಳನ್ನು ಲೋಡ್ ಮಾಡಿಕೊಂಡು ದೊಡ್ಡ ಲಾರಿಯೊಂದು ಬೆಳಗ್ಗೆ 6.30 ರ ಸುಮಾರಿನಲ್ಲಿ ಹೋಗುತ್ತಿತ್ತು.

ಈ ಲಾರಿ ಶಿರ್ಕೆ ಸರ್ಕಲ್ ಬಳಿ ಬರುತ್ತಿದ್ದಂತೆ ಅತಿ ವೇಗದಿಂದಾಗಿ ನಿಯಂತ್ರಣ ತಪ್ಪಿ ರಸ್ತೆ ಬದಿಯ ಮರಕ್ಕೆ ಅಪ್ಪಳಿಸಿ ರಸ್ತೆ ವಿಭಜಕ ಹತ್ತಿ ನಿಂತಿದ್ದು, ಕ್ಲೀನರ್ ಗಾಯಗೊಂಡಿದ್ದಾನೆ.

ಈ ರಸ್ತೆಯಲ್ಲಿ ಕೆಲ ಕಾಲ ವಾಹನಗಳ ಸಂಚಾರದಲ್ಲಿ ಅಸ್ತವ್ಯಸ್ತ ಉಂಟಾಯಿತು.

ಸುದ್ದಿ ತಿಳಿದ ತಕ್ಷಣ ಜ್ಞಾನಭಾರತಿ ಸಂಚಾರಿ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ, ಪರಿಶೀಲಿಸಿ ಗಾಯಗೊಂಡಿದ್ದ ಕ್ಲೀನರ್‌ನನ್ನು ಖಾಸಗಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಿದ್ದಾರೆ.ನಂತರ ಸಂಚಾರಿ ಪೊಲೀಸರು ಕ್ರೇನ್ ಅನ್ನು ಸ್ಥಳಕ್ಕೆ ಕರೆಸಿಕೊಂಡು ಲಾರಿಯನ್ನು ತೆರವುಗೊಳಿಸುವುದರ ಮೂಲಕ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟರು.ಲಾರಿ ಚಾಲಕನ ಅತಿ ವೇಗ ಹಾಗೂ ಅಜಾಗರೂಕತೆ–ಯೇ ಅಪಘಾತಕ್ಕೆ ಕಾರಣ ಎಂದು ಸಂಚಾರಿ ಪೊಲೀಸರು ತಿಳಿಸಿದ್ದಾರೆ.

## ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ ಸೈನಿಕನಿಗೂ ಸದ್ಗತಿ ಪ್ರಾಪ್ತವಾಗುತ್ತದೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರ್ಗಿ : ಜೂ.25–:ರಾಷ್ಟ್ರ ರಕ್ಷಣೆಯ ಉನ್ನತ ಕೈಂಕರ್ಯವನ್ನು ಹೆಗಲಿಗೇರಿಸಿಕೊಂಡು ಯುದ್ಧಭೂಮಿಯಲ್ಲಿ ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ ಸೈನಿಕನಿಗೂ ಸದ್ಗತಿ ಪ್ರಾಪ್ತವಾಗುತ್ತದೆ ಎಂದು ಕಾಶಿ ಜ್ಞಾನ ಪೀಠದ ಶ್ರೀಜಗದ್ಗುರು ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು ನುಡಿದರು.

ಅವರು ಮಹಾರಾಷ್ಟ್ರದ ಲಾತೂರ ನಗರದಲ್ಲಿ ರವಿವಾರ ಹಮ್ಮಿಕೊಂಡಿದ್ದ ವಿಶೇಷ ಸಮಾರಂಭದಲ್ಲಿ ಕಾಶಿಯ ಶ್ರೀಜಗದ್ಗುರು ವಿಶ್ವಾರಾಧ್ಯ ಜ್ಞಾನಸಿಂಹಾಸನ ಮಹಾಪೀಠದಿಂದ ಕೊಡಮಾಡುವ ಪ್ರತಿಷ್ಠಿತ ಶ್ರೀಮತಿ ಮಾಲತಿ ಮಹಾರುದ್ರಪ್ಪಾ ಖೇಣಿ ಮಾತೃಶಕ್ತಿ ರಾಷ್ಟ್ರೀಯ ಪುರಸ್ಕಾರಗಳನ್ನು ಪ್ರದಾನ ಮಾಡಿ ಮಾತನಾಡುತ್ತಿದ್ದರು. ಯೋಗಿಯು ತನ್ನ ಯೋಗ ಸಾಧನೆಯಿಂದ ಶಾಶ್ವತ ಸದ್ಗತಿ ಪಡೆದುಕೊಳ್ಳುತ್ತಾನೆ. ತನ್ನ ಖಾಸಗಿ ಬದುಕನ್ನು ಕಳೆದುಕೊಂಡು, ಬಂಧು ಬಾಂಧವರ ಮೋಹವನ್ನು ತ್ಯಜಿಸಿ ಮುಕ್ತ ಮನಸ್ಥಿತಿಯ ತನ್ನೆದೆಯ ಗೂಡಿನಲ್ಲಿ ದೇಶಪ್ರೇಮವನ್ನು ತುಂಬಿಕೊಂಡು ವೈರಿ ರಾಷ್ಟ್ರಗಳ ಸೈನಿಕರೊಂದಿಗೆ ಹೋರಾಟಕ್ಕಿಳಿದು ಹುತಾತ್ಮರಾಗುವ ಎಲ್ಲ ಸೈನಿಕ ಬಂಧುಗಳಿಗೂ ಭಗವಂತನು ಮೋಕ್ಷವನ್ನು ಕರುಣಿಸುತ್ತಾನೆ ಎಂದರು. ಸಮಾಜ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಸಹಸ್ರಾರು ಭಕ್ತರು ಪಾಲ್ಗೊಂಡಿದ್ದರು.

# ಜೆಸ್ಕಾಂ ಗ್ರಾಮೀಣ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 25–ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ವಡವಟ್ಟಿ ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಜೂನ್ 26ರ ಬೆಳಗ್ಗೆ 09 ಗಂಟೆಯಿಂದ ಸಾಯಂಕಾಲ 04 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ತರಬೇತಿಗೆ ಅರ್ಜಿ

ರಾಯಚೂರು ಜೂನ್ 24 (ಕರ್ನಾಟಕ ವಾರ್ತೆ): ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಖೇಲೋ ಇಂಡಿಯಾ ಯೋಜನೆಯಡಿ ಸಣ್ಣ ಖೇಲೋ ಇಂಡಿಯಾ ಕೇಂದ್ರಗಳನ್ನು ಪ್ರಾರಂಭಿಸಲು ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿದ್ದು, ಉತ್ತಮ ಕ್ರೀಡಾಪಟುಗಳನ್ನು ಆಯ್ಕೆ ಮಾಡಿ ಒಂದು ವರ್ಷದ ಅವಧಿಗೆ ತರಬೇತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಖೇಲೋ ಇಂಡಿಯಾ ಯೋಜನೆಯಡಿ ಅಥ್ಲೆಟಿಕ್ ಕ್ರೀಡಾಪಟುಗಳ ಆಯ್ಕೆ ಪ್ರಕ್ರಿಯೆ ನಡೆಸಲಾಗುತ್ತಿದ್ದು, ಜಿಲ್ಲೆಯ ಆಸಕ್ತ 12 ರಿಂದ 18 ವರ್ಷದ ಬಾಲಕ ಬಾಲಕಿಯರು ತಮ್ಮ ಜನ್ಮ ದಿನಾಂಕ ದೃಢೀಕರಣ ಪತ್ರ (ಶಾಲೆ ಅಥವಾ ಕಾಲೇಜು ಮುಖ್ಯಸ್ಥರಿಂದ ದೃಢೀಕೃತ) ಹಾಗೂ ಕ್ರೀಡಾ ಸಾಧನೆಯ ಪ್ರಶಸ್ತಿ ಪತ್ರದೊಂದಿಗೆ ಜೂನ್ 26ರ ಬೆಳಿಗ್ಗೆ 10 ಗಂಟೆಗೆ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣ ರಾಯಚೂರು ಇಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಆಯ್ಕೆ ಪ್ರಕ್ರಿಯೆಗೆ ಕ್ರೀಡಾ ಸಮವಸ್ತ್ರದೊಂದಿಗೆ ಭಾಗವಹಿಸಬೇಕಾಗಿದ್ದು, ಅಥ್ಲೆಟಿಕ್ ಕ್ರೀಡೆಯ ಟ್ರಾಯಕ್ ಮತ್ತು ಫೀಲ್ಡ್ ಇವೆಂಟ್ಸಗಳಲ್ಲಿ ಆಯ್ಕೆ ಮಾಡಲಾಗುತ್ತದೆ. ಇತ್ತೀಚಿನ 02 ಭಾವಚಿತ್ರದೊಂದಿಗೆ ಸ್ವ–ವಿವರದ ಅರ್ಜಿಯನ್ನು ಆಯ್ಕೆ ಸಂದರ್ಭದಲ್ಲಿ ಸಲ್ಲಿಸಬೇಕು. ಆಯ್ಕೆ ಸಂದರ್ಭದಲ್ಲಿ ಯಾವುದೇ ಗಾಯಗಳು ಅನಾರೋಗ್ಯ ಯಾವುದೇ ಇತರೆ ಸಾವು ನೋವುಗಳು ಶಾಶ್ವತ ಅಂಗವೈಕಲ್ಯ ಮತ್ತು ಜೀವಹಾನಿ ಸಂಭವಿಸಿದರೆ ಸಂಸ್ಥೆ ಅಥವಾ ಇಲಾಖೆ ಜವಾಬ್ದಾರಿಯುತವಾಗಿರುವುದಿಲ್ಲ. ಹಾಗೂ ಆಯ್ಕೆಗೆ ಹಾಜರಾಗುವ ಕ್ರೀಡಾಪಟುಗಳಿಗೆ ಯಾವುದೇ ರೀತಿಯ ದಿನ ಭತ್ಯೆ ಅಥವಾ ಪ್ರಯಾಣ ಭತ್ಯೆ ನೀಡಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣ ರಾಯಚೂರು ಕಚೇರಿ ಅಥವಾ ಖೇಲೋ ಇಂಡಿಯಾ ತರಬೇತುದಾರರಾದ ಚಂದ್ರಶೇಖರ್ ಮೊಬೈಲ್ ಸಂಖ್ಯೆ: 9886551214ಗೆ ಸಂಪರ್ಕಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಕ್ಕಿ ಬಾಲ್ ಕ್ರಿಕೆಟ್ ಟೂರ್ನಮೆಂಟ್ಗೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಕೋಲಾರ,ಜೂ,25–ಕ್ರೀಡೆಗಳು ಗ್ರಾಮೀಣ ಪ್ರದೇಶದಲ್ಲಿ ಸೌಹಾರ್ದತೆ ಮೂಡಿಸಲು ಸಹಕಾರಿಯಾಗಿದ್ದು, ಆ.15 ರಂದು ತಮ್ಮ ಸ್ವಗ್ರಾಮವಾದ ಕೋರಗೊಂಡಹಳ್ಳಿಯಲ್ಲಿ ಹಮ್ಮಿಕೊಂಡಿರುವ ಕ್ರಿಕೆಟ್ ಪಂದ್ಯದಲ್ಲಿ ಗೆದ್ದ ತಂಡಕ್ಕೆ ಪ್ರಥಮ ಬಹುಮಾನವಾಗಿ 1 ಲಕ್ಷ ಹಾಗೂ ದ್ವಿತೀಯ ಸ್ಥಾನ ಪಡೆದ ತಂಡಕ್ಕೆ 50 ಸಾವಿರ ನೀಡುವುದಾಗಿ ಎಂದು ಬೆಂಗಳೂರು ಪೂರ್ವ ವಲಯ ಡಿಸಿಪಿ ದೇವರಾಜ್ ಘೋಷಿಸಿದರು.

ತಾಲ್ಲೂಕಿನ ಅರಾಭಿಕೊತ್ತನೂರು ಗ್ರಾಮದಲ್ಲಿ ಗ್ರಾಮದ ಯುವಕರ ಬಳಗದಿಂದ ಹಮ್ಮಿಕೊಂಡಿದ್ದ ಹಾಗೂ 40 ತಂಡಗಳು ಪಾಲ್ಗೊಂಡಿದ್ದ 'ವಿಕ್ಕಿ ಬಾಲ್ ಕ್ರಿಕೆಟ್ ಟೂರ್ನಮೆಂಟ್ಗೆ ಚಾಲನೆ ನೀಡಿ ಅವರು ಮಾತನಾಡುತ್ತಿದ್ದರು

ಕ್ರೀಡೆಗಳು ಗ್ರಾಮೀಣ ಪ್ರದೇಶದಲ್ಲಿ ಸೌಹಾರ್ದತೆ ಮೂಡಿಸುವುದರ ಜತೆಗೆ ಯುವಕರು ದುಶ್ಚಟಗಳಿಂದ ದೂರವಾಗಿ ಆರೋಗ್ಯವಂತರಾಗಲು ಸಹಕಾರಿಯಾಗಿದೆ ಎಂದ ಅವರು, ತಮ್ಮ ಸ್ವಗ್ರಾಮವಾದ ಕೋರಗೊಂಡಹಳ್ಳಿಯಲ್ಲೇ ನಿರ್ಮಿಸಿರುವ ಸುಸಜ್ಜಿತ ಕ್ರಿಕೆಟ್ ಕ್ರೀಡಾಂಗಣದಲ್ಲಿ ಆ.15 ರಂದು ನಡೆಯುವ ಪಂದ್ಯಗಲ್ಲಿ ವಿಜೇತ ತಂಡಕ್ಕೆ 1 ಲಕ್ಷ ಪ್ರಥಮ ಬಹುಮಾನ ನೀಡುವ ಮೂಲಕ ಕ್ರೀಡೆಗಳನ್ನು ಪ್ರೋತ್ಸಾಹಿಸಲು ನಿರ್ಧರಿಸಲಾಗಿದೆ ಎಂದರು.

ಕ್ರೀಡೆಗಳಿಂದ ಉತ್ತಮ ಆರೋಗ್ಯದ ಜತೆಗೆ ಕ್ರಿಯಾಶೀಲತೆ ನಿಮ್ಮದಾಗಲಿದ್ದು, ಆಟೋಟಗಳಿಗೆ ಆದ್ಯತೆ ನೀಡಿದರೆ ಜೀವನದಲ್ಲಿ ಶಿಸ್ತು ಕಲಿಸುವುದರ ಜತೆಗೆ ಸಮಾಜದಲ್ಲಿ ವ್ಯಕ್ತಿತ್ವ ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿ ಯುವಜನತೆ ಕ್ರೀಡೆಗಳಿಂದ ದೂರವಾಗುತ್ತಿದ್ದಾರೆ ಎಂದು ವಿಷಾದಿಸಿದ ಅವರು, ಇದಕ್ಕೆ ಶಾಲೆ ಹಂತದಲ್ಲಿ ಮಕ್ಕಳನ್ನು ಪಠ್ಯಕ್ಕೆ ಸೀಮಿತಗೊಳಿಸುವ ಪೋಷಕರ ಮನಸ್ಥಿತಿಯೇ ಕಾರಣ ಎಂದು ತಿಳಿಸಿ, ಉತ್ತಮ ಅಂಕಗಳ ನಿರೀಕ್ಷೆಯಲ್ಲಿ ಕ್ರೀಡೆಗಳಿಗೆ ಪ್ರೋತ್ಸಾಹ ನೀಡುವುದನ್ನು ಮರೆಯಬಾರದು ಎಂದರು.

ಶಾರೀರಿಕ, ಮಾನಸಿಕ ಆರೋಗ್ಯದ ಜತೆಗೆ ಜೀವನದಲ್ಲಿ ಶಿಸ್ತು ಮೂಡಲು ಕ್ರೀಡೆಗಳು ಶಿಕ್ಷಣದ ಅಭಿಭಾಜ್ಯ ಭಾಗವಾಗಿದೆ ಎಂದ ಅವರು, ಕ್ರೀಡಾಸ್ಪೂರ್ತಿಯಿಂದ ಪಾಲ್ಗೊಳ್ಳಿ, ಕ್ರೀಡೆಯಲ್ಲಿ ಮಾತ್ರ ಎಲ್ಲರೂ ಭಾಗವಹಿಸಲು ಅವಕಾಶವಿದೆ, ಗೆಲುವು ಒಬ್ಬರಿಗೆ ಸಿಕ್ಕರೂ ಅದ–ರಿಂದ ವಿಚಲಿತರಾಗದೇ ಉಳಿದವರು ಅಭ್ಯಾಸ ಮುಂದುವರೆಸಿ ಎಂದು ತಿಳಿಸಿದರು.


ಉತ್ತಮ ಪ್ರದರ್ಶನ ನೀಡುವುದು ಮುಖ್ಯ, ಆ ಮೂಲಕ ಕ್ರೀಡಾ ಮನೋಭಾವ ತೋರಬೇಕು ಎಂದ ಅವರು, ಸೋಲು–ಗೆಲುವು ಸಮನಾಗಿ ಸ್ವೀಕರಿಸಿ ಸೋತವರು ಮುಂದಿನ ಹೋರಾಟಕ್ಕೆ ಸಜ್ಜುಗೊಂಡು ಗೆಲ್ಲುವ ನಿರೀಕ್ಷೆಯೊಂದಿಗೆ ಅಭ್ಯಾಸ ಮುಂದುವರೆಸಬೇಕು ಅದು ಬಿಟ್ಟು ದ್ವೇಷ, ಅಸೂಯೆ ಬೆಳೆಸಿಕೊಳ್ಳಬಾರದು ಎಂದು ಸಲಹೆ ನೀಡಿದರು.

ಕ್ರೀಡೆಗಳ ಕುರಿತ ನಿರಾಸಕ್ತಿ ಸರಿಯಲ್ಲ ಎಂದ ಅವರು, ಇತ್ತೀಚಿನ ಬದಲಾದ ಆಹಾರ ಪದ್ಧತಿಯಿಂದಾಗಿ ಅನೇಕ ಆರೋಗ್ಯ ಸಮಸ್ಯೆಗಳು ಕಾಡುತ್ತಿದ್ದು, ಇದರಿಂದ ಮುಕ್ತರಾಗಲು ಕ್ರೀಡೆಗಳ ಅಗತ್ಯವಿದೆ ಎಂದು ತಿಳಿಸಿ, ರಾಜ್ಯ, ರಾಷ್ಟ್ರಮಟ್ಟದಲ್ಲೂ ಉತ್ತಮ ಸಾಧನೆ ಮಾಡಿ ಹೆಸರು ಗಳಿಸಲು ಸಹಕಾರಿಯಾಗಿದ್ದು, ಕ್ರೀಡಾಸ್ಪೂರ್ತಿಯಿಂದ ಭಾಗವಹಿಸಿ ಎಂದು ಕೋರಿದರು.

ಕ್ರೀಡಾಕೂಟದಲ್ಲಿ 40 ತಂಡಗಳು ಪಾಲ್ಗೊಂಡಿದ್ದು, ಫೈನಲ್ ಪಂದ್ಯ ಇದೇ ಜೂ.29 ರಂದು ಅರಾಭಿಕೊತ್ತನೂರು ಗ್ರಾಮದಲ್ಲಿ ನಡೆಯಲಿದೆ ಎಂದು ಗ್ರಾಮದ ಯುವಕರ ಬಳಗದ ಸದಸ್ಯರು ತಿಳಿಸಿ ಇಂದಿನ ಪಂದ್ಯಾವಳಿಗೆ ನರಸಾಪುರದ ಹೆಚ್‌ಎಂಎನ್ ಮಂಜು ಅವರು ಊಟದ ವ್ಯವಸ್ಥೆ ಕಲ್ಪಿಸಿದ್ದಾರೆ ಎಂದರು. ಇದೇ ಸಂದರ್ಭದಲ್ಲಿ ಡಿಸಿಪಿ ದೇವರಾಜ್‌ರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಅರಾಭಿಕೊತ್ತನೂರು ಯುವಕರ ಗಳಗದ ಸದಸ್ಯರು, ಕೋಲಾರದ ಆರ್‌ಆರ್ ಸ್ಪೋರ್ಟ್ಸ್‌ನ ನಾಗೇಶ್, ಗ್ರಾಮ ಪಂಚಾಯಿತಿ ಅಧ್ಯಕ್ಷೆ ರೇಣುಕಾಂಭ, ಮುನಿರಾಜು, ಮಾಜಿ ಸದಸ್ಯ ಎ.ಶ್ರೀಧರ್, ಹಾಲಿ ಸದಸ್ಯ ನಾಗರಾಜ್, ಮುಖಂಡರಾದ ಜಯರಾಮೇಗೌಡ, ಎ.ನಾರಾಯಣಪ್ಪ, ರಾಮಕೃಷ್ಣಪ್ಪ, ಎನ್. ವೆಂಕಟೇಶಪ್ಪ, ಕಿಶೋರ್ ಗೌಡ, ಶಶಾಂಕ್, ಮಧು, ಪ್ರತಾಪ್ ಆಚಾರಿ ಸೇರಿದಂತೆ ಗ್ರಾಮದ ಮುಖಂಡರು, ಬಳಗದ ಪದಾಧಿಕಾರಿಗಳು ಹಾಗೂ 40 ತಂಡಗಳ ಸದಸ್ಯರು ಹಾಜರಿದ್ದರು.

# 3 ವರ್ಷಗಳಲ್ಲಿ 5 ಟ್ರಿಲಿಯನ್ ಆರ್ಥಿಕ ಗುರಿ ನಿರೀಕ್ಷೆ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ,ಜೂ.25–ಮುಂದಿನ ಎರಡು ವರ್ಷಗಳಲ್ಲಿ ಭಾರತ, ಜಗತ್ತಿನ ಮೂರನೇ ಅತಿದೊಡ್ಡ ಆರ್ಥಿಕ ದೇಶವಾಗುವ ಜೊತೆಗೆ ಮುಂದಿನ ಮೂರು ವರ್ಷಗಳಲ್ಲಿ 5 ಟ್ರಿಲಿಯನ್ ಡಾಲರ್ ಆರ್ಥಿಕತೆ ಗುರಿ ಸಾಧಿಸುವ ನಿರೀಕ್ಷೆ ಇದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ.

"2027 ರ ಹೊತ್ತಿಗೆ, ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯ ದೇಶವಾಗುವತ್ತ ಭಾರತ ಹೆಜ್ಜೆ ಇಟ್ಟಿದೆ. ಜೊತೆಗೆ 2028ರ ವೇಳೆಗೆ 5 ಟ್ರಿಲಿಯನ್ ಡಾಲರ್ ಆರ್ಥಿಕತೆ ಸಾಧನೆ ನಮ್ಮ ಉದ್ದೇಶ" ಎಂದು ಮಾಹಿತಿ ನೀಡಿದ್ದಾರೆ.

ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿ ವೆಬಿನಾರ್‌ನಲ್ಲಿ ಪಾಲ್ಗೊಂಡು ಮಾತನಾಡಿದ ಅವರು 2047ರ ವೇಳೆಗೆ ವಿಕಸಿತ ಗುರಿ ಸಾಧನೆ ಉದ್ದೇಶ ನಮ್ಮದು ಈ ನಿಟ್ಟಿನಲ್ಲಿ ಪ್ರಯತ್ನ ಸಾಗಿದೆ ಎಂದು ಹೇಳಿದ್ದಾರೆ.

ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾರತದ ಸ್ಥಾನಮಾನ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಭಾರತೀಯ ಪಾಸ್‌ಪೋರ್ಟ್ ಸುರಕ್ಷತೆ ಮತ್ತು ಭದ್ರತೆ ಖಾತರಿ ಪಡಿಸಲಾಗಿದೆ. ವಿದೇಶದಲ್ಲಿರುವ ಭಾರತೀಯ ನಾಗರಿಕರ ಸುರಕ್ಷತೆಗೆ ಕೇಂದ್ರ ಸರ್ಕಾರದ ಬದ್ಧತೆಯಾಗಿದ್ದು ಅದರ ಪರಿಣಾಮವಾಗಿ ಆಪರೇಷನ್ ಸಿಂಧು ಮೂಲಕ ಸುರಕ್ಷಿತವಾಗಿ ಭಾರತಿಯರನ್ನು ತಾಯ್ನಾಡಿಗೆ ಕರೆತರುವ ಕೆಲಸ ಮಾಡಲಾಗುತ್ತಿದೆ ಎಂದಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಪ್ರಗತಿಯ ಕಡೆಗೆ ಹೆಚ್ಚು ಆದ್ಯತೆ ನೀಡಿದೆ. ಜೊತೆಗೆ ಅಭಿವೃದ್ಧಿಯ ಜೊತೆ ಜೊತೆಗೆ ಸಮಗ್ರ, ಸುಸ್ಥಿರ, ಪ್ರಾಮಾಣಿಕ ಬೆಳವಣಿಗೆಯ ಮೇಲೆಯೂ ಗಮನಹರಿಸಿದೆ ಎಂದು ತಿಳಿಸಿದ್ದಾರೆ.

ಕಳೆದ ದಶಕದಲ್ಲಿ ಭಾರತ ದುರ್ಬಲವಾದ ಐದು ಆರ್ಥಿಕತೆ ದೇಶದಿಂದ ವಿಶ್ವದ ಅಗ್ರ ಐದು ಆರ್ಥಿಕತೆಗಳಲ್ಲಿ ಒಂದಾಗುವತ್ತ ಸಾಗಿದೆ, ಶೀಘ್ರದಲ್ಲಿಯೇ ಮೂರನೇ ಅತಿದೊಡ್ಡ ಆರ್ಥಿಕ ದೇಶವಾಗಲಿದೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಎಲ್ಲಾ ಪ್ರಯತ್ನ ಸಾಗಿದೆ ಎಂದಿದ್ದಾರೆ

ಬ್ಯಾಂಕಿಂಗ್ ವ್ಯವಸ್ಥೆ ಬಲಿಷ್ಠವಾಗಿದೆ. ಸಾಲ ನೀಡುವ ಸಾಮರ್ಥ್ಯ ಹೆಚ್ಚಾಗಿದೆ. ಹಣದುಬ್ಬರ ಭಾರತ ಇದುವರೆಗೆ ಕಂಡ ಅತ್ಯಂತ ಕಡಿಮೆ ಮಟ್ಟಗಳಲ್ಲಿ ಒಂದಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಸಮರ್ಥ ನಾಯಕತ್ವದಲ್ಲಿ ಭಾರತ ಅಭಿವೃದ್ಧಿಯತ್ತ ಮುನ್ನೆಡೆಯುತ್ತಿದೆ ಎಂದು ತಿಳಿಸಿದ್ದಾರೆ

ಕೇಂದ್ರ ಸರ್ಕಾರ ಉತ್ತಮ ಸೇವೆ, ಸುಶಾಸನ ಮತ್ತು ಉತ್ತಮ ಆಡಳಿತ ಮತ್ತು ನಾವೀನ್ಯತೆಯಲ್ಲಿ ನಂಬಿಕೆ ಇಟ್ಟಿದೆ. ಅಮೃತ ಕಾಲದಲ್ಲಿ ನವ ಭಾರತ ನಿರ್ಮಾಣ ಮಾಡುವ ದೊಡ್ಡ ಗುರಿ ಹೊಂದಿದೆ ಎಂದು ಹೇಳಿದ್ದಾರೆ.

# ವಿಹೆಚ್ ಪಿ ಜಿಲ್ಲಾ ಸಮಿತಿಗೆನೂತನ ಪದಾಧಿಕಾರಿಗಳ ನೇಮಕ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಜೂ.23: ವಿಶ್ವ ಹಿಂದೂ ಪರಿಷತ್ ಉತ್ತರ ಕರ್ನಾಟಕ ಟ್ರಸ್ಟ್ ನ ಬಳ್ಳಾರಿ ಜಿಲ್ಲಾ ಸಮಿತಿಗೆ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ.

ವಿಶ್ವ ಹಿಂದೂ ಪರಿಷತ್ ಪ್ರಾಂತ ಸಹಕಾರ್ಯದರ್ಶಿ ವಿನಾಯಕ್ ತಲಿಗೇರಿ, ಪ್ರಾಂತ ಮಾತೃ ಶಕ್ತಿ ಪ್ರಮುಖ್ ಮೀರಾ ರಘು ಪ್ರಸಾದ್ ಹಾಗೂ ಬಳ್ಳಾರಿ ವಿಭಾಗ ಕಾರ್ಯದರ್ಶಿ ಕೆ ಅಶೋಕ್ ಉಪಸ್ಥಿತಿಯಲ್ಲಿ ಜಿಲ್ಲಾ ಸಮಿತಿಯನ್ನು ಪುನರ್ ರಚಿಸಲಾಗಿದೆ.

ಕಾರ್ಯದರ್ಶಿಯಾಗಿ ಚಾನಾಳ್ ವಿಷ್ಣುವರ್ಧನ್ ರೆಡ್ಡಿ, ಸಹ ಕಾರ್ಯದರ್ಶಿಯಾಗಿ ಪತಂಗೀಶಂಕರ್, ಕೋಶಧ್ಯಕ್ಷರಾಗಿ ಕೆ. ವೀರೇಶ್, ಬಜರಂಗದಳ ಸಂಯೋಜ–ಕರಾಗಿ ವಿನೋದ್ ಬಾಗಡೆ, ಸಹ ಸಂಯೋಜಕರಾಗಿ ಗಡಲೆ ಅರುಣ್ ಕುಮಾರ್, ಜಿಲ್ಲಾ ಧರ್ಮ ಪ್ರಸಾರಕರಾಗಿ ವಿ.ಎನ್.ರಾಜ್, ಸೇವಾ ಪ್ರಮುಖರಾಗಿ ಕಿರಣ್ ಕುಮಾರ್. ಎಲ್, ಜಿಲ್ಲಾ ಗೋರಕ್ಷ ಪ್ರಮುಖರಾಗಿ ಹುಲುಗಣ್ಣ ಐ.ಬಿ., ಜಿಲ್ಲಾ ಮಂದಿರ ಅರ್ಚಕ ಪುರೋಹಿತ್ ಸಂಪರ್ಕ ಪ್ರಮುಖ್ ಆಗಿ ಮಹೇಶ್ ಸ್ವಾಮಿ, ಮಾತೃ ಶಕ್ತಿ ಪ್ರಮುಖ್ ಆಗಿ ಆಗಿ ಕೆ.ಕವಿತಾ,

ಸಹ ಪ್ರಮುಖ್ ಆಗಿ ಇಂದಿರಾ ರಾಣಿ, ಮಾತೃ ಶಕ್ತಿ ಸತ್ಸಂಗ್ ಪ್ರಮುಖ್ ಆಗಿ ಸುಗುಣ ವೀಣಾ ಅವರನ್ನು ನೇಮಕ ಮಾಡಲಾಗಿದೆ.

